ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 86 ಸಂಚಿಕೆ- 86 | PAGE- 8 ಪುಟ-8 | ಶನಿವಾರ 10.05.2025 | RS.2/- ಬೆಲೆ 2/-

# ಭಾರತೀಯ ಸೈನಿಕರಿಗಾಗಿ
# ಮಸೀದಿಗಳಲ್ಲಿ ಮುಸ್ಲಿಂರ ವಿಶೇಷ ಪ್ರಾರ್ಥನೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.9: ಭಾರತ ಮತ್ತು ಪಾಕಿಸ್ತಾನ ನಡುವಿನ ಸೇನಾ ಸಂಘರ್ಷದ ಹಿನ್ನೆಲೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳಿಗೆ ಶಕ್ತಿ ತುಂಬಲು ರಾಜ್ಯಾದ್ಯಂತ ಮಸೀದಿಗಳಲ್ಲಿ ಶುಕ್ರವಾರ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ವಕ್ಫ್ ಮಂಡಳಿಯ ವ್ಯಾಪ್ತಿಯಲ್ಲಿರುವ ಮಸೀದಿಗಳು ಮತ್ತಿತರ ಮಸೀದಿಗಳಲ್ಲಿ ಪ್ರಾರ್ಥನೆ ಸಲ್ಲಿಸಲಾಯಿತು.



"ಈ ಕಠಿಣ ಸಮಯದಲ್ಲಿ, ನಾವು ನಮ್ಮ ದೇಶದೊಂದಿಗೆ ನಿಲ್ಲುತ್ತೇವೆ. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಅವರನ್ನು ಬೆಂಬಲಿಸುತ್ತೇವೆ. ಸರ್ಕಾರದ ಜೊತೆ ನಿಲ್ಲುತ್ತೇವೆ. ನಮ್ಮ ಭಾರತೀಯ ಸಶಸ್ತ್ರ ಪಡೆಗಳು, ಅವರ ಕುಟುಂಬಗಳು ಮತ್ತು ಈ ದೇಶದ ಜನರ ಯೋಗಕ್ಷೇಮಕ್ಕಾಗಿ ಇಂದು ರಾಜ್ಯದ ಎಲ್ಲಾ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದ್ದೇವೆ ಎಂದು ಬೆಂಗಳೂರಿನ ಜಾಮಿಯಾ ಮಸೀದಿಯ ಮುಖ್ಯ ಇಮಾಮ್ ಮುಫ್ತಿ ಮೊಹಮ್ಮದ್ ಮಕ್ಸೂನ್ ಇಮ್ರಾನ್ ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

ಪಾಕಿಸ್ತಾನದ ವಿರುದ್ಧದ ಸೇನಾ ಸಂಘರ್ಷದಲ್ಲಿ ಅಲ್ಲಾಹು ಭಾರತೀಯ ಸೇನಾ ಪಡೆಗಳಿಗೆ ಗೆಲುವು ತಂದು-ಕೊಡಲಿ ಎಂದು ಪ್ರಾರ್ಥಿಸಿರುವುದಾಗಿ ಅವರು ತಿಳಿಸಿದರು.

ಪಹಲ್ಗಾಮ್ ಭಯೋತ್ಪಾದನಾ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲು ನಡೆಸಿದ 'ಆಪರೇಷನ್ ಸಿಂದೂರ್'ನಲ್ಲಿ ಭಾಗವಹಿಸಿದ ಭಾರತೀಯ ಸೈನಿಕರ ಯೋಗಕ್ಷೇಮಕ್ಕಾಗಿ ರಾಜ್ಯದಾದ್ಯಂತ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆಗಳನ್ನು ಆಯೋಜಿಸುವಂತೆ ಕರ್ನಾಟಕ ವಕ್ಫ್ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಬಿ ಝಡ್ ಜಮೀರ್ ಅಹ್ಮದ್ ಖಾನ್ ಅವರು ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ನಿನ್ನೆ ಪತ್ರ ಬರೆದಿದ್ದರು. ಅದರಂತೆ ಇಂದು ಪ್ರಾರ್ಥನೆ ಸಲ್ಲಿಸಲಾಗಿದೆ.

ಜಮೀರ್ ಅಹ್ಮದ್ ಖಾನ್ ಕೂಡಾ ನಗರದ ಶೇಷಾದ್ರಿಪುರಂನ ಮಸೀದಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಇತ್ತೀಚೆಗೆ ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಅವರ ಸೂಚನೆ ಮೇರೆಗೆ ರಾಜ್ಯದ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ ಇಲಾಖೆ ಅಧೀನದಲ್ಲಿರುವ ಎಲ್ಲಾ ದೇವಾಲಯಗಳಲ್ಲಿ ಸಶಸ್ತ್ರ ಪಡೆಗಳಿಗಾಗಿ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಿದರು.

## ಸಾಂಬಾದಲ್ಲಿ 7 ಮಂದಿ ಜೈಶ್ ಉಗ್ರರ ಹತ್ಯೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ: ಮೇ.9:ಅಕ್ರಮವಾಗಿ ಭಾರತಕ್ಕೆನುಸುಳುತ್ತಿದ್ದ ಜೈಶ್-ಎ-ಮೊಹಮ್ಮದ್ ಸಂಘಟನೆಯ 7 ಉಗ್ರರನ್ನು ಜಮ್ಮು ಮತ್ತು ಕಾಶ್ಮೀರದ ಸಾಂಭಾದಲ್ಲಿ ಭಾರತದ ಗಡಿಭದ್ರತಾ ಪಡೆ ಹೊಡೆದುರುಳಿಸಿದೆ. ಗುರುವಾರ ಹಲವು ಗಂಟೆಗಳ ಕಾಲ ನಡೆದ ದಾಳಿಯಲ್ಲಿ ಜಮ್ಮು ಮತ್ತು ಕಾಶ್ಮೀರದ ಸಾಂಬಾ ಜಿಲ್ಲೆಯ ಅಂತಾರಾಷ್ಟ್ರೀಯ ಗಡಿಯಲ್ಲಿ ಪ್ರಮುಖ ಒಳನುಸುಳುವಿಕೆ ಪ್ರಯತ್ನವನ್ನು ಬಿಎಸ್‌ಎಫ್ ವಿಫಲಗೊಳಿಸಿದೆ. ಅಂತಾರಾಷ್ಟ್ರೀಯ ಗಡಿಯನ್ನು ಅಕ್ರಮವಾಗಿ ಪ್ರವೇಶಿಸಲು ಯತ್ನಿಸುತ್ತಿದ್ದಾಗ ಬಿಎಸ್‌ಎಫ್ ಯೋಧರು ಗುಂಡಿಕ್ಕಿ ಕೊಂದಿದ್ದಾರೆ ಈ ಮಾಹಿತಿಯನ್ನು ಬಿಎಸ್‌ಎಫ್ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ. ಜಮ್ಮು, ರಾಜಸ್ಥಾನ ಮತ್ತು ಪಂಜಾಬ್‌ನ ಅಮೃತಸರ ಸೇರಿ ಭಾರತದ 15 ನಗರಗಳನ್ನು ಗುರಿಯಾಗಿಸಿ ಪಾಕಿಸ್ತಾನ ಮಿಸೈಲ್, ಡ್ರೋನ್ ದಾಳಿ ನಡೆಸಿತು. ಭಾರತೀಯ ಸೇನೆ ಇದಕ್ಕೆ ತಕ್ಕ ಪ್ರತ್ಯುತ್ತರ ನೀಡಿದೆ. ಪಾಕ್‌ನ ಎಲ್ಲಾ ಮಿಸೈಲ್‌ಗಳನ್ನು ಹೊಡೆದುರುಳಿಸಿದೆ.

## ವಂಚನೆ ಆರೋಪ: ಎನ್‌ಎಸ್‌ಎಸ್‌ಕೆ ಅಧ್ಯಕ್ಷ ಡಿ.ಕೆ. ಸಿದ್ರಾಮ ಬಂಧನ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ.09 : ನಗರದ ಡಿಸಿಸಿ ಬ್ಯಾಂ-ಕಿಗೆ ಸುಳ್ಳು ಮಾಹಿತಿ ಕೊಟ್ಟು, ಸಾರ್ವಜನಿಕರ ಹಣ ವಂಚಿಸಿರುವ ಆರೋಪದಡಿ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ(ಎನ್‌ಎಸ್‌ಎಸ್‌ಕೆ) ಅಧ್ಯಕ್ಷ ಡಿ.ಕೆ. ಸಿದ್ರಾಮ ಅವರನ್ನು ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ. ಜನವಾಡ ಠಾಣೆ ಪೊಲೀಸರು ಶುಕ್ರವಾರ ಬೆಳಿಗ್ಗೆ ಭಾಲ್ಕಿಗೆ ತೆರಳಿ, ಡಿ.ಕೆ.ಸಿದ್ರಾಮ ಅವರನ್ನು ಅವರ ನಿವಾಸದಲ್ಲಿ ವಶಕ್ಕೆ ಪಡೆದರು. ಆನಂತರ ಅವರನ್ನು ಬೀದರ್ ಜಿಲ್ಲಾ ನ್ಯಾಯಾಲಯದ ಎದುರು ಹಾಜರುಪಡಿಸಿದರು. ನ್ಯಾಯಾಲಯವು ಸಿದ್ರಾಮ ಅವರನ್ನು 14 ದಿನಗಳ ಕಾಲ



ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶಿಸಿತು.

ಯಾರ ಯಾರ ವಿರುದ್ಧ ಪ್ರಕರಣ?: ಹಣ ವಂಚನೆಗೆ ಸಂಬಂಧಿಸಿದಂತೆ ಎನ್‌ಎಸ್‌ಎಸ್‌ಕೆ ಅಧ್ಯಕ್ಷ ಡಿ.ಕೆ. ಸಿದ್ರಾಮ, ಮಾಜಿ ವ್ಯವಸ್ಥಾಪಕ ಅಪರಂಜಿ ಬಿ.ಎಸ್., ಡಿಸಿಸಿ ಬ್ಯಾಂಕಿನ ಮಾಜಿ ಸಿಇಒ ಮಹಾಜನ್ ಮಲ್ಲಿಕಾರ್ಜುನ, ಬ್ಯಾಂಕಿನ ಮಾಜಿ ಪ್ರಧಾನ ವ್ಯವಸ್ಥಾಪಕ ಚನ್ನಬಸಯ್ಯ ಸ್ವಾಮಿ, ಬ್ಯಾಂಕಿನ ಉಪ ಪ್ರಧಾನ ವ್ಯವಸ್ಥಾಪಕ ಸದಾಶಿವ ಪಾಟೀಲ, ಇಮಾಮಪುರ ಡಿಸಿಸಿ ಬ್ಯಾಂಕಿನ ಶಾಖೆ ಮಾಜಿ ವ್ಯವಸ್ಥಾಪಕ ಸೈಯದ್ ರಾಹಿಲ್ ಅಹಮ್ಮದ್, ಎನ್‌ಎಸ್‌ಎಸ್‌ಕೆ ಇತರೆ ನಿರ್ದೇಶಕರ ವಿರುದ್ಧ ಜನವಾಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸೇನೆ ಬೆಂಬಲಿಸಿ ಕಾಂಗ್ರೆಸ್‌ನಿಂದ ತಿರಂಗಾ ಯಾತ್ರೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.9: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ ನಡೆಸಿದ ಭಾರತೀಯ ಸಶಸ್ತ್ರಪಡೆಗಳಿಗೆ ಬೆಂಬಲ ಸೂಚಿಸಲು ಕರ್ನಾಟಕದ ಆಡಳಿತಾರೂಢ ಕಾಂಗ್ರೆಸ್ ಶುಕ್ರವಾರ 'ಜೈ ಹಿಂದ್ ತಿರಂಗಾ ಯಾತ್ರೆ'ಯನ್ನು ಆಯೋಜಿಸಿತ್ತು.

'ಜೈ ಹಿಂದ್-ಜೈ ಭಾರತ್-ಜೈ ತಿರಂಗಾ', 'ಭಾರತ ಜಿಂದಾಬಾದ್', 'ಭಾರತ ಮಾತಾ ಕಿ ಜೈ' ಮತ್ತು 'ನಮ್ಮ ಸೈನಿಕರು ನಮ್ಮ ಹೆಮ್ಮೆ' ಎಂಬ ಘೋಷಣೆಗಳ ನಡುವೆ ಭಾರತೀಯ ತ್ರಿವರ್ಣ ಧ್ವಜವನ್ನು ಹಾರಾಡಿಸಲಾಯಿತು.

ಕೆಆರ್ ವೃತ್ತದಿಂದ ಪ್ರಾರಂಭವಾಗಿ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡ ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಹಲವಾರು ಹಿರಿಯ ಸಚಿವರು ಭಾಗವಹಿಸಿದ್ದರು.

ಭಾರತದ ಗಡಿಗಳನ್ನು ಕಾಯುತ್ತಿರುವ ಸೈನಿಕರಿಗೆ ಬೆಂಬಳ ಸೂಚಿಸಲು ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಶಿವಕುಮಾರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಕಾಂಗ್ರೆಸ್ 'ಜೈ ಹಿಂದ್ ತಿರಂಗಾ ಯಾತ್ರೆ'ಯನ್ನು ಆಯೋಜಿಸಿದ್ದು, ವಿದ್ಯಾರ್ಥಿಗಳು, ಸರ್ಕಾರಿ ನೌಕರರು ಮತ್ತು ವಿವಿಧ ಸಂಘಟನೆಗಳು ಮತ್ತು ಸಂಸ್ಥೆಗಳ ಸದಸ್ಯರು ಸೇರಿದಂತೆ ಎಲ್ಲ ವರ್ಗದ ಜನರು ಭಾಗವಹಿಸುವಂತೆ ಕೇಳಲಾಗಿದೆ ಎಂದರು.

'ಸೈನಿಕರು ನಮ್ಮ ರಾಷ್ಟ್ರೀಯ ಹೆಮ್ಮೆ. ನಾವು ಅವರಿಗೆ ನಮನ ಸಲ್ಲಿಸಲು ಬಯಸುತ್ತೇವೆ. ಇಡೀ ದೇಶವು ಅವರ ಹಿಂದೆ ಇದೆ ಎಂದು ತಿಳಿಸಲು ನಾವು ಅವರೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತೇವೆ' ಎಂದು ಹೇಳಿದರು.

## ಭಾರತದ 36 ಕಡೆ 400 ಮಿಸ್ಸೈಲ್‌ನಿಂದ ಪಾಕ್ ದಾಳಿ: ಕರ್ನಲ್ ಸೋಫಿಯಾ ಖುರೇಷಿ

ಮಲ್ಲಮ್ಮನುಡಿವಾರ್ತೆನವದೆಹಲಿ:ಮೇ.9: ಭಾರತದ 36 ಕಡೆ 400 ಮಿಸ್ಸೈಲ್ ಬಳಸಿಕೊಂಡು ಗುರುವಾರ ರಾತ್ರಿ ಪಾಕಿಸ್ತಾನ ದಾಳಿ ನಡೆಸಿದೆ ಎಂದು ಕರ್ನಲ್ ಸೋಫಿಯಾ ಖುರೇಷಿ ಅಧಿಕೃತ ಮಾಹಿತಿ ನೀಡಿದ್ದಾರೆ. ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುರುವಾರ ರಾತ್ರಿ 8ರಿಂದ 9 ಗಂ-ಟೆಗೆ ಆರಂಭವಾಗಿ ಮಧ್ಯರಾತ್ರಿವರೆಗೂ



ಭಾರತದ ಮೇಲೆ ಪಾಕಿಸ್ತಾನ ನಿರಂತರ ದಾಳಿ ನಡೆಸಿದೆ. 36 ಕಡೆ 300ರಿಂದ 400 ಪಾಕ್ ಡ್ರೋನ್ ಮಿಸ್ಸೈಲ್ ದಾಳಿ ಮಾಡಿದೆ. ಪಾಕ್‌ನ ಎಲ್ಲಾ ಮಿಸ್ಸೈಲ್‌ಗಳನ್ನು ನಾಶ ಮಾಡಲಾಗಿದೆ. ಅಲ್ಲದೇ ಗುಂಡಿನ ದಾಳಿಯನ್ನೂ ಮಾಡಿದೆ. ಪಾಕಿಸ್ತಾನ ಎಲ್‌ಒಸಿಯಲ್ಲಿ ಗುಂಡಿನ ದಾಳಿ ಮಾಡಿದೆ. ಪಂಜಾಬ್, ಭಟಿಂಡಾ

(2ನೇ ಪುಟ ನೋಡಿ)

## ಆಕಸ್ಮಿಕ ಬೆಂಕಿಗೆ 7.50 ಲಕ್ಷ ರೂ ನಗದು ಸೇರಿ ಅಪಾರ ವಸ್ತು ಸುಟ್ಟು ಭಸ್ಮ

ಮಲ್ಲಮ್ಮ ನುಡಿ ವಾರ್ತೆ ಅಫಜಲಪುರ:ಮೇ.9: ತಾಲೂಕಿನ ಮಲ್ಲಾಬಾದ ಗ್ರಾಮದ ಪಕ್ಕದಲ್ಲಿರುವ ತೋಟದ ಮನೆಗೆ ಆಕಸ್ಮಿಕ ಬೆಂಕಿ ಬಿದ್ದು ಮನೆಯಲ್ಲಿರುವ 7.50 ಲಕ್ಷ ಹಣ ಹಾಗೂ ಶ್ರಮ ಪಟ್ಟು ಬೆಳೆದ 60 ಚೀಲ ತೊಗರಿ ಸೇರಿದಂತೆ ಮನೆಯಲ್ಲಿರುವ ಆಭರಣಗಳು ಹಾಗೂ ಬಟ್ಟೆ ಬರೆಗಳು ಸುಟ್ಟು ಕರಕಲಾಗಿವೆ.





ಮಲ್ಲಾಬಾದ ಗ್ರಾಮದ ರೈತ ಕರೆಪ್ಪ ಶಿವಪ್ಪ ಚಾಂದಕವಟೆ ಅವರು ತಮ್ಮ ಜಮೀನಿನಲ್ಲಿ ಮನೆ ಮಾಡಿಕೊಂಡು ಜೀವನ ಮಾಡುತ್ತಿದ್ದು, ಮಧ್ಯಾಹ್ನ ಮನೆಯಲ್ಲಿ ಎಲ್ಲರೂ ಕೆಲಸಕ್ಕೆ ತೆರಳಿದ ಸಂದರ್ಭದಲ್ಲಿ ಆಕಸ್ಮಿಕ ಬೆಂಕಿ ತಗುಲಿ ಮನೆ ಸುಟ್ಟು ಕರಕಲಾಗಿದೆ. ತೋಟದ ಸುತ್ತಮುತ್ತಲಿರುವ ರೈತರು ಬೆಂಕಿ ನಂದಿಸುವ ಕಾರ್ಯದಲ್ಲಿ ಹರಸಾಹಸ ಪಟ್ಟರು. ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳ ಬೆಂಕಿ ನಂದಿಸಲು ಕೆಲವು ಗಂಟೆಗಳೆ ಕಳೆದವು. ಸುತ್ತಮುತ್ತಲಿನ ರೈತರು ಮನೆ ಸುಟ್ಟು ಹೋದ ರೈತನ ಕುಟುಂಬಕ್ಕೆ ಸಾಂತ್ವಾನ ಹೇಳುವಲ್ಲಿ ನಿರತರಾದರೆ, ಅಗ್ನಿಶಾಮಕ ದಳ ಬೆಂಕಿ ನಂದಿಸುವಲ್ಲಿ ನಿರತರಾದರು.

ಸ್ಥಳಕ್ಕೆ ಧಾವಿಸಿದ ಮಾಜಿ ಜಿಲ್ಲಾ ಪಂಚಾಯತ ಸದಸ್ಯ ಭೀರಣ್ಣಾ ಕಲ್ಲೂರ ಬಡತನದಲ್ಲಿ ಜೀವನ ಸಾಗಿಸುತ್ತಿರುವ ರೈತ ಕರೆಪ್ಪ ಚಾಂದಕವಟೆ ಇತ್ತೀಚೆಗೆ ತಮ್ಮ ಜಮೀನು ಮಾರಿದ ಹಣವನ್ನು ಮನೆಯಲ್ಲಿ ಇಟ್ಟಿದ್ದು, ಸುಮಾರು 7.50 ಲಕ್ಷ ರೂಪಾಯಿ ಹಣ ಹಾಗೂ 60 ಮೂಟೆ ತೊಗರಿ ಸೇರಿದಂತೆ ಬಂಗಾರದ ಆಭರಣಗಳು ದವಸ ಧಾನ್ಯಗಳು ಸುಟ್ಟು ಭಸ್ಮವಾಗಿವೆ. ಅಪಾರ ಹಾನಿಯಾಗಿದ್ದು ಸರಕಾರದಿಂದ ಹೆಚ್ಚಿನ ಪರಿಹಾರ ಮತ್ತು ಕಂದಾಯ ಇಲಾಖೆಯ ಸಹಕಾರದಿಂದ ಹೆಚ್ಚಿನ ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು.

ಇದೆ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಲಕ್ಷಪ್ಪ ಕಲ್ಲೂರ, ಶಿವಾನಂದ ಬಡದಾಳ, ಲಚ್ಚಪ್ಪ ನಿರೋಣಿ, ಶರಣಪ್ಪ ಜಮಾದಾರ, ಚಿದಾನಂದ ಬಡದಾಳ, ಬಸಯ್ಯ ಸ್ವಾಮಿ, ರಾಜು ಜಮಾದಾರ, ರವಿ ಅಖಂಡೆ, ಇಟ್ಟಪ್ಪ ಅವರಾದ, ಸಿದ್ದಪ್ಪ ಕಲ್ಲೂರ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ರಾಯಚೂರಿನಲ್ಲಿ ಮಾಕ್ ಡ್ರಿಲ್: ಸೈರನ್ ಮೊಳಗಿಸಿ ಜನಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಮೇ. 09 (ಕರ್ನಾಟಕ ವಾರ್ತೆ): ಕೇಂದ್ರ ಗೃಹ ಸಚಿವಾಲಯದ ಸೂಚನೆ ಮೇರೆಗೆ ರಾಯಚೂರಿನ ಶಕ್ತಿನಗರದಲ್ಲಿ ಮೇ 9ರಂದು ಶುಕ್ರವಾರ ಸಂಜೆ 4.34 ರಿಂದ 4.39ರವರೆಗೆ ತುರ್ತು ಪರಿಸ್ಥಿತಿ ಎಚ್ಚರಿಕೆಯ ಸೈರನ್ ಮೊಳಗಿಸಲಾಯಿತು.

ಶಕ್ತಿನಗರದ ವಿದ್ಯುತ್ ಶಾಖೋತ್ಪನ್ನ ಕೇಂದ್ರದ ಹೆಲಿಪ್ಯಾಡ್ ಕೇಂದ್ರ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಎನ್.ಡಿ.ಆರ್.ಎಫ್, ಎಸ್.ಡಿ.ಆರ್.ಎಫ್, ಕೆ.ಪಿ.ಟಿ.ಸಿ.ಎಲ್, ಸಿ.ಐ.ಎಸ್.ಎಫ್

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಪಾಕ್ ದಾಳಿ: ಕರ್ನಲ್ ಸೋಫಿಯಾ ಖುರೇಷಿ

ಸೇನಾ ನೆಲೆ ಮೇಲೆ ಪಾಕ್ ದಾಳಿಗೆ ಯತ್ನಿಸಿದೆ ಎಂದರು. ಪಾಕಿಸ್ತಾನ ತನ್ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನು ಸ್ಥಗಿತ ಮಾಡಿಲ್ಲ. ಪಾಕಿಸ್ತಾನ, ಭಾರತದ ಏರ್ ಸ್ಟೇಷನ್‌ಗಳ ಮೇಲೆ ದಾಳಿ ಮಾಡಲು ಯತ್ನಿಸಿದೆ. ತನ್ನ ನಾಗರಿಕ ವಿಮಾನ ಬಳಸಿಕೊಂಡು ಬೇಜವಾಬ್ದಾರಿತನ ತೋರಿದೆ. ಈ ಮೂಲಕ ಪಾಕಿಸ್ತಾನ ಅಂತಾರಾಷ್ಟ್ರೀಯ ನಿಯಮಗಳನ್ನ ಉಲ್ಲಘಂನೆ ಮಾಡಿದೆ. ಆದರೆ ಭಾರತ ನಾಗರಿಕರಿಗೆ ಧಕ್ಕೆಯಾಗದಂತೆ ಪ್ರತಿದಾಳಿ ಮಾಡಿದೆ. ಈ ಮೂಲಕ ಭಾರತ ಅಂತಾರಾಷ್ಟ್ರೀಯ ನಿಯಮಗಳನ್ನು ಉಲ್ಲಂಘನೆ ಮಾಡಿಲ್ಲ ಎಂದು ತಿಳಿಸಿದರು. ಟರ್ಕಿಯ ಡ್ರೋನ್‌ಗಳನ್ನು ಬಳಸಿಕೊಂಡು ಪಾಕಿಸ್ತಾನ ಭಾರತದ ಮೇಲೆ ದಾಳಿ ನಡೆಸಿದೆ. ಕೈನೆಟಿಕ್ ಮತ್ತು ನಾನ್ ಕೈನೆಟಿಕ್ ಎರಡೂ ರೀತಿಯಲ್ಲೂ ಪಾಕ್ ಡ್ರೋನ್‌ಗಳನ್ನು ನಾಶಪಡಿಸಲಾಗಿದೆ. ಡ್ರೋನ್‌ನ ಅವಶೇಷಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ. ವರದಿಯಲ್ಲಿ ಇದು ಟರ್ಕಿ ನಿರ್ಮಿತ ಡ್ರೋನ್‌ಗಳು ಎಂದು ತಿಳಿದು ಬಂದಿದೆ ಎಂದು ಮಾಹಿತಿ ನೀಡಿದರು.

### ಸೈರನ್ ಮೊಳಗಿಸಿ ಜನಜಾಗೃತಿ



ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನಾಗರಿಕ ರಕ್ಷಣಾ ಅಣಕು ಪ್ರದರ್ಶನ ಕಾರ್ಯಕ್ರಮದಲ್ಲಿ ಮೂರು ವಿಧದ ಸೈರನ್‌ಗಳು ಕೇಳಿಸಿದವು. ತುರ್ತು ಪರಿಸ್ಥಿತಿಯಲ್ಲಿ ಮೊದಲ ಸೈರನ್, ಎರಡನೇ ಸೈರನ್, ಮೂರನೇ ಸೈರನ್ ಸಂದರ್ಭದ ಬಗ್ಗೆ ತಿಳಿಸಲಾಯಿತು.ಈ ವೇಳೆ ಸೈರನ್‌ಗೆ ಹೇಗೆ ಪ್ರತಿಕ್ರಿಯಿಸಬೇಕು, ವಾಯುದಾಳಿ ಆದರೆ ಏನು ಮಾಡಬೇಕು, ಬೆಂಕಿ ಹತ್ತಿಕೊಂಡಾಗ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳುವುದು ಹೇಗೆ, ಅವಶೇಷಗಳ ಅಡಿ ಸಿಲುಕಿದವರನ್ನು, ಎತ್ತರದ ಪ್ರದೇಶಗಳಲ್ಲಿರುವವರನ್ನು ಹೇಗೆ ರಕ್ಷಿಸಬೇಕು, ವೈದ್ಯಕೀಯ ತುರ್ತು ಸೇವೆಗಳನ್ನು ಒದಗಿಸುವುದು ಹೇಗೆ ಎಂಬುದನ್ನು ಕಲಿಸಲಾಯಿತು.

ಸೈರನ್ ಮೊಳಗಿದ ಕೂಡಲೇ ನಾಗರಿಕರು ಕೈಗೊಳ್ಳಬೇಕಾದ ಎಚ್ಚರಿಕೆ ಹಾಗೂ ದುರ್ಘಟನೆಯಿಂದ ಕಟ್ಟಡಗಳಲ್ಲಿ ಸಿಲುಕಿರುವ ನಾಗರಿಕರನ್ನು ಸುಸಜ್ಜಿತವಾದ ಏರಿಯಲ್ ಲ್ಯಾಡರ್ ವಾಹನದ ಮೂಲಕ ರಕ್ಷಣೆ ಮಾಡುವುದನ್ನು ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಸಿಬ್ಬಂದಿ ಪ್ರದರ್ಶಿಸಿದರು.

ರಾಯಚೂರ ಜಿಲ್ಲೆಯಲ್ಲಿ ಮೊದಲ ಬಾರಿಗೆ ನಡೆದ ಈ ಮಾಕ್ ಡ್ರಿಲ್ ನಲ್ಲಿ ಪರಿಶಿಷ್ಟ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ತುಕಾರಾಂ ಪಾಂಡ್ವೆ,

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಪುಟ್ಟಮಾದಯ್ಯ, ಅಪರ ಜಿಲ್ಲಾಧಿಕಾರಿ ಶಿವಾನಂದ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ,

ತಹಶೀಲ್ದಾರ್ ಸುರೇಶ ವರ್ಮಸೇರಿದಂತೆ ಇತರರು ಭಾಗಿಯಾಗಿ ಅಣುಕು ಪ್ರದರ್ಶನ ವೀಕ್ಷಣೆ ಮಾಡಿದರು.

ಸೈನಿಕರಂತೆ ಕೆಲಸ ಮಾಡೋಣ ಈ ವೇಳೆ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ,

ಜಿಲ್ಲೆಯ ಪ್ರತಿಯೊಬ್ಬರು ಸೈನಿಕರಂತೆ ಕೆಲಸ ಮಾಡಬೇಕು. ಜಿಲ್ಲಾಡಳಿದೊಂದಿಗೆ ಕೈಜೋಡಿಸಬೇಕು. ಸಾರ್ವಜನಿಕರು ಯಾವುದೇ ರೀಯಿಯ ಭಯ ಪಡಬಾರದು ಎಂದರು.

**ಜನರ ರಕ್ಷಣೆ ಉದ್ದೇಶ:**ಕೇಂದ್ರ ಸರ್ಕಾರದ ಆದೇಶದಂತೆ ಹಾಗೂ ರಾಜ್ಯ ಸರ್ಕಾರದ ಸೂಚನೆಯಂತೆ ಜಿಲ್ಲೆಯಲ್ಲಿ ಅಣುಕು ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು, ಅಣಕು ಪ್ರದೇಶದ ಮುಖ್ಯ ಉದ್ದೇಶವು ಶತ್ರು ದೇಶಗಳಿಂದ ದಾಳಿಯಾದ ಸಂದರ್ಭದಲ್ಲಿ ಸಾರ್ವಜನಿಕರ ರಕ್ಷಣೆ ಕ್ರಮಕ್ಕೆ ಸಂಬಂಧಿಸಿದ್ದಾಗಿರುತ್ತದೆ ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.ತುರ್ತು ಪರಿಸ್ಥಿತಿ ವೇಳೆ ವಿವಿಧ ಇಲಾಖೆಗಳಿಂದ ಯಾವ ರೀತಿಯಲ್ಲಿ ಕಾರ್ಯನಿರ್ವಹಣೆ ಮಾಡಬೇಕು. ಸಾರ್ವಜನಿಕರು ಯಾವ ರೀತಿಯಲ್ಲಿ ಇರಬೇಕು ಎಂಬುದನ್ನು ತಿಳಿಸಲು ಬೇರೆ ಬೇರೆ ಇಲಾಖೆಗಳು ಮತ್ತು ಭದ್ರತಾ ಪಡೆಯ ತಂಡಗಳು ಹೇಗೆ ಕಾರ್ಯನಿರ್ವಹಣೆ ಮಾಡಬೇಕು ಮತ್ತು ಎಂತಹದ್ದೇ ಪರಿಸ್ಥಿತಿ ಎದುರಾದರು ಸಹ ಎಲ್ಲರೂ ಸೇರಿ ಅದನ್ನು ಹೇಗೆ ನಿಭಾಯಿಸಬೇಕು ಎಂಬುದರ ಪೂರ್ವ ತಯಾರಿ ಇದಾಗಿದೆ ಎಂದು ತಿಳಿಸಿದರು.ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಅಣುಕು ಪ್ರದರ್ಶನ ಮಾಡಬೇಕು. ಸಾರ್ವಜನಿಕರಲ್ಲಿ ಯಾವುದೇ ರೀತಿಯಲ್ಲಿ ಗೊಂದಲ ಹಾಗೂ ಅಂಜಿಕೆ ಇರಬಾರದು. ಜಿಲ್ಲಾಡಳಿತವು ಈಗಾಗಲೇ ಎಲ್ಲಾ ರೀತಿಯ ಸಿದ್ಧತೆಯನ್ನು ಮಾಡಿಕೊಂಡಿದೆ. ದೇವಸಗೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 5–6 ಹಳ್ಳಿಗಳಲ್ಲಿ ತರಬೇತಿಯನ್ನು ನೀಡಲಾಗುತ್ತದೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತರಬೇತಿ ನೀಡಲಾಗುವುದು. ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಯಿಂದ ಕಂಟ್ರೋಲ್ ರೋಂ ಪ್ರಾರಂಭ ಮಾಡಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆಯಬೇಕು ಎಂದರು.ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಎನ್.ಸಿ.ಸಿ, ವಿದ್ಯಾರ್ಥಿಗಳು ಇದ್ದರು.

ಪತ್ರಕರ್ತರಿಗೆ ವೀಕ್ಷಣೆಗೆ ಅವಕಾಶ: ಯಾವುದೇ ಮಹತ್ವದ ವಿಷಯಗಳ ಬಗ್ಗೆ ಜನಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳಿಗೆ ಸಹ ಅಣುಕು ಪ್ರದರ್ಶನ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿತ್ತು.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ಕ್ಕೆ ನೊಂದಾಯಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಅವಕಾಶ

ಬೀದರ: ಮೇ.9: 2025ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ–1ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಪರೀಕ್ಷೆ–2ನ್ನು ದಿನಾಂಕ: 26–05–2025 ರಿಂದ 02–06–2025ರವರೆಗೆ ನಡೆಸಲಾಗುತ್ತಿದೆ. ಪರೀಕ್ಷೆ–1ರಲ್ಲಿ ನೊಂದಾಯಿಸಿಕೊಂಡು ಉತ್ತೀರ್ಣರಾಗದವಿದ್ಯಾರ್ಥಿಗಳಿಗೆಮಾತ್ರ ಪರೀಕ್ಷೆ–2ರಲ್ಲಿನೊಂದಾಯಿಸಲು ಯಾವುದೇಶುಲ್ಕಪಡೆಯುವುದಿಲ್ಲ. ಕಾರಣ ಜಿಲ್ಲೆಯ ಪರೀಕ್ಷೆ–1ರಲ್ಲಿ ಉತ್ತೀರ್ಣರಾಗದ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಈ ಸದುಪಯೋಗಪಡಿಸಿಕೊಳ್ಳಬ 'ೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಪರೇಷನ್ ಸಿಂದೂರ ನವ ಭಾರತದ ಅಪ್ರತಿಮ ಶಕ್ತಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮೇ.9:ಆಪರೇಷನ್ ಸಿಂದೂರಕೇವಲಭಯೋತ್ಪಾದಕ ವಿರುದ್ಧಕಾರ್ಯಾಚರಣೆಯಾಗಿರಲಿಲ್ಲ ಬದಲಾಗಿ ಅದು ನವ ಭಾರತದ ಅಪ್ರತಿಮ ಶಕ್ತಿಯನ್ನು ಜಗತ್ತಿಗೆ ಸಾರಿದ ಐತಿಹಾಸಿಕ ದಿನ ಎಂದು ರಾಷ್ಟ್ರ ರಕ್ಷಣಾ ಪಡೆ ಜಿಲ್ಲಾ ಅಧ್ಯಕ್ಷಮಡಿವಾಳಪ್ಪಅಮರಾವತಿ ಅವರು ಬಣ್ಣಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆಪ್ರತೀಕಾರವಾಗಿಭಾರತೀಯ ಸೇನೆ ಪಾಕಿಸ್ತಾನ ಅತಿಕ್ರಮಿತ ಕಾಶ್ಮೀರ ಮತ್ತು ಪಾಕಿಸ್ತಾನದ 9 ಉಗ್ರರ ನೆಲೆಗಳ ಮೇಲೆ ಮಧ್ಯರಾತ್ರಿನಡೆಸಿದವೈಮಾನಿಕ ದಾಳಿಯ ಕುರಿತಂತೆ ಪತ್ರಿಕಾ ಹೇಳಲಿಕೆ ನೀಡಿದ ಅವರು, ಸಿಂಧೂರ್ ಎನ್ನುವುದು ರಾಷ್ಟದ ವೀರತ್ವ, ಧೈರ್ಯ ಮತ್ತು ಸಂಕಲ್ಪದ ಪ್ರತೀಕವಾಗಿ ಹೊರಹೊಮ್ಮಿದೆ.ನಮ್ಮ ಸೇನೆಯ ವ್ಯವಸ್ಥಿತ ಹಾಗೂ ಕೆಚ್ಚೆದೆಯ ಕಾರ್ಯಾಚರಣೆಯ ಮೂಲಕ ಭಾರತದ ಸಾಮರ್ಥ್ಯವನ್ನು ಜಗತ್ತಿಗೆ ತೋರಿಸಿಕೊಟ್ಟಿದೆ ಎಂದು ಅವರು ಹೇಳಿಕೆಯಲ್ಲಿ ಕೊಂಡಾಡಿದ್ದಾರೆ.

ಹೊಸ ಭಾರತವನ್ನು ಯಾರಾದರೂ ಕೆಣಕಿದರೆ, ನಮ್ಮ ಉತ್ತರವು ಇತಿಹಾಸವನ್ನೇ ನಡುಗಿಸುವಂತಹನುಹೊಂದಿರುತ ಶಕ್ತಿಯನ್ನು ಹೊಂದಿರುತ್ತದೆ. ಕೇವಲ 25 ನಿಮಿಷಗಳಲ್ಲಿ ನಡೆದ ಪರಿಣಾಮಕಾರಿ ಕಾರ್ಯಾಚರಣೆಯಲ್ಲಿ ನಮ್ಮ ಸೇನೆಯು ಭಯೋತ್ಪಾದಕ ಅಲ್ಮಲ್ ಕಸಬ್ಬ ತರಬೇತಿ ಕೇಂದ್ರ ಸೇರಿ 9 ಪ್ರದೇಶಗಳಲ್ಲಿನ 21 ಉಗ್ರರ ಅಡಗುತಾಣಗಲನ್ನು ಕ್ಷಿಪಣಿ ದಾಳಿ ಮಾಡಿ

ನಾಶ ಮಾಡಿರುವುದು ಬದಲಾದ ಭಾರತ ನೀಡಿದ ಪ್ರತಿಕ್ರಿಯೆಯಾಗಿದೆ ಎಂದು ಅವರು ವಿಶ್ಲೇಷಿಸಿದ್ದಾರೆ.

# ಚಿಂಚನಸೂರ್ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಮೇ:9: ಮಾಜಿ ಸಚಿವರು ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರ್ ಅವರು ಶುಕ್ರವಾರ ಮೇ 9ರಂದು ಮಧ್ಯಾಹ್ನ 12 ಕ್ಕೆ ಯಾದಗಿರಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ1–20 ಕ್ಕೆ ಗುರುಮಠಕಲ್ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು.ನಂತರ ಮಧ್ಯಾಹ್ನ 3 ಗಂಟೆಗೆ ಮಲ್ಹಾರ ಗ್ರಾಮದಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಮಾನ್ಯರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಬೀದರ ವಿವಿ ಶುಲ್ಕ ಹೆಚ್ಚಳ ಖಂಡಿಸಿ ಎಬಿವಿಪಿ ಪ್ರತಿಭಟನೆ




ಮಲ್ಲಮ್ಮನುಡಿವಾರ್ತೆ ಬೀದರ: ಮೇ.9:ವಿಶ್ವವಿದ್ಯಾಲಯದಲ್ಲಿ 2025–26ನೇ ಸಾಲಿನ ಪದವಿ ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ಶೇಕಡ 50%ರಷ್ಟು ಹೆಚ್ಚಳ ಮಾಡಿರುವುದು ವಿದ್ಯಾರ್ಥಿಗಳಿಗೆ ದುಪ್ಪಟ ಶುಲ್ಕವನ್ನು ವಿಧಿಸಿರುವುದು ಹಾಗೂ ಹೊರ ರಾಜ್ಯಗಳಿಂದ ಪ್ರವೇಶ ಪಡೆಯುವಂತಹ ವಿದ್ಯಾರ್ಥಿಗಳಿಗೆ ದುಪ್ಪಟು ಶುಲ್ಕವನ್ನು ವಿಧಿಸಿರುವುದು ಇದು ಖಂಡನೆಯವಾಗಿದೆ. ಕಾರಣ ನಮ್ಮ ಜಿಲ್ಲೆಯು ಎರಡು ರಾಜ್ಯಗಳಗಡಿಯಜಿಲ್ಲೆಯಾಗಿದ್ದು, ಅಲ್ಲಿನ ವಿದ್ಯಾರ್ಥಿಗಳು ನಮ್ಮ ವಿಶ್ವವಿದ್ಯಾಲಯದಪ್ರವೇಶವನ್ನು ಪಡೆಯಲು ಆರ್ಥಿಕವಾಗಿ ಹೊರೆಯಾಗುವ ಸಾಧ್ಯತೆ–ಯಾಗಿದೆ. ಶೈಕ್ಷಣಿಕವಾಗಿ ಹಿಂದುಳಿದಿರುವಂತ ಜಿಲ್ಲೆಗಳಲ್ಲಿ ನಮ್ಮ ಜಿಲ್ಲೆ ಕೂಡ ಒಂದಾಗಿದೆ ಹಾಗಾಗಿ ಬಡ ಮತ್ತು ರೈತ ಕುಟುಂಬದ ವಿದ್ಯಾರ್ಥಿಗಳು ಪದವಿಯನ್ನು ಅಧ್ಯಾಯನ ಮಾಡುವುದು ಕಡಿಮೆಯಾಗಿದೆ. ಆದರೆ ಪ್ರತಿ ವರ್ಷವೂ ಬೀದರ ವಿಶ್ವವಿದ್ಯಾಲಯ ಈ ರೀತಿಯಲ್ಲಿ ಪ್ರವೇಶ ಶುಲ್ಕವನ್ನುಹೆಚ್ಚಳಮಾಡಿದಾಗ ವಿದ್ಯಾರ್ಥಿಗಳಿಗೆ ಹೊರೆ ಆಗುವುದಲ್ಲದೆ ವಿದ್ಯಾರ್ಥಿಗಳು ಪದವಿಯಿಂದ ದೂರ ಉಳಿಯುವ ಸಾಧ್ಯತೆಗಳು ಹೆಚ್ಚಾಗುತ್ತೆಆದ್ದರಿಂದಗ್ರಾಮೀಣ ಭಾಗಗಳಿಂದ ಬರುವಂತಹ ವಿದ್ಯಾರ್ಥಿಗಳಿಗೆ ಪ್ರವೇಶ ಶುಲ್ಕ ಹೆಚ್ಚಳ ಆಗಿರುವುದರಿಂದ ವಿದ್ಯಾರ್ಥಿಗಳ ಕಷ್ಟಕರ ಸಂಗತಿಯಾಗಿದೆ.ತರಾತುರಿಯಲ್ಲಿ ವಿಶ್ವವಿದ್ಯಾಲಯ

ಕೈಗೊಂಡಿರುವಂತಹ ಈ ಪ್ರವೇಶ ಶುಲ್ಕವನ್ನು ಹಿಂಪಡೆದು ಮರು ಪರಿಶೀಲನೆಯನ್ನು ಮಾಡಿ, ತಕ್ಷಣ ವಿದ್ಯಾರ್ಥಿಗಳಿಗೆ ಹೊರೆಯಾಗದಂತೆಶೇಕಡ50%ರಷ್ಟು ಹೆಚ್ಚಳ ಮಾಡಿರುವುದರನ್ನು ಕೂಡಲೇ ಕಡಿಮೆ ಮಾಡಬೇಕು. ಒಂದುವೇಳೆ ಇದು ಹೀಗೆ ಮುಂದುವರೆದರೆ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಉಗ್ರವಾದ ಹೋರಾಟಮಾಡಲಾಗುತ್ತದೆಂದು ಎಬಿವಿಪಿಯ ಜಿಲ್ಲಾ ಸಂಘಟನ ಕಾರ್ಯದರ್ಶಿಗಳಾದಹೇಮಂತ ಆಗ್ರಹಿಸಿದರು.ಈಸಂದರ್ಭದಲ್ಲಿ,ಸಹ ಕಾರ್ಯದರ್ಶಿ ಪವನ್ ಕುಂಬಾರ,ನಾಗರಾಜ,ಪವನ್ ಪಾಂಚಾಲ,ವಿಶ್ವವಿದ್ಯಾಲಯದ ಅಧ್ಯಕ್ಷರಾದ ಶಿವಶರಣು ಚಾಂಬೋಳೆ,ಪ್ರಾರ್ಥನಾ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಇದ್ದರು

### ವೀರ ಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಚಾಂಗಲೇರಾ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ



ಬೀದರ:ಮೇ.9:ವೀರಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಮತ್ತು ಅವರ ಜೀವಗಳ ರಕ್ಷಣೆಗೆ ಚಾಂಗಲೇರಾ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ

ಭಾರತದ ತಂಟೆಗೆ ಬಂದರೆ ಏನಾಗಲಿದೆ ಎಂಬುದನ್ನು ನಮ್ಮ ಸೈನಿಕರು ತೋರಿಸಿದ್ದಾರೆ. ನಮ್ಮ ವೀರ ಸೈನಿಕರಿಗೆ ಆತ್ಮಸ್ಥೈರ್ಯತುಂಬಲು ಮತ್ತು ಅವರಜೀವಗಳರಕ್ಷಣೆಗೆ ಇಂದು ವಿಶೇಷ ಪೂಜೆ ಸಲ್ಲಿಸಲಾಗಿದೆ. ಸೈನಿಕರ ಜತೆ ನಾವು ಇದ್ದೇವೆ, ಅಮಾಯಕ ನಾಗರಿಕರನ್ನು ಬಲಿ ಪಡೆವ ಉಗ್ರರನ್ನು ನಾಶ ಮಾಡಲಾಗುತ್ತಿದೆ ಎಂದು ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಸೋಮನಾಥ ಪಾಟೀಲ್ ಹೇಳಿದರು.ಬೀದರ್ ದಕ್ಷಿಣ ಕ್ಷೇತ್ರದ ಸುಪ್ರಸಿದ್ಧ ಚಾಂಗಲೇರಾ ವೀರಭದ್ರೇಶ್ವರ ದೇವಸ್ಥಾನದಲ್ಲಿ ಬಿಜೆಪಿ ಮಂಡಲ ವತಿಯಿಂದ ವೀರ ಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಮತ್ತು ಅವರ ಜೀವಗಳ ರಕ್ಷಣೆಗಾಗಿ ನಡೆದ ವಿಶೇಷ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಜಮ್ಮು ಕಾಶ್ಮೀರ ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತದ ಸೇನೆ ಆಪರೇಷನ್ "ಸಿಂಧೂರ್" ಕಾರ್ಯಾಚರಣೆ ಮುಖಾಂತರ ಪಾಕಿಸ್ತಾನದೊಳಗೆ ನುಗ್ಗಿ ಭಯೋತ್ಪಾದಕರ 9 ಪ್ರಮುಖ ನೆಲೆಗಳನ್ನು ಧ್ವಂಸಗೊಳಿಸಿ ಶತ್ರು ರಾಷ್ಟ್ರ ಮಾತ್ರವಲ್ಲ, ಇಡೀ ವಿಶ್ವಕ್ಕೆ ತನ್ನ ಶಕ್ತಿ, ಸಾಹಸ, ಸಾಮರ್ಥ್ಯ ಹಾಗೂ ಪರಾಕ್ರಮ ತೋರಿಸಿಕೊಟ್ಟಿದೆ.

# ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ಧರಣಿ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮೇ.9: ಮಹಿಳಾ ಏಕತಾ ಮಂಚ್ ವತಿಯಿಂದ ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಒಂದು ದಿನ ಧರಣಿಯನ್ನು ಮಹಿಳಾ ಏಕತಾ ಮಂಚ್‌ನ್ ಅಧ್ಯಕ್ಷೆ ಶೇಖ್ ಸಮ್ರೀನ್, ಗೌರವಾಧ್ಯಕ್ಷೆ ಸಾಯಿರಾ ಬಾನು, , ಕಾರ್ಯಾಧ್ಯಕ್ಷೆ ಸೈಯದಾ ತಹೆನಿಯತ್ ಫಾತಿಮಾ, ಗೌರವ ಸಲಹೆಗಾರ ಜೇಬಾ ಇವರ ನೇತೃತ್ವದಲ್ಲಿ ಶುಕ್ರವಾರ ಬೆಳಗ್ಗೆ 10 ರಿಂದ ಸಂಜೆ 5 ಗಂಟೆಗ ವರೆಗೆ ಒಂದು ದಿನ ಧರಣಿ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿಗಳ ಮುಖಾಂತರ ಗೌರವಾನ್ವಿತ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಉದ್ದೇಶ ಕೇಂದ್ರ ಸರಕಾರ ವಕ್ಷ ತಿದ್ದುಪಡಿ ಕಾಯ್ದೆ 2025 ದೇಶದ ಸಂವಿಧಾನಕ್ಕೆ ವಿರುದ್ಧವಾಗಿದೆ ಈ ಕರಾಳ ಕಾನೂನು ಜಾರಿಗೆ ಬಂದ ನಂತರ ವಕ್ಷ ಆಸ್ತಿಗಳು ಮುಸ್ಲಿಂದ ಕೈಯಿಂದ ಹೊಗುತ್ತದೆ, ಪಕ್ಷ ಆಸ್ತಿ ಅನ್ನುವುದು ದಾನದ ರೋಪವಾಗಿದೆ ಅಲ್ಲಹಾನ ಆಸ್ತಿಯಾಗಿದೆ ಇದರ ಮೇಲೆ ಯಾವುದೇ ಕಾಯ್ದೆ ಕಾನೂನು ತರಬಾರದು ಒಮ್ಮೆ ಪಕ್ಷ ಆಸ್ತಿ ನಳಿಗೆ ನೀಡಿದರೆ ಅದು ಶಾಶ್ವತವಾಗಿ ಪಕ್ಷ ಆಸ್ತಿಯೆಂದು ಕರೆಯಲಾಗುತ್ತದೆ. ಸೂಪ್ರಿಂ ಕೋರ್ಟ ಕೂಡಾ ಇಸ್ಲಾಮಿಕ ಪರಿಕಲ್ಪನೆಯ ವಕ್ಷಯಂದು ಕರೆಯಲಾಗಿದೆ. ಪಕ್ಷ ಆಸ್ತಿಯ ಪ್ರಾಮುಖತೆ ಏನೆಂದರೆ ಮುಸ್ಲಿಂರು ಯಾವಾಗಲು ವಿವಿಧ ಉತ್ತಮ ಕಾರ್ಯಗಳಿಗೆ ದಕ್ಷ ನೀಡುತ್ತಿದ್ದಾರೆ.ಮುಸ್ಲಿಂರ ಉಜ್ವಲ ಇತಿಹಾಸವನ್ನು ಹೊಂದಿದು ಮುಸ್ಲಿಂರ ಮಸಿದಿಗಳು, ಈದ್ಯಾ, ಖಬರಿಸ್ತಾನ ಮತ್ತು ಅಶುರ ಖಾನಾ ಮತ್ತು ದರ್ಗಗಳ ಮೇಲೆ ಮುಸ್ಲಿಂರು ಆಸ್ತಿಯನ್ನು ವಕ್ಷ ಮಾಡಿದ್ದಾರೆ ಮತ್ತು ಅನಾಥ ಆಶ್ರಮಗಳು, ಬಡವರ ಮನೆಗಳನ್ನು ನಿರ್ಮಿಸಲು ಕೂಡಾ ಭೂಮಿಯನ್ನು ಕೊಟ್ಟಿದಾರೆ ರೋಗಿಗಳಿಗೆ ಮತ್ತು ಅಂಗವಿಕಲರಿಗೆ ಮತ್ತು ಪ್ರಾಣಿಪಕ್ಷಿಗಳಿಗೂ ರಕ್ಷಣೆ ಮಾಡಲು ವಕ್ಷ ಆಸ್ತಿಯನ್ನು ಸಮರ್ಪಹಿಸಿದ್ದಾರೆ ಹಲವಾರು ದತ್ತಿಭೂಮಿಗಳು ಪಕ್ಷ ಕಾನೂನು ತಿದ್ದುಪಡಿ ಮಾಡುವ ಮೂಲಕ ಕೇಂದ್ರ ಸರಕಾರ ಮುಸ್ಲಿಂರಿಗೆ ಅನ್ಯಾಯಮಾಡಿದ್ದು ಇದು ನಮಗೆ ಸ್ವಿಕಾರ ಇಲ್ಲ. ವಕ್ರ ಶರಿಯಾ ಮತ್ತು ಮುಸ್ಲಿಂರ ಮೇಲೆ ಪರಿಣಾಮ ಬಿರುವುದಲ್ಲದೆ ಪಕ್ಷ ಆಸ್ತಿಗಳನ್ನು ಮುಸ್ಲಿಂರ ಕೈಯಿಂದ ತೆಗೆದು ಹಾಕಲಾಗಿದೆ. ದಕ್ಷ ಕಾಯ್ದೆ 2025ರ ಅನುಷ್ಠಾನದ ನಂತರ ಆಸ್ತಿಗಳಿಗೆ ರಕ್ಷಣೆ ಮಾಡುವುದು ಕಷ್ಟವಾಗುತ್ತದೆ ಮತ್ತು ಹಳೆಯ ಆಸ್ತಿಗಳಿಗೂ ಕೂಡಾ ದಕ್ಕೆ ಆಗುತ್ತದೆ. ಈ ಒಂದು ವಕ್ಷ ಕಾಯ್ದೆ ಕರಾಳ ಕಾನೂನು ರದ್ದು ಮಾಡಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ತಕ್ಕುಸ್ ಮಾಬ್ ಹಜರತ್ ಸೈಯದ್ ಮುಕ್ತಾರ್ ಪಾಷಾ ತವಕಲಿ ಸಜ್ಜಾದ ನಶಿನ್, ಶರಣ ಅಲ್ಲಮಪ್ರಭು ಪಾಟೀಲ್, ಮುಸ್ಲಿಂ ಪರಸ್ನಾಲ್ ಕಾನೂನು ಮಂಡಳಿಯ ಸಂಚಾಲಕ ಅಸ್ಗರ್ ಚುಲ್ಬುಲ್, ಗುರ್ಮಿತ್ ಸಿಂಗ್, ಡಾ. ಫಾರೂಕ್ ಮಣ್ಣೂರ್, ಮೌಲನಾಫಕ್ರೋದ್ದೀನ್, ಮುಷ್ತಾಕ್ ಅಹಮದ್, ಶೇಖ್ ಹುಸೇನ್ ಮಹಾನಗರ ಪಾಲಿಕೆ ಸದಸ್ಯರು, ಅಜೀಂ ಶಿರ್ನಿಫರೋಶ್, ರಹೀಂ ಮಿರ್ಚಿ, ಆದಿಲ್ ಸುಲೇಮಾನ್ ಸೇಠ್ ವಕೀಲರು, ಜಬ್ಬಾರ್ ಗೋಲಾ, ಹೈದರ್ ಅಲಿ ಬಾಗ್ಬನ್, ಸಲೀಮ್ ಚಿತ್ತಾಪುರ, ಮುಬೀನ್, ಸಯ್ಯದಾ, ಸಾದಿಯ, ಮಹೇಶ್ ರಾಟೊಡ್, ಬಾಬು ಕೂಡಿ, ಇಬ್ರಾಹಿಂ ಪಟೇಲ್ ಯಳವಾರ, ನಜೀರದ್ದೀನ್ ಮುತವಲ್ಲಿ, ಮೌಲಾ ಮುಲ್ಲಾ, ಅಜೀಂ ಶೇಖ್, ಆಲಂದಾರ ಜೈದಿ, ಗೀತಾ ಮುದಗೋಳ, ನವಾಬ್ ಖಾನ್, ಮುಜೀಬ್ ಖಾನ್, ಶಬೀರ್ ಬಿಲ್ಡರ್, ರೈಯಿಸ್ ಭಾಯಿ, ಜಗತ್ ಸಿಂಗ್, ತಜ್ಮುಲ್ ಯಾದಗೀರ, ಉಮರ್ ಜುನೈದಿ, ಹರೂನ್ ಖುರೇಷಿ, ಫರೀದ್ ಸಹಾಬ್, ಅಮೀನಾ ಪಟೇಲ್, ಶಾಹೀನ್ ಬೇಗಂ, ಖೈರುನಿಸ್ಸಾ ಬೇಗಂ, ಫೌಜಿಯಾ, ಪರ್ವಿನ್, ಫರ್ಜಾನಾ, ಮಹಿಬೂಬ್ ಶಾಹಾ ಬಾಬಾ, ಜೀಲಾನ್ ಗುತ್ತೇದಾರ್, ಅಲಿ ರಜಾ, ದಾದೆ ಪಟೇಲ್, ಬಾಬಾ ಫಕ್ರೋದ್ದೀನ್ ಅನ್ಸಾರಿ, ಮುನ್ನಿ ಆಪಾ, ಮೊದಿನ್ ಪಟೇಲ್ ಅಣಬಿ ಸೇರಿದಂತೆ ಸತ್ಯಾಗ್ರಹ ಹೋರಾಟದಲ್ಲಿ ಮಹಿಳೆಯರು, ಗಣ್ಯ ವ್ಯಕ್ತಿಗಳು, ರಾಜಕೀಯ ಧುರೀಣರು, ಸಾಮಾಜಿಕ ಕಾರ್ಯಕರ್ತರು ವಿವಿಧ ಸಂಘಟನೆಯ ಮುಖಂಡರು ಹಾಜರಿದ್ದರು.

### ಆಪರೇಷನ್ ಸಿಂಧೂರ್ ಯಶಸ್ವಿ: ಶಾಸಕ ಪ್ರಭು ಚವ್ಹಾಣರಿಂದ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಔರಾಧ:ಮೇ.9:ಭಾರತೀಯ ಸೇನೆಯು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಯಶಸ್ವಿಯಾಗಿ ನಡೆಸಿದ ಹಿನ್ನೆಲೆಯಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮೇ.9ರಂದು ಪಟ್ಟಣದ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ವೈರಿ ರಾಷ್ಟ್ರದ ಪ್ರಚೋದಿತ ಭಯೋತ್ಪಾದಕರ ದಾಳಿಯಿಂದ ದೇಶದ ಮುಗ್ಧ ಜನತೆ ಪ್ರಾಣ ಕಳೆದುಕೊಂಡಿದ್ದರು. ಈ ಪೈಶಾಚಿಕ ಕೆಲಸಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಭಾರತೀಯ ಸೇನೆಯು ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಮೂಲಕ ಪ್ರತಿಕಾರ ತೀರಿಸಿಕೊಂಡಿದೆ. ಭಾರತ ಎಂದಿಗೂ ಶಾಂತಿಯ ಪರವಾಗಿರುತ್ತದೆ. ಅದನ್ನೇ ದೌರ್ಬಲ್ಯವೆಂದು ಭಾವಿಸಿದವರಿಗೆ ಪ್ರಧಾನಿಯವರು ಜಗತ್ತಿಗೆ ನಮ್ಮ ಶಕ್ತಿಯನ್ನು ಪರಿಚಯಿಸಿದ್ದಾರೆ.

ಭಾರತದಲ್ಲಿ ಭಯೋತ್ಪಾದಕರಿಗೆ ಉಳಿಗಾಲವಿಲ್ಲ. ಶಾಂತಿಯನ್ನು ಕದಡಲು ಯತ್ನಿಸಿದವರು ಯಾರೇ ಇರಲಿ ನಮ್ಮ ಸೈನಿಕರು ಸುಮ್ಮನೆ ಬಿಡುವುದಿಲ್ಲ, ಇನ್ನು ಮುಂದೆ ವೈರಿ ರಾಷ್ಟ್ರಗಳ ಸಂಚುಗಳು ದೇಶದಲ್ಲಿ ಕೆಲಸ ಮಾಡುವುದಿಲ್ಲ. ಅದಕ್ಕೆ ಭಾರತೀಯ ಯೋಧರು ಅವಕಾಶ ಕಲ್ಪಿಸಿಕೊಡುವುದಿಲ್ಲವೆಂಬ ಸಂದೇಶವನ್ನು ಕೊಡಲಾಗಿದೆ ಎಂದರು.

ದೇಶದ ಹಿತಕ್ಕಾಗಿ ಜೀವದ ಹಂಗು ತೊರೆದು ಹೋರಾಡುವ ನಮ್ಮ ಸೈನಿಕರು ಈಗ ಶತೃರಾಷ್ಟ್ರ ಮತ್ತು ಭಯೋತ್ಪಾದಕರ ವಿರುದ್ಧ ಮಾಡಿರುವ ಕಾರ್ಯಾಚರಣೆ ಪ್ರಶಂಸನೀಯ. ದೇಶಕ್ಕಾಗಿ ಇಡೀ ಜೀವನ ಮುಡಿಪಾಗಿಡುವ ವೀರಯೋಧರ ಒಳಿತನ್ನು ಬಯಸುವುದು ಎಲ್ಲ ದೇಶವಾಸಿಗಳ ಕರ್ತವ್ಯ. ಈ ದಿಶೆಯಲ್ಲಿ ಔರಾದನ ಆರಾಧ್ಯದೈವ, ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾದಲ್ಲಿ ವಿಶೇಷ ಪೂಜೆ ನೆರವೇರಿಸಿ ದೇಶ ಕಾಯುವ ಯೋಧರಿಗೆ ಯಾವುದೇ ತೊಂದರೆ ಆಗದಂತೆ ಕಾಪಾಡುವಂತೆ ಪ್ರಾರ್ಥನೆ ಸಲ್ಲಿಸಿದ್ದೇನೆ ಎಂದರು.


ಭಾರತೀಯ ಸೈನಿಕರ ಮನೋಬಲ ಹೆಚ್ಚಿಸುವುದು ಮತ್ತು ಅವರ ಒಳಿತಿಗಾಗಿ ಎಲ್ಲರೂ ಪೂಜೆ, ಪ್ರಾರ್ಥನೆಗಳನ್ನು ನೆರವೇರಿಸುವುದು ಎಲ್ಲರ ಕರ್ತವ್ಯ. ದೇಶಾದ್ಯಂತ ಪೂಜಾ ಪ್ರಾರ್ಥನೆಗಳು ನಡೆಯುತ್ತಿವೆ. ಅದರಂತೆ ನಮ್ಮಲ್ಲಿಯೂ ಕೂಡ ಎಲ್ಲ ಕಡೆಗಳಲ್ಲಿ ಇಂತಹ ಪೂಜಾ ಕಾರ್ಯಕ್ರಮಗಳನ್ನು ಏರ್ಪಡಿಸಿ ದೇಶದ ಸೈನಿಕರ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಬೇಕೆಂದು ಸಾರ್ವಜನಿಕರಲ್ಲಿ ಕೋರಿದರು.

ಈಸಂದರ್ಭದಲ್ಲಿಮುಖಂಡರಾದ ರಾಮಶೆಟ್ಟಿಪನ್ನಾಳೆ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ದಯಾನಂದ ಘೂಳೆ, ಕೇರಬಾ ಪವಾರ್, ವೀರೇಶ ಅಲ್ಮಾಜೆ, ಖಂಡೋಬಾ ಕಂಗಟೆ, ಎಂ.ಡಿ ಸಲಾವುದ್ದಿನ್, ಮಹಾದೇವ ಅಲ್ಮಾಜೆ, ಶಿವಾಜಿ ಬೋಗಾರ್, ಸಂದೀಪ ಪಾಟೀಲನ ಸೇರಿದಂತೆ ಇತರರಿದ್ದರು.

# ಮೇ 12 ರಂದು 2569ನೇ ವೈಶಾಖ ಬುದ್ಧ ಪೂರ್ಣಿಮೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮೇ.09-ಕಲಬುರಗಿ ಜಿಲ್ಲಾಡಳಿತ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ 2569ನೇ ವೈಶಾಖ ಬುದ್ಧ ಪೂರ್ಣಿಮೆ ಕಾರ್ಯಕ್ರಮವನ್ನು ಇದೇ ಮೇ 12 ರಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ ಜಗತ್‌ನ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಬಿ.ಶ್ಯಾಮಸುಂದರ ರಸ್ತೆಯ ಲುಂಬಿನಿ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿದೆ. ಬೀದರ ವೈಶಾಲಿ ಬುದ್ಧ ವಿಹಾರ ಅಣದೂರನ ಪೂಜ್ಯ ಭಂತೆ ವರಜ್ಯೋತಿ ಅವರು ಸಾನಿಧ್ಯವಹಿಸುವರು. ಬುದ್ಧಿಸ್ಟ್ ವರ್ಲ್ಸ್ ಅಲೆಯನ್ಸ್ ಉಪಾಧ್ಯಕ್ಷ ಪೂಜ್ಯ ಭಂತೆ ಧಮ್ಮನಾಗ ಮಾಹಥೇರೋ ಮುಖ್ಯ ಪ್ರವಚನಕಾರರಾಗಿ ಭಾಗವಹಿಸುವರು.ರಾಜ್ಯಸಭೆಯ



ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್.ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಯಾಪುರೆ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಲಬುರಗಿ ಗ್ಯಾರಂಟಿ ಯೋಜನೆ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.



ಬಸವಕಲ್ಯಾಣ :- ತಾಲೂಕಿನ ಕೊಹಿನೂರ ಗ್ರಾಮದಲ್ಲಿ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಪ್ರಥಮ ವಚನ ರಥೋತ್ಸವಕ್ಕೆ ಚಾಲನೆ ನೀಡುವ ಸಮಾರಂಭದಲ್ಲಿ ಬೈಲೂರಿನ ಪೂಜ್ಯ ಶ್ರೀ ನಿಜಗುಣ ಪ್ರಭು ತೋಂಟದಾರ್ಯ ಮಹಾಸ್ವಾಮಿಗಳು. ಗೋಣಿ ರುದ್ರೇಶ್ವರ ಸ್ವಾಮಿಜಿ. ಉಸ್ತುರಿಯ ಪೂಜ್ಯ ಶ್ರೀ ಕೊರಣೇಶ್ವರ ಸ್ವಾಮಿಜಿ. ಗುಣತೀರ್ಥ ವಾಡಿಯ ಕಲ್ಯಾಣ ಮಹಾ ಮನೆಯ ಪೂಜ್ಯಶ್ರೀ ಬಸವಪ್ರಭು ಸ್ವಾಮೀಜಿ. ಮಲ್ಲಿನಾಥ ಹಿರೇಮಠ ಹಾರಕೂಡ. ಮುಖಂಡರಾದ ರತಿಕಾಂತ ಕೊಹಿನೂರ್ . ಶಿವಶರಣಪ್ಪ ಸಂತಾಜಿ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿವಿಧ ಯೋಜನೆಗಳ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 09-: 2025-26ನೇ ಸಾಲಿನ ಯಾದಗಿರಿ ಜಿಲ್ಲೆ ರೇಷ್ಮೆ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ರೇಷ್ಮೆ ಸಹಾಯಕ ನಿರ್ದೇಶಕರು ಅವರು ತಿಳಿಸಿದ್ದಾರೆ.

ಕೇಂದ್ರ ವಲಯ, ರಾಜ್ಯ ವಲಯ ಮತ್ತು ಜಿಲ್ಲಾ ವಲಯದ ಸರ್ಕಾರದ ವಿವಿಧ ಯೋಜನೆಗಳ ಅನುದಾನದಡಿಯಲ್ಲಿ ಸಾಮಾನ್ಯ, ವಿಶೇಷ ಘಟಕ ಎಸ್‌ಸಿಪಿ, ಗಿರಿಜನ ಟಿಎಸ್‌ಪಿ ಯೋಜನೆಯಡಿ ಯಾದಗಿರಿ ಜಿಲ್ಲೆಯ ಶಹಾಪೂರ, ಸುರಪುರ, ಯಾದಗಿರಿ, ಹುಣಸಗಿ, ವಡಗೇರಾ ಮತ್ತು ಗುರುಮಠಕಲ್ ತಾಲ್ಲೂಕುಗಳ ರೈತರು ರೇಷ್ಮೆ ಕೃಷಿ ಮಾಡಲು ಇಚ್ಛಿಸಿದಲ್ಲಿ ರೇಷ್ಮೆ ಕೃಷಿ ಮಾಡಲು ಯೋಗ್ಯವಾದ ನೀರಾವರಿ ಜಮೀನು ಹೊಂದಿರಬೇಕು, ಆಯಾ ತಾಲ್ಲೂಕಿನಲ್ಲಿ ಇಲಾಖಾ ಕಛೇರಿ ಅಥವಾ ರೇಷ್ಮೆ ವಿಸ್ತರಣಾಧಿಕಾರಿಗಳು ಅಥವಾ ವಲಯಾಧಿಕಾರಿಗಳಿಗೆ ಭೇಟಿ ಮಾಡಿ ಅರ್ಜಿ ಸಲ್ಲಿಸಬೇಕು, ಅಥವಾ ರೇಷ್ಮೆ ಸಹಾಯಕ ನಿರ್ದೇಶಕರು ಜಿಲ್ಲಾ ಪಂಚಾಯತ ಯಾದಗಿರಿ ಕಛೇರಿ ಜಿಲ್ಲಾಡಳಿತ ಭವನ ಮಿನಿ ವಿಧಾನಸೌಧ ಮೊದಲನೇ ಮಹಡಿ ಕೋಣೆ ಸಂಖ್ಯೆ 18 ಸಿ.ಬ್ಲಾಕ್ ಯಾದಗಿರಿ ಇಲ್ಲಿಗೆ ಅರ್ಜಿ ಸಲ್ಲಿಸಬೇಕು. ರೇಷ್ಮೆ ಕೃಷಿ ಮಾಡಲು ಜಮೀನಿಗೆ ಸಂಬಂಧಿಸಿದ ದಾಖಲೆಗಳನ್ನು ಪಹಣಿ, ಪ.ಜಾ, ಪ.ಪಂ ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಝರಾಕ್ಸ್, ಬ್ಯಾಂಕ್ ಖಾತೆ ಝರಾಕ್ಸಗಳು ಸಲ್ಲಿಸಬೇಕು, ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿಲ್ಲಾ ಪಂಚಾಯತ ರೇಷ್ಮೆ ಸಹಾಯಕ ನಿರ್ದೇಶಕರು ಮೊ.ನಂ.9535650729ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯು.ಟಿ ಖಾದರ್ ಗೆ ಪ್ರತಿಷ್ಠಿತ ಭಾವೈಕ್ಯತಾ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ



ಕೊಲ್ಹಾರ:ಮೇ.9: 20ನೇ ಶತಮಾನದ ಸೂಫಿ ಸಂತ ಶ್ರೀ ಗುರು ಅಲ್ ಹಾಜ್ ಶಾಹ ಮೊಹಮ್ಮದ್ ಅಬ್ದುಲ್ ಗಫ್ಫಾರ್ ಖಾದ್ರಿ ಅವರ ಉರುಸಿನ ನಿಮಿತ್ಯವಾಗಿ ಪ್ರತಿವರ್ಷ ಪಟ್ಟಣದ ಖಾನಕಾಯೇ ಗಫ್ಫಾರಿಯಾ ಆವರಣದಲ್ಲಿ ಹಮ್ಮಿಕೊಳ್ಳುವ ಸರ್ವಧರ್ಮ ಸದ್ಭಾವನ ಕಾರ್ಯಕ್ರಮದಲ್ಲಿ ಕೊಡಮಾಡುವ "ಅಲಹಾಬಾದ ಮೌಲಾನ ಭಾವೈಕ್ಯತಾ ಪ್ರಶಸ್ತಿ"ಗೆ ಪ್ರಸಕ್ತ ವರ್ಷ ಸ್ಪೀಕರ್ ಯು.ಟಿ ಖಾದರ್ ಆಯ್ಕೆಯಾಗಿದ್ದಾರೆ ಎಂದು ಆಯ್ಕೆ ಸಮಿತಿ ಅಧ್ಯಕ್ಷ ಕೃಷ್ಣ ಕೊಲ್ಹಾರ ಕುಲಕರ್ಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿನಾಂಕ 12-5-2025 ಸೋಮವಾರ 11:00 ಗಂಟೆಗೆ ಕೊಲ್ಹಾರ ಪಟ್ಟಣದ ಖಾನಕಾಯೇ ಗಫ್ಫಾರಿಯಾ ಆವರಣದಲ್ಲಿ ನಡೆಯುವ ಬೃಹತ್ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಹೇಮರೆಡ್ಡಿ ಮಲ್ಲಮ್ಮನವರ ಜಯಂತ್ಯೋತ್ಸವದ ನಿಮಿತ್ತ

## ಆದ್ದೂರಿಯಾಗಿ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ



ಚಿಟಗುಪ್ಪ:- ಶಿವಶರಣೆ ಹೇಮರಡ್ಡಿ ಮಲ್ಲಮ್ಮ, ಮೌನ ತಪಸ್ವಿನಿ ಅವರ ಅಂತರಂಗವು ಮೃದುವಾದಷ್ಟೇ ದೈವಿ ಸಾಧನೆಯಿಂದ ಹದವಾಗಿತ್ತು .ಇದೇ ಮೇ 10 ರಂದು ಮಹಾಶರಣೆ ಮಲ್ಲಮ್ಮಳ ಜಯಂತಿಯನ್ನು ಪಟ್ಟಣದಲ್ಲಿ ಅದ್ದುರಿಯಾಗಿ ಆಚರಣೆ ಮಾಡಲಾಗುತ್ತಿದೆ ಎಂದು ಉತ್ಸವ ಸಮಿತಿ ಅಧ್ಯಕ್ಷ ಕಿರಣರೆಡ್ಡಿ ತಿಳಿಸಿದ್ದಾರೆ. ಉತ್ಸವವನ್ನು ಸರ್ಕಾರ ಆಚರಿಸಲು ಕರೆ ಕೊಟ್ಟಿದೆ. ಬರೀ ಮಲ್ಲಮ್ಮಳ ಪೋಟೋ ಪೂಜಿಸಿದರೆ ಮಾತ್ರ ಅದು ಆಚರಣೆ ಅಲ್ಲ. ಅವಳ ಬದುಕಿನ ರೀತಿಯನ್ನು ಮೌಲ್ಯಗಳನ್ನು ತಿಳಿಸುವ ಕಾರ್ಯ ಜರುಗಬೇಕು.

ಭಾರತದೇಶ ಧರ್ಮದ ನೆಲೆ, ಭಕ್ತಿಯ ಬೀಡು ಋಷಿಗಳ ತಪೋಭೂಮಿಯೆಂದು ಪ್ರಸಿದ್ಧಿ ಪಡೆದಿದೆ. ದೇಶದಲ್ಲಿ ಶರಣರು, ಸಂತರು, ದಾರ್ಶನಿಕರು ಕಾಲಕಾಲಕ್ಕೆ ಜನಿಸಿ ಧರ್ಮದ ಮೂಲಕ ಜನರ ಬದುಕು ಹಸನುಗೊಳಿಸಿದ್ದಾರೆ. ಭರತ ಭೂಮಿಯಲ್ಲಿ ಸಾಧು ಸಂತರು, ಸಿದ್ಧಿಪುರುಷರು, ತಪಸ್ವಿಗಳು ಅವತರಿಸಿ ಈ ನೆಲವನ್ನು ಪಾವನ ಕ್ಷೇತ್ರವನ್ನಾಗಿ ಮಾಡಿದ್ದಾರೆ. ಆಧ್ಯಾತ್ಮಿಕ ಕ್ಷೇತ್ರಕ್ಕೆ ಮಹಿಳೆಯರೂ ಹಿಂದೆ ಬಿದ್ದಿಲ್ಲ. ಅವರಲ್ಲಿ ಅಕ್ಕಮಹಾದೇವಿ, ಹಡಪದ ಲಿಂಗಮ್ಮ ತಾಯಿ, ನೆಲ್ಲೂರು ನಿಂಬೆಕ್ಕ, ಸಂಚಿ ಹೊನ್ನಮ್ಮನಂತಹ ಮಹಾಶಿವಪರಣೆಯರು ಆಗಿ ಹೋಗಿ ಇಲ್ಲಿಯ ಆಧ್ಯಾತ್ಮಿಕ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಅಂಥ ಮಹಾಮಹಿಮರಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಒಬ್ಬಳು. ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರದ ಮೆರವಣಿಗೆಯನ್ನು ಪಟ್ಟಣದ ಕುನಬಿವಾಡ ಓಣಿಯ ಹನುಮಾನ ದೇವಸ್ಥಾನದಿಂದ ಆರಂಭಗೊಂಡು ಪ್ರಮುಖ ಬೀದಿಗಳ ಮೂಲಕ ಮೆರವಣಿಗೆಯನ್ನು ಪುನಃ ಹನುಮಾನ್ ದೇವಸ್ಥಾನಕ್ಕೆ ತಲುಪುತ್ತದೆ, ಆದ ಕಾರಣ ಸಮಸ್ತ ರೆಡ್ಡಿ ಸಮಾಜದವರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸ್ ಡಿಕ್ಕಿ:ಮಹಿಳೆ ಸಾವು

ಮಲ್ಲಮ್ಮ ನುಡಿ ವಾರ್ತೆ




ಸಿಂದಗಿ,ಮೇ.9-ಬಸ್ ಡಿಕ್ಕಿ ಹೊಡೆದು ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ನಡೆದಿದೆ. ಮೃತ ಮಹಿಳೆಯನ್ನು ಶಾಂತಾಬಾಯಿ ಯಲ್ಲಪ್ಪ ಬಂಡಿವಡ್ಡರ (50) ಎಂದು ಗುರುತಿಸಲಾಗಿದೆ. ಸಿಂದಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವಿಸ್ಮಯ ಮತ್ತು ಕೌತುಕಗಳು ತೇಜಸ್ವಿ ಸಾಹಿತ್ಯ ಸತ್ವ: ಶಶಿಕಾಂತ ಶೆಂಬೆಳ್ಳಿ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಮೆ, 9- ವಿಸ್ಮಯ ಮತ್ತು ಕೌತುಕಗಳು ತೇಜಸ್ವಿ ಅವರ ಸಾಹಿತ್ಯದ ಸತ್ವವಾಗಿವೆ. ನಿಸರ್ಗ ಸಹಜ ಬದುಕನ್ನು ಕಟ್ಟಿಕೊಂಡ ಹಲವು ಜೀವಿಗಳೇ ತೇಜಸ್ವಿ ಸಾಹಿತ್ಯದ ಕೇಂದ್ರ ಎಂದು ಹಿರಿಯ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಹೇಳಿದರು.

ಇಲ್ಲಿನ ಎಸ್ ಎಸ್ ಕೆ ಬಿ ಕಾಲೇಜಿನಲ್ಲಿ ಬೆಂಗಳೂರಿನ ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೀದರನ ಚಕೋರ ಸಾಹಿತ್ಯ ವಿಚಾರ ವೇದಿಕೆ ಹಾಗೂ ಎಸ್ ಎಸ್ ಕೆ ಬಸವೇಶ್ವರ ಪದವಿ ಕಾಲೇಜು ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಕೆ. ಪಿ. ಪೂರ್ಣಚಂದ್ರ ತೇಜಸ್ವಿಯವರ 'ಹೊಸ ವಿಚಾರಗಳು' ಕುರಿತ ವಿಶೇಷ ಉಪನ್ಯಾಸ ಸಮಾರಂಭದಲ್ಲಿ ಮಾತನಾಡಿ , ತೇಜಸ್ವಿ ಅವರು ಕನ್ನಡದ ಬಹುದೊಡ್ಡ ಓದುಗ ಬಳಗ ಹೊಂದಿದ ಲೇಖಕರು ಎಂದರು. ತೇಜಸ್ವಿ ಬರಹದಲ್ಲಿ ಕಾಡು, ನೆಲ, ನಿಸರ್ಗದ ವಿಸ್ಮಯ ಮತ್ತು ಕೌತುಕಗಳು ಅಡಕವಾಗಿದೆ ಎಂದರು.ಪ್ರತಿಯೊಂದು ಕೆಲಸದಲ್ಲಿ ಶ್ರದ್ಧೆ ಇರಬೇಕು. ಓದುವುದು ಒಂದು ತಪಸ್ಸಿನಂತೆ ಪರಿಗಣಿದರೆ ಭವಿಷ್ಯ ರೂಪಿಸಿಕೊಳ್ಳುತ್ತದೆ. ಸದ್ಯದ ಸಂದರ್ಭದಲ್ಲಿ ಹಲವು ಅವಕಾಶಗಳಿವೆ. ಅದನ್ನು ಬಳಸಿಕೊಳ್ಳಬೇಕು. ಜ್ಞಾನದ ವಲಯವನ್ನು ವಿಸ್ತರಿಸಲು, ಅರ್ಥೈಸಿಕೊಳ್ಳಲು ಯತ್ನಿಸಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಸಾಮಾಜಿಕ ಜಾಲತಾಣಗಳಿಗೆ ಅಧಿಕೃತತೆ ಇರುವುದಿಲ್ಲ. ಅಲ್ಲಿ ಹುಸಿ ಸುದ್ದಿಗಳಿರುತ್ತವೆ. ಪತ್ರಿಕೆಗಳಿಗೆ ಹಾಗೂ ಕೃತಿಗಳಿಗೆ ಅಧಿಕೃತ ಬರಹಗಾರರಿರುತ್ತಾರೆ. ಸದ್ಯದ ವಿದ್ಯಮಾನಗಳನ್ನು ಅರಿಯಲು ಪತ್ರಿಕೆಗಳ ಅಗತ್ಯವಿದೆ ಎಂದರು.

ಓದು ಅಧ್ಯಯನ ವ್ಯಕ್ತಿಯನ್ನು ಸ್ವಾವಲಂಬಿ ಮತ್ತು ಸ್ವಾಭಿಮಾನಿಯಾಗಿ ಬೆಳೆಸುತ್ತವೆ. ನಿಮ್ಮ ಆಸಕ್ತಿಯ ಕ್ಷೇತ್ರದಲ್ಲಿ ನೀವು ಮುಂದುವರೆದರೆ ಸೃಜನಶೀಲತೆ ಸೃಷ್ಟಿಸಬಹುದು. ಮಾಧ್ಯಮ ಕ್ಷೇತ್ರದಲ್ಲಿ ಹಲವು ಅವಕಾಶಗಳಿವೆ. ಪ್ರತಿಭೆಗೆ ಹೆಚ್ಚು ಆದ್ಯತೆಯಿದೆ. ಮಾಧ್ಯಮಕ್ಷೇತ್ರಕ್ಕೆ ಹೊಸ ಪೀಳಿಗೆ ಪ್ರವೇಶ ಅಗತ್ಯವಿದೆ ಎಂದರು. ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಉದ್ಘಾಟಿಸಿದರು ಮಾತನಾಡಿ, ಕನ್ನಡ ಸಾಹಿತ್ಯಕ್ಕೆ ಎರಡು ಸಾವಿರಕ್ಕೂ ಹೆಚ್ಚು ವರ್ಷಗಳ ಚರಿತ್ರೆಯಿದೆ. ಶ್ರೇಷ್ಠ ಸಾಹಿತ್ಯ ಕೃತಿಗಳ ಓದಿನಿಂದ ಅರಿವು ವಿಸ್ತರಿಸಿಕೊಳ್ಳಬಹುದು ಎಂದು

ಹೇಳಿದರು. ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಈ ಸಮಾರಂಭ ಆಯೋಜಿಸಲಾಗಿದೆ.ವಿದ್ಯಾರ್ಥಿಗಳಲ್ಲಿ ವೈಚಾರಿಕತೆ, ವಿವೇಚನೆಗಳನ್ನು ಮೂಡಿಸುವ ಕೆಲಸ ಕರ್ನಾಟಕ ಸಾಹಿತ್ಯ ಅಕಾಡೆಮಿ ಮಾಡುತ್ತದೆ. ಹೊಸ ಪ್ರತಿಭೆಗಳಿಗೆ ಸಾಹಿತ್ಯ ಅಕಾಡೆಮಿ ವೇದಿಕೆಯಾಗಿದೆ ಎಂದರು. ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ 'ಹೊಸ ವಿಚಾರಗಳು' ಕೃತಿಯ ಕುರಿತು ವಿಶೇಷ ಉಪನ್ಯಾಸ ನೀಡಿದ ಶ್ರೀ ಬಸವೇಶ್ವರ ಪದವಿ ಕಾಲೇಜು ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ತೇಜಸ್ವಿ ಅವರ ಬರಹ ಸಾಂಸ್ಕೃತಿಕ ಸಂಶೋಧನೆಯ ಸ್ವರೂಪವಾಗಿದೆ. ಸಣ್ಣ ಸಣ್ಣ ಜೀವಿಗಳಿಂದ, ಸಂಗತಿಗಳಿಂದ, ದೊಡ್ಡ ಪ್ರಾಣಿಗಳ ಬಗೆಗೂ ಬರೆದಿದ್ದಾರೆ. ಕಾಡಿನ ಕ್ರೌರ್ಯದಂತೆ ನಾಗರಿಕ ಜಗತ್ತಿನ ಕ್ರೌರ್ಯದ ಕಥನವು ಅವರ ಬರಹಗಳಲ್ಲಿ ಅಡಕವಾಗಿದೆ ಎಂದರು. ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಒಟ್ಟು ಬರಹದಲ್ಲಿ ಸಮಾಜ, ರಾಜಕಾರಣ, ಪರಿಸರ, ಆರ್ಥಿಕತೆ, ಸಾಹಿತ್ಯ ಸೇರಿ ಲೋಕ ವಿಮರ್ಶೆಯ ಮಾದರಿಯೊಂದು ಕಾಣುತ್ತೇವೆ. ಅವರ ಬರಹಕ್ಕೆ ಸಮಕಾಲೀನ ಸ್ಪಂದನೆಯ ಗುಣವಿದೆ ಎಂದರು. ಲೋಕ ವಿಮರ್ಶೆ ಹಾಗೂ ಜೀವನ ಶೋಧ ತೇಜಸ್ವಿ ಬರಹದ ತಾತ್ವಿಕತೆಯಾಗಿದೆ. ಸಮಾಜದ ಸ್ಥಗಿತತೆ ಮೀರುವ ದಾರಿಗಳು, ಮನುಷ್ಯನೂ ಸೇರಿ ಎಲ್ಲ ಜೀವಿಗಳ ಅಸ್ತಿತ್ವ ಅರಿಯಲು, ಪರಿಸರ ಪ್ರಜ್ಞೆ ರೂಪಿಸಿಕೊಳ್ಳಲು, ಲೋಕದ ಸಂಕೀರ್ಣತೆ ಕಂಡುಕೊಳ್ಳಲು ತೇಜಸ್ವಿ ಬರಹ ದಾರಿಯಾಗಿವೆ.

ಜಾಗತಿಕ ಅರ್ಥ ವ್ಯವಸ್ಥೆ, ರೈತರ ಕಷ್ಟಗಳು, ರಾಜಕಾರಣಿಗಳ ಬೇಜವಾಬ್ದಾರಿ, ಕನ್ನಡಕ್ಕೆ ತೆರೆದುಕೊಳ್ಳಬೇಕಾದ ತಂತ್ರಜ್ಞಾನಗಳ ಬಗೆಗೆ ಗಾಢವಾದ ಚಿಂತನೆ ಕಟ್ಟಿಕೊಟ್ಟಿದ್ದಾರೆ. ಜಾಗತಿಕರಣ ಹಾಗೂ ಮುಕ್ತ ಮಾರುಕಟ್ಟೆಯ ಬಂಡವಾಳಶಾಹಿಗಳ ಇದಿರು ಎಲ್ಲರೂ ಗ್ರಾಹಕರಾಗಿದ್ದೇವೆ. ಮನುಷ್ಯ ಲೋಕ ಸರಕು ಸಂಸ್ಕೃತಿಯಾಗಿ ಮಾರ್ಪಟ್ಟಿದೆ. ವ್ಯಕ್ತಿಯ ಜೀವನ ವಿಧಾನವೇ ವ್ಯವಹಾರಿಕವಾದ ಕುರಿತು 'ಹೊಸ ವಿಚಾರಗಳು' ಕೃತಿಯಲ್ಲಿ ಅವರು ಚರ್ಚಿಸಿದ್ದಾರೆ ಎಂದರು. ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಪ್ರಾಚಾರ್ಯ ಡಾ. ಶಿವಕುಮಾರ ಪಾಟೀಲ ಮಾತನಾಡಿ, ಪುಸ್ತಕ ಓದುವ ಹವ್ಯಾಸ ಕಡಿಮೆಯಾಗಿದ್ದು ಅತ್ಯಂತ ನೋವಿನ ಸಂಗತಿ. ಓದಿನಿಂದಲೇ ಜ್ಞಾನದ ವಿಸ್ತಾರ ಸಾಧ್ಯ. ಓದಿನ ಹಸಿವಿನಿಂದಲೇ ತಿಳುವಳಿಕೆ ಹೆಚ್ಚಾಗುತ್ತದೆ. ಪ್ರಾಣಿ ಮತ್ತು ಪಕ್ಷಿಲೋಕದ ಬಗೆಗೆ ಹೆಚ್ಚು ನಿರ್ದಿಷ್ಟ ಮತ್ತು ವೈಜ್ಞಾನಿಕವಾಗಿ ತೇಜಸ್ವಿ ಅವರು ಬರೆದಿದ್ದಾರೆ ಎಂದರು. ಭಾಲ್ಕಿಯ ನಿವೃತ್ತ ಗ್ರಂಥಪಾಲಕ ಉಮೇಶ ಮಾಸಿಮಾಡೆ, ಬೀದರ ಚ- ಕೋರ ಸಾಹಿತ್ಯ ವಿಚಾರ ವೇದಿಕೆ ಸಂಯೋಜಕಿ ಡಾ. ಮಕ್ತುಂಬಿ ಎಂ ಮಾತನಾಡಿದರು. ಈ ವೇಳೆ ಪ್ರತಿಭಾವಂತ ವಿದ್ಯಾರ್ಥಿಗಳಾದ ಶಬನಮ್ ಹಾಗೂ ಜಯಶ್ರೀ ಸ್ವಾಮಿ ಅವರಿಗೆ ಸನ್ಮಾನಿಸಲಾಯಿತು. ಡಾ. ಸುರೇಶ ಎಚ್.ಆರ್, ಕಲ್ಯಾಣಪ್ಪಾ ನಾಗವದಗಿ, ನಾಗಪ್ಪಾ ನಿಣ್ಣೆ, ಸೂರ್ಯಕಾಂತ ನಾಸೆ, ಭಾರತಿ ಮಠ, ಶಿಲ್ಪಾ ಬಿರಾದಾರ, ಪೂಜಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪ್ರೊ. ವಿಠೋಬಾ ಡೊಣ್ಣೆಗೌಡರ್ ಸ್ವಾಗತಿಸಿದರು . ಭೀಮಾಶಂಕರ ಪೂಜಾರಿ ನಿರೂಪಿಸಿದರು. ಡಾ. ರಮೇಶ ಕೆ. ಬಿ. ವಂದಿಸಿದರು.

## ಆಪರೇಷನ್ ಸಿಂಧೂರ ಯಶಸ್ವಿ ಹಿನ್ನಲೆ ದೇಗುಲದಲ್ಲಿ ವಿಶೇಷ ಪೂಜೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ.09:ಭಾರತೀಯ ಸೇನೆಯು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಆಪರೇಷನ್ ಸಿಂಧೂರ ಯಶಸ್ವಿಯಾಗಿ ನಡೆಸಿದೆ.

ಬಳ್ಳಾರಿ ಬಿಜೆಪಿ ಘಟಕದ ವತಿಯಿಂದ ಕನಕ ದುರ್ಗಮ್ಮ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ ನೂರಾಒಂದು ತೆಂಗಿನಕಾಯಿ ಒಡೆದು ಪ್ರಾರ್ಥನೆ ಮಾಡಲಾಯಿತು.

ಭಾರತೀಯ ಯೋಧರಿಗೆ ಒಳ್ಳೆಯದಾಗಲಿ ಎಂದು ಹಾರೈಸಿ ಇಂದು ಮುಂಜಾನೆ ಸೈನಿಕರಿಗಾಗಿ ದೇವಿಗೆ ಪೂಜೆ ಸಲ್ಲಿಕೆ ಮಾಡಲಾಗಿದೆ. ದೇಶಕಾಯುವ ಯೋಧರಿಗೆ ಯಾವುದೇ ತೆ- ೊಂದರೆ ಆಗದಂತೆ ಕಾಪಾಡುವಂತೆ ಪ್ರಾರ್ಥಿಸಿ ಸಂಕಲ್ಪ ಮಾಡಿದ್ದಾರೆ. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ಬಿಜೆಪಿ ಮುಖಂಡ ದಿವಾಕರ್, ಪಾಲಿಕೆ ಸದಸ್ಯ ಗೋವಿಂದರಾಜುಲು, ಶ್ರೀನಿವಾಸ್ ಮೋತ್ಕರ್, ಗುಡಿ ಘಂಟಿ ಹನುಮಂತಪ್ಪ, ಸುರೇಖಾ ಮಲ್ಲನಗೌಡ, ಕೆ.ಎಸ್.ರಾಮಾಂಜಿನಿ, ಗಡ್ಡಂ ತಿಮ್ಮಪ್ಪ, ರಾಣಿತೋಟ ವೀರೇಶ್, ಉಜ್ವಲ, ರಘು, ಮತ್ತಿತರರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ಕ್ಕೆ ನೊಂದಾಯಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ



ಬೀದರ:ಮೇ.9:- 2025ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ-1ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಪರೀಕ್ಷೆ-2ನ್ನು ದಿನಾಂಕ: 26-05-2025 ರಿಂದ 02-06-2025ರವರೆಗೆ ನಡೆಸಲಾಗುತ್ತಿದೆ. ಪರೀಕ್ಷೆ-1ರಲ್ಲಿ ನೊಂದಾಯಿಸಿಕೊಂಡು ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆ-2ರಲ್ಲಿ ನೊಂದಾಯಿಸಲು ಯಾವುದೇ ಶುಲ್ಕ ಪಡೆಯುವುದಿಲ್ಲ. ಕಾರಣ ಜಿಲ್ಲೆಯ ಪರೀಕ್ಷೆ-1ರಲ್ಲಿ ಉತ್ತೀರ್ಣರಾಗದ ಎಸ್.ಎಸ್. ಎಲ್.ಸಿ. ವಿದ್ಯಾರ್ಥಿಗಳು ಈ ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಧರ್ಮಸ್ಥಳ ಟ್ರಸ್ಟ್ ವತಿಯಿಂದ ದೇವಸ್ಥಾನ ಜಿರ್ಣೋದ್ದಾರ ಕೆಲಸಕ್ಕೆ ಒಂದು ಲಕ್ಷರೂಪಾಯಿ ಡಿ. ಡಿ. ಮಂಜೂರು



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ. 09.ತಾಲೂಕು ಮೊತಕಪಲ್ಲಿ ವಲಯದ ಕಾನಾಗಡ್ಡ ಕಾರ್ಯಕ್ಷೇತ್ರದಲ್ಲಿ ಶ್ರೀ ಮಲ್ಲಯ್ಯ ದೇವಸ್ಥಾನದ ಜೀರ್ಣೋದ್ಧಾರ-ಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪರಮಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಪ್ರಸಾದ ರೂಪದಲ್ಲಿ 100000/- (1ಲಕ್ಷ ರೂ) ಮಂಜೂರು ಮಾಡಿದ್ದು.

ಮೊತ್ತದ ಡಿ ಡಿ ಯನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಲ್ಬುರ್ಗಿ ಜಿಲ್ಲಾ ನಿರ್ದೇಶಕರಾದ ಗಣಪತಿ ಮಾಳಂಜಿ ಅವರು ದೇವಸ್ಥಾನದ ಕಮಿಟಿಯ ಅಧ್ಯಕ್ಷರಾದ ರವಿಕುಮಾರ್ ಅವರಿಗೆ ಹಸ್ತಾಂತರ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಹಲವಾರು ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಯಾವ ಊರಿನಲ್ಲಿ ದೇವಸ್ಥಾನಗಳು ಚೆನ್ನಾಗಿರುತ್ತವೆಯೋ ಆ ಊರಿನಲ್ಲಿ ಉತ್ತಮ ಸಂಸ್ಕಾರ ಇರುತ್ತದೆ ಮನುಷ್ಯನಿಗೆ ಹಾಗೂ ಸಕಲ ಜೀವರಾಶಿಗಳಿಗೆ ಏನಾದರೂ ತೊಂದರೆಯಾದಾಗ ಮೊದಲು ನೆನೆಯೋದೇ ದೇವರನ್ನು ಹಾಗಾಗಿ ನಮ್ಮನ್ನು ಕಾಪಾಡುವ ಆ ದೇವರಿಗೆ ಒಂದು ಉತ್ತಮವಾದ ಮಂದಿರವನ್ನು ನಿರ್ಮಾಣ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ, ಆದರೆ ಇಂತಹ ದೇವಸ್ಥಾನ ಗಳನ್ನು ನಿರ್ಮಾಣ ಮಾಡುವುದು ಯಾವುದೇ ಒಬ್ಬ ವ್ಯಕ್ತಿಯಿಂದ ಸಾಧ್ಯವಿಲ್ಲ ಅದಕ್ಕೆ ಎಲ್ಲರೂ ಕೈಜೋಡಿಸಿದಾಗ ಮಾತ್ರ ಆ ಕಾರ್ಯ ಪೂರ್ಣಗೊಳ್ಳುತ್ತದೆ ಎಂದರು. ಇದೆ ಸಂಧರ್ಭದಲ್ಲಿ ಸ್ಥಳೀಯ ಗ್ರಾಮದ ಹಿರಿಯರು ಧರ್ಮಸ್ಥಳ ಸಂಸ್ಥೆಯ ಪದಾಧಿಕಾರಿಗಳು ಇದ್ದರು.

# ಟೆಕ್ನೋತ್ಸವ ಯುಕ್ತಿ -2025 ಅದ್ಭುತ ತೆರೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 09 : ನಗರದ ಹೊರವಯದಲ್ಲಿರುವ ಲಿಂಗರಾಜಅಪ್ಪ್ಇಂಜಿನಿಯರಿಂಗ್ ಕಾಲೇಜಿನಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಮಾತೆ ಡಾ. ದಾಕ್ಷಾಯಿಣಿ 9ನೇ ಪೀಠಾಧಿಪತಿಯಾದ ಪೂಜ್ಯ ದೊಡ್ಡ ಅಪ್ಪ ವರ್ ಆಶೀರ್ವಾದದಿಂದ ಎರಡು ದಿವಸದ *ಟೆಕ್ನೋತ್ಸವ ಯುಕ್ತಿ 2025* ಸಮಾರೋಪ ಕಾರ್ಯಕ್ರಮ ಜರಗಿತು. 8ನೆ ಮೇ ಅಂತರ್ ಕಾಲೇಜು ಕ್ರೀಡಾಕೂಟ ಹಾಗೂ ತಂತ್ರಜ್ಞಾನ ಸಮಾರೋಪ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು,. ಈ ಕಾರ್ಯ ಕ್ರಮವನ್ನು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ,ಶ್ರೀ ಬಸವರಾಜ್ ದೇಶಮುಖ ,ಕಾಲೇಜಿನ ನಿರ್ದೇಶಕರದ ಶರಣಬಸಪ್ಪ ಎಸ್ ದೇಶಮುಖ್ ಅವರು, ಮುಖ್ಯ ಅತಿಥಿಯಾಗಿ ಆಗಮಿಸಿದ ಶರಣಬಸವೇಶ್ವರ ವಿಶ್ವವಿದ್ಯಾಲಂಯದ ಉಪಕುಲಪತಿಯಾದ ಡಾಕ್ಟರ್ ಅನಿಲ್ ಕುಮಾರ್ ಬಿಡವೆ ಜಂಟಿಯಾಗಿ ಉದ್ಘಾಟಿಸಿದರು. ಉದ್ಘಾಟಿಸಿ ಮಾತನಾಡಿದ ಡಾಕ್ಟರ್ ಬಿಡವೆ ಅವರು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದರೆ ಸಾಕು ಅದು ಬಹುಮಾನ ಗೆದ್ದಕ್ಕಿಂತ ಹೆಚ್ಚಾಗಿರುತ್ತದೆ, ಮತ್ತು ಪ್ರಸ್ತುತ ಪ್ರಚತ್ತಲ್ಲಿರುವ ಎಲ್ಲಾ ವಿಭಾಗದ ವಿದ್ಯಾರ್ಥಿಗಳಿಗೆ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಟೆಕ್ನಾಲಜಿಯನ್ನು ಕಲಿಯಬೇಕೆಂದು ಕರೆಯ ನೀಡಿದರು.

ಕಾರ್ಯದರ್ಶಿಗಳು ಮಾತನಾಡಿ ವಿದ್ಯಾರ್ಥಿಗಳು ಎಲ್ಲಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ಸಂಶೋಧನೆಯಲ್ಲಿ ಉತ್ತಮ ಸಾಧನೆ ಮಾಡಬೇಕೆಂದು ಕರೆ ನೀಡಿದರು . ಗೌರವ ಅತಿಥಿಯಾಗಿ ಶರಣಬಸವೇಶ್ವರ ರೆಸಿಡೆನ್ಸಿ ಇನ್ ಕಾಲೇಜಿನ ಪ್ರಾಂಶುಪಾಲರಾದ ಡಾಕ್ಟರ್ ಸತೀಶ್ ಪ್ರತಪೂರ್ರವರು ಅವರು. ಅತ್ಯುತ್ತಮ ಹೊರಹೋಗೋವ (ಕೊನೆಯ ವರ್ಷದ) ವಿದ್ಯಾರ್ಥಿಯಾಗಿ ಆಯ್ಕೆಯಾದ ಲಲಿತ್ ಕುಮಾರ್ ಬಾಬನೂರ್ ವಿಶೇಷವಾಗಿ ಸನ್ಮಾನ ಮಾಡಲಾಯಿತು. ಮತ್ತು ಅತ್ಯಂತ ಕ್ರಿಯಾಶೀಲ ವಿದ್ಯಾರ್ಥಿಯಾಗಿ ಆಯ್ಕೆಯಾದ ಕುಮಾರಿ ಆಕಾಂಕ್ಷ ಅವರಿಗೂ ಕೂಡ ವಿಶೇಷವಾಗಿ ಸನ್ಮಾನಿಸಲಾಯಿತು.

ಎರಡು ದಿವಸದ ಕಾರ್ಯಕ್ರಮಕ್ಕೆ ಮುಖ್ಯ ಪ್ರಾಯೋಜಕರಾದ ಝೀ ಲರ್ನಿಂಗ್ ಲ್ಯಾಬ್ ಬೆಂಗಳೂರು ಇವರಿಗೂ ವಿಶೇಷ ಸನ್ಮಾನ ಮಾಡಲಾಯಿತು, ಮತ್ತು ಇತರ ಪ್ರಾಯೋಜಕರಿಗೂ ವೇದಿಕೆ ಮೇಲೆ ಸನ್ಮಾನಿಸಲಾಯಿತು. ಎರಡು ದಿವಸದ ವಿವಿಧ ಚಟುವಟಿಕೆ ಹಾಗೂ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಹಾಗೂ ಟ್ರೋಫಿಯನ್ನು ನೀಡಲಾಯಿತು. ಎಲ್ಲಾ ಚಟುವಟಿಕೆಯಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರಥಮ ಸ್ಥಾನವನ್ನು ಪಡೆದ ಶರಣಬಸವೇಶ್ವರ ವಿಶ್ವವಿದ್ಯಾಲಯಕ್ಕೆ ಪ್ರಥಮ ಬಹುಮಾನ, ಹಾಗೂ ಬೀದರ್ ನ ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜಿಗೆ ದ್ವಿತೀಯ ಸ್ಥಾನದ ಟ್ರೋಫಿಯನ್ನು ನೀಡಲಾಯಿತು.

2025ರ ಕೆಸಿಎಸ್‌ಟಿ ಪ್ರೊಜೆಕ್ಟ್ ನಲ್ಲಿ ಆಯ್ಕೆ ಆದ ಮಾರ್ಗದರ್ಶಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ವೇದಿಕೆ ಮೇಲಿದ್ದ ಗಣ್ಯರಿಂದ 2024 25 ನೇ ಸಾಲಿನ ಮಾವಿದ್ಯಾಲಯದ ವಿವಿಧ ಚಟುವಟಿಕೆಗಳ ವಿವರಣೆ (prospects) ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಪ್ರಾಂಶುಪಾಲರಾದ

ಡಾಕ್ಟರ್ ವಿನಿಜತಾ ಪಾಟೀಲ್ ಸ್ವಾಗತಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ಡಾ-ಕ್ಟರ್ ವಿವೇಕ್ ಜಲಾದಿ , ವಂದನಾರ್ಪಣೆಯನ್ನು ಡಾಕ್ಟರ್ ಗುರುರಾಜ್ ನಾಸೇ ಅವರು ಮಾಡಿದರು. ವಿವಿಧ ವಿಭಾಗದ ಮುಖ್ಯಸ್ಥರು, ಉಪನ್ಯಾಸಕರು ಮಹಾವಿದ್ಯಾಲಯದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಾಲಕ ವೃಂದದವರು ಪಾಲ್ಗೊಂಡಿದ್ದರು.

# ಜಾತಿ ಗಣತಿ ಸಮೀಕ್ಷೆಗೆ ತಾಂತ್ರಿಕ ತೊಡಕು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 09 : ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ವರ್ಗೀಕರಣಕ್ಕೆ ರಾಜ್ಯಸರ್ಕಾರದಿಂದ ಕೈಗೊಂಡಿರುವ ಜಾತಿ ಗಣತಿ ಸಮೀಕ್ಷೆ ಕಾರ್ಯಕ್ಕೆ ತಾಂತ್ರಿಕ ತೊಡಕು ಎದುರಾಗಿದೆ.

ಮೇ 5ರಿಂದ ಜಿಲ್ಲೆಯಲ್ಲಿ ಸಮೀಕ್ಷೆಕಾರ್ಯ ಆರಂಭಗೊಂಡಿದೆ. ಮೊದಲ ಹಂತದ ಸಮೀಕ್ಷೆ ಮೇ 17ರ ವರೆಗೆ ಜರುಗಲಿದೆ.

ಜಿಲ್ಲೆಯ ಆಯಾ ವಿಧಾನಸಭಾ ಮತಕ್ಷೇತ್ರದ ಮತಗಟ್ಟೆ ಅಧಿಕಾರಿಗಳ (ಬಿಎಲ್‌ಒ) ಮೂಲಕ ಸಮೀಕ್ಷೆ ಕೈಗೊಳ್ಳಲಾಗಿದೆ. ಸರ್ಕಾರ ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಮೊಬೈಲ್ ಮೂಲಕ ಮಾಹಿತಿ ದಾಖಲಿಸಲಾಗುತ್ತಿದೆ. ಆದರೆ, ಪದೇ ಪದೇ ತಾಂತ್ರಿಕ ದೋಷ ಕಾಣಿಸಿಕೊಳ್ಳುತ್ತಿರುವ ಕಾರಣ ಸಮೀಕ್ಷಾ ಕಾರ್ಯ ನಿಧಾನ ಗತಿಯಲ್ಲಿ ನಡೆ-ಯುತ್ತಿದೆ. ಸಮೀಕ್ಷೆಯಲ್ಲಿ ತೊಡಗಿರುವ ಬಿಎಲ್‌ಒಗಳು ಸಹ ಈ ವಿಷಯವನ್ನು 'ಪ್ರಜಾವಾಣಿ'ಗೆ ವಿಷಯ ಖಚಿತಪಡಿಸಿದ್ದಾರೆ.

ತಂತ್ರಾಂಶದಲ್ಲಿ ಸಾಕಷ್ಟು ಮಾಹಿತಿಗಳನ್ನು ದಾಖಲಿಸಬೇಕಿದೆ. ಆದಕಾರಣ ಒಂದೇ ಮನೆಯಲ್ಲಿ ಐದಾರೂ ಜನರಿದ್ದರೆ ಸಾಕಷ್ಟು ವಿಳಂಬವಾಗುತ್ತಿದೆ. ಅಲ್ಲದೇ ಎಲ್ಲ ವಿವರ ದಾಖಲಿಸಿದ ನಂತರ 'ಸಬ್‌ಮಿಟ್' ಮಾಡುವಾಗ ತಾಂತ್ರಿಕ ದೋಷ ಕಾಣಿಸಿಕೊಳ್ಳುತ್ತಿದೆ. ಇದರಿಂದಾಗಿ ಎಲ್ಲ ವಿವರ ಮತ್ತೆ ದಾಖಲಿಸಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಇದು ಗಣತಿದಾರರಿಗೂ ಕಿರಿಕಿರಿ ಉಂಟು ಮಾಡಿದೆ.

ಮೊದಲ ದಿನದಿಂದಲೇ ತಾಂತ್ರಿಕ ಸಮಸ್ಯೆ ಕಾಣಿಸಿಕೊಳ್ಳುತ್ತಿದೆ. ಆದರೆ, ಇದುವರೆಗೆ ಅದನ್ನು ಸರಿಪಡಿಸುವ ಗೋಜಿಗೆ ಹೋಗಿಲ್ಲ. ಗುರುವಾರ (ಮೇ 8) ಕೂಡ ಹಲವೆಡೆ ಇಂತಹುದೇ ಸಮಸ್ಯೆ ಆಗಿರುವುದು ಗೊತ್ತಾಗಿದೆ. ಗಣತಿದಾರರು ತಂತ್ರಜ್ಞರೊಂದಿಗೆ ಈ ವಿಷಯ ಕೂಡ ಹಂಚಿಕೊಂಡಿದ್ದಾರೆ. ಇದರಿಂದಾಗಿ ಕೆಲವೆಡೆ ಪರಿಶಿಷ್ಟ ಜಾತಿಯೇತರ ಮನೆಗಳ ವಿವರವಷ್ಟೇ ದಾಖಲಿಸಿ, ತಾಂತ್ರಿಕ ಸಮಸ್ಯೆ ಬಗೆಹರಿದ ನಂತರ ಪರಿಶಿಷ್ಟ ಜಾತಿಯವರ ವಿವರ ದಾಖಲಿಸುವಂತೆ ಸೂಚನೆ ನೀಡಲಾಗಿದೆ. ಪರಿಶಿಷ್ಟ ಜಾತಿಯವರಾಗಿದ್ದರೆ ಸಾಕಷ್ಟು ವಿವರಗಳನ್ನು ದಾಖಲಿಸಬೇಕಾಗುತ್ತದೆ. ಆದರೆ, ಪರಿಶಿಷ್ಟ ಜಾತಿಯೇತರರ ಮನೆಗಳಿದ್ದರೆ ವಿವರಗಳನ್ನು ದಾಖಲಿಸಬೇಕಿಲ್ಲ. ಆದಕಾರಣ ಹೀಗೆ ಮಾಡಲಾಗುತ್ತಿದೆ ಎಂದು ಗಣತಿದಾರರು ತಿಳಿಸಿದ್ದಾರೆ.

'ಪೂರ್ವಪರಗಳನ್ನು ಪರಿಶೀಲಿಸದೇ ತಂತ್ರಾಂಶವನ್ನು ಅಭಿವೃದ್ಧಿಪಡಿಸಿರುವ ಸಾಧ್ಯತೆ ಇದೆ. ಆದಕಾರಣ ಪದೇ ಪದೇ ತಾಂತ್ರಿಕ ಸಮಸ್ಯೆ ಎದುರಾಗುತ್ತಿದೆ. ಇದರಿಂದ ಕಿರಿಕಿರಿ ಉಂಟಾಗುತ್ತಿದೆ. ಒಬ್ಬ ವ್ಯಕ್ತಿಯ ಮಾಹಿತಿ ಅಪ್‌ಲೋಡ್ ಮಾಡಬೇಕಾದರೆ ಸಾಕಷ್ಟು ವಿವರಗಳನ್ನು ತುಂಬಬೇಕಾಗಿದೆ. ಸಮಸ್ಯೆ ಕಾಣಿಸಿಕೊಂಡಾಗ ತಂತ್ರಜ್ಞರಿಗೆ ತಿಳಿಸಿದರೆ, ಈ ವಿಷಯ ಮೇಲಿನವರ ಗಮನಕ್ಕೆ ತರಲಾಗಿದೆ ಎಂದು ಹೇಳುತ್ತಾರಷ್ಟೇ. ನಾಲ್ಕು ದಿನಗಳಿಂದ ಸಮೀಕ್ಷೆ ನಡೆಸಲಾಗುತ್ತಿದೆ. ಆದರೆ, ಈ ಸಮಸ್ಯೆಗೆ ಪರಿಹಾರ ಸಿಕ್ಕಿಲ್ಲ. ಇದೇ ರೀತಿ ಸಮಸ್ಯೆಯಾಗುತ್ತಿದ್ದರೆ ನಿಗದಿತ ಅವಧಿಯಲ್ಲಿ ಕೆಲಸ ಮುಗಿಯುವುದು ಅನುಮಾನ' ಎಂದು ಹೆಸರು ಹೇಳಲಿಚ್ಛಿಸದ ಗಣತಿದಾರರೊಬ್ಬರು ತಿಳಿಸಿದ್ದಾರೆ.

ಈ ಸಂಬಂಧ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಸಂಪರ್ಕಿಸಿದಾಗ ಅವರು ಮಾಹಿತಿಗೆ ಲಭ್ಯರಾಗಲಿಲ್ಲ.

'ಸರ್ಕಾರ ಕಾಟಾಚಾರಕ್ಕೆ ಸಮೀಕ್ಷೆ ಮಾಡಿಸುತ್ತಿದೆ ಎಂಬ ಅಭಿಪ್ರಾಯ ಸಾಮಾನ್ಯವಾಗಿ ಮೂಡುತ್ತಿದೆ. ಅಲ್ಲದೇ ಕೈಪಿಡಿಯಲ್ಲಿ ಒಂದು ವಿವರವಿದ್ದರೆ, ತಂತ್ರಾಂಶದಲ್ಲಿ ಮತ್ತೊಂದು ವಿವರ ಇದೆ. ಉದಾಹರಣೆಗೆ ಹೊಲೆಯರ ಕೋಡ್ ಸಂ-ಖ್ಯೆ ನೋಡಬಹುದು' ಎಂದು ಹಿರಿಯ ಮುಖಂಡ ವಿಠ್ಠಲದಾಸ ಪ್ಯಾಗೆ ತಿಳಿಸಿದ್ದಾರೆ.

# ಆಪರೇಷನ್ ಸಿಂಧೂರ ದಿಟ್ಟ ನಿರ್ಧಾರ ಖುಷಿ ತಂದಿದೆ : ಗೋಪಾಲ ದೊಡ್ಡಿ



ಮಲ್ಲಮ್ಮನುಡಿವಾರ್ತೆ ಬೀದರ. ಮೇ. 09 : ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ ಪ್ರತಿಯಾಗಿ ಭಾರತ ಸೇನೆ ಉಗ್ರರ ನೆಲೆಗಳ ಮೇಲೆ ನಡೆಸಿದ ದಾಳಿ ಸ್ವಾಗತಾರ್ಹ. ಏನೂ ಅರಿಯದ ಮುಗ್ಧ 26 ಭಾರತೀಯರ ಹತ್ಯೆ ಮಾಡಿದ್ದಲ್ಲದೆ ಪದೇ ಪದೆ ಭಾರತದ ಮೇಲೆ ದಾಳಿ, ಕುತಂತ್ರ ಮಾಡಿ ಭಾರತೀಯರ ಸಹನೆ, ಸ್ವಾಭಿಮಾನ ಕೆಣಕುತ್ತಿರುವ ಪಾಪಿ ಪಾಕಿಸ್ತಾನದ ಉಗ್ರರ ಅಟ್ಟಹಾಸ ಮಟ್ಟ ಹಾಕುವ ದಿಟ್ಟ ನಿರ್ಧಾರ ಖುಷಿ ತಂದಿದೆ. ಎಂದು ಮಹಾನಾಯಕ ರಕ್ಷಣಾ ವೇದಿಕೆ ಬೀದರ ಜಿಲ್ಲಾಧ್ಯಕ್ಷರಾದ ಗೋಪಾಲ ದೊಡ್ಡಿ ಅವರು ತಿಳಿಸಿದ್ದಾರೆ.

ಭಾರತದ ಸೇನೆಯ ಮೇಲೆ ಅಪಾರ ಗೌರವ, ವಿಶ್ವಾಸವಿದ್ದು ಭಾರತ ಮಾತೆಯ ಮಕ್ಕಳಾದ ನಾವೆಲ್ಲ ನಮ್ಮೊಳಗಿನ ಭೇದ ಭಾವ ಬದಿಗೊತ್ತಿ ದೇಶದ ರಕ್ಷಣೆಗೆ ಕಂಕಣಬದ್ಧರಾಗೋಣ.

ಪಾಕ್ ಕ್ಷಿಪಣಿಗಳನ್ನು ಗಡಿಯಲ್ಲೇ ನಿಷ್ಕ್ರಿಯಗೊಳಿಸಿದ ಸುದರ್ಶನ ಚಕ್ರ. ಭಾರತ-ಪಾಕಿಸ್ತಾನ ನಡುವೆ ಘನಘೋರ ಕ್ಷಿಪಣಿ ದಾಳಿ ಭಾರತ ಉಗ್ರರ ಮೇಲೆ ದಾಳಿ ನಡೆಸಿದರೂ ಕಾಲುಕೆರೆದು ಪಾಕಿಸ್ತಾನ ಯುದ್ಧ ಕಾಶ್ಮೀರ, ಪಂಜಾಬ್, ರಾಜಸ್ಥಾನದ ಮೇಲೆ ದಾಳಿ ಭಾರತದ ತಿರುಗೇಟಿಗೆ ಲಾಹೋರ್ ಏರ್‌ಡಿಫೆನ್ಸ್ ವ್ಯವಸ್ಥೆ ಧ್ವಂಸ ದಾಳಿಗೆ ಬಂದ ಎಫ್ 16, ಜೆಎಫ್ 17 ಉರುಳಿಸಿದ ಭಾರತದ ಸೇನಾಪಡೆ. ಭಾರತೀಯ ಸೇನೆಯ ಬಗ್ಗೆ ನನಗೆ ಹೆಮ್ಮೆಯಿದೆ ಜೈ ಹಿಂದ್.

# ಜಿಲ್ಲಾ ಮಟ್ಟದ ಕಾರ್ಮಿಕರ ದಿನಾಚರಣೆ ನಾಳೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.9: ಪಟ್ಟಣದ ಪುರಭವನದ ವತಿಯಿಂದ ಕರುನಾಡ ಕಾರ್ಮಿಕರ ವೇದಿಕೆಯ ವತಿಯಿಂದ ಮೇ.11 ರಂದು ರವಿವಾರ ಜಿಲ್ಲಾ ಮಟ್ಟದ ಕಾರ್ಮಿಕರ ದಿನಾಚರಣೆ ಆಚರಿಸಲಾಗುವುದು ಎಂದು ಕರುನಾಡ ಕಾರ್ಮಿಕರ ವೇದಿಕೆ ಹಾಗು ಕಾರ್ಮಿಕರ ಪರ ಸಂಘಟನೆಗಳ ಒಕ್ಕೂಟದ ಪ್ರತಿನಿಧಿ ಅನೀಲ ಹಾಲೆಪುರ್ಗೆ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿದ ಅವರು, ಭಾಲ್ಕಿ ಪಟ್ಟಣದ ಪುರಭವನದಲ್ಲಿ ಮೇ.11 ರಂದು ಬೆಳಿಗ್ಗೆ 10 ಗಂಟೆಗೆ ಕರುನಾಡ ಕಾಮಿಕರ ವೇದಿಕೆ ಹಾಗು ಕಾರ್ಮಿಕರ ಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಜಿಲ್ಲಾ ಮಟ್ಟದ ಕಾರ್ಮಿಕರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ದಿನಾಚರಣೆ-ಯ ಸಾನಿಧ್ಯವನ್ನು ಹಿರೇಮಠ ಸಂಸ್ಥಾನದ ಶ್ರೀ ಗುರುಬಸವ ಪಟ್ಟದ್ದೇವರು ವಹಿಸುತ್ತಲಿದ್ದಾರೆ. ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಯಕ್ರಮ ಉದ್ಘಾಟಿಸುವರು. ಕರುನಾಡು ಕಾರ್ಮಿಕ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಚಂದ್ರುಗೌಡ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಬೆಂಗಳೂರಿನ ಕ.ಕಾ.ವೇ ರಾಜ್ಯ ಮಹಿಳಾ ಅಧ್ಯಕ್ಷೆ ಲಕ್ಷ್ಮೀಗೌಡ, ರಾಜ್ಯಗೌರವಾಧ್ಯಕ್ಷ ಬಿ.ಸಿ.ಲಕ್ಷ್ಮಣ, ತಸಿಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಡಿವಾಯ್‌ಎಸ್‌ಪಿ ಶಿವಾನಂದ ಪವಾಡಶೆಟ್ಟಿ, ಕಾರ್ಮಿಕ ಇಲಾಖೆಯ ಜಿಲ್ಲಾ ಆಯುಕ್ತ ಮಹೇಶ ಕುಳಳಿ, ಪುರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗು ಗಣ್ಯರು ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಗೆ ನಡೆಯುವ ಮೆರಣಿಗೆಗೆ ಸಂಸದ ಸಾಗರ ಈಶ್ವರ ಖಂಡ್ರೆ ಚಾಲನೆ ನೀಡುವರು. ಹೆಚ್ಚಿನ ಸಂಖೆಯಲ್ಲಿ ಕಾರ್ಮಿಕರು ಮತ್ತು ಸಾರ್ವಜನಿಕರು ಭಾಗವಹಿಸಿ, ಕಾರ್ಮಿಕ ದಿನಾಚರಣ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

# ಸೇನೆಯ ಶ್ರೀರಕ್ಷೆ ಹಾಗೂ ಆಪರೇಷನ್ ಸಿಂಧೂರಿನ ಯಶಸ್ವಿಗಾಗಿ ಬಿಜೆಪಿಯಿಂದ ವಿವಿಧ ದೇವಸ್ಥಾನಗಳಲ್ಲಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್ ಮೇ.09 :ಭಾರತ ಮತ್ತು ಪಾಕಿಸ್ತಾನ ನಡುವೆ ನಡೆಯುತ್ತಿರುವ ಕದನದಲ್ಲಿ ಭಾರತೀಯ ಸೇನೆಯ ಶ್ರೀರ-ಕ್ಷೆ ಹಾಗೂ ಆಪರೇಷನ್ ಸಿಂದೂರಿನ ಯಶಸ್ವಿಗಾಗಿ ಇಂದು ಬೀದರ ಜಿಲ್ಲಾ ಭಾರತ ಜನತಾ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಇಂದು ಬೀದರ ದಕ್ಷಿಣ ಕ್ಷೇತ್ರದ ಸು-ಕ್ಷೇತ್ರದ ಚಾಂಗೇಲರದ ಶ್ರೀ ವೀರಭದ್ರೇಶ್ವರ ದೇವಸ್ಥಾನ ಹಾಗೂ ಬೀದರ ನಗರದ ದೇವಿ ಕಾಲೋನಿಯ ಅಂಬಾ ಭವಾನಿ ದೇವಸ್ಥಾನದಲ್ಲಿ ದೇವರಿಗೆ ಅಭಿಷೇಕ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರು ಸೋಮನಾಥ ಪಾಟೀಲ ಮಾತನಾಡಿ ಪಾಕಿಸ್ತಾನದಿಂದ ನಿನ್ನೆ ರಾತ್ರಿ ನಮ್ಮ ದೇಶದ ಸಾರ್ವಜನಿಕ ಸ್ಥಳಗಳಲ್ಲಿ ರಾರ್ಕೆಟ್ ಹಾಗೂ ದ್ರೂಣಗಳಿಂದ ದಾಳಿ ನಡೆಸಲಾಯಿತು. ನಮ್ಮ ವೀರ ಯೋಧರು ಈ ದಾಳಿಯನ್ನು ವಿಫಲ ಮಾಡಿದರು. ಇದರ ಪ್ರತಿಯೋತ್ತರವಾಗಿ ಭಾರತೀಯ ಸೇನೆಯಿಂದ ಪಾಕಿಸ್ತಾನದಲ್ಲಿರುವ ಭಯೋತ್ಪಾದಕರ ಅನೇಕ ಠಿಕಾಣಿಯ ಮೇಲೆ ಯಶಸ್ವಿಯಾಗಿ ದಾಳಿ ನಡೆಸಿದ್ದಾರೆ. ನಮ್ಮ ಸೇನೆಯಿಂದ ಪಾಕಿಸ್ತಾನದ ನಾಲ್ಕು ಯುದ್ಧ ವಿಮಾನಗಳನ್ನು ಭಾರತೀಯ ಕ್ಷೇತ್ರದಲ್ಲಿ ಹೊಡೆದುರಿಳಿಸಿದರು. ಹಾಗೂ ಪಾಕಿಸ್ತಾನದ ಒಬ್ಬ ಪೈಲಟ್‌ನನ್ನು ಬಂಧಿಸಲಾಗಿದೆ. ಪಾಕಿಸ್ತಾನವನ್ನು ಹಮಾಸ್ ಮಾದರಿಯಲ್ಲಿ ಭಾರತದ ಮೇಲೆ ದಾಳಿ ಮಾಡುತ್ತಿದೆ. ಅದನ್ನು ನಮ್ಮ ಭಾರತ ಸೇನೆಯ ಯೋಧರು ಈ ದಾಳಿಯನ್ನು ತಡದು ಪಾಕಿಸ್ತಾನ ದೇಶಕ್ಕೆ ತಕ್ಕ ಉತ್ತರ ನೀಡುತ್ತಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯ ಪರಿಷತ್ ಸದಸ್ಯ ರಾಜರೆಡ್ಡಿ, ಶ್ರೀಮತಿ ಶಂಕುತಲಾ ಬೆಲ್ದಾಳೆ, ಬೀದರ ದಕ್ಷಿಣ ಕ್ಷೇತ್ರದ ಅಧ್ಯಕ್ಷ ಗುರುನಾಥ ಬಗದಲ್, ಕ್ಷೇತ್ರದ ನಾಯಕರಾದ ಈಶ್ವರ ಸಿಂಗ್ ಠಾಕೂರ್, ರಾಜಶೇಖರ ನಾಗಮೂರ್ತಿ, ಸಂಗಮೇಶ ನಾಸಿಗಾರ, ರಾಜಕುಮಾರ ನೆಮತಬಾದ, ಸುನೀಲ ಗೌಳಿ, ರಾಜೇಂದ್ರ ಪೂಜಾರಿ, ಗೋಪಾಲ, ಗಣೇಶ ಭೋಸ್ಲೆ, ಶ್ರೀಕಾಂತ ಮೋದಿ ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

# ಕೆರೆಗಳಲ್ಲಿ ಮೀನುಗಾರಿಕೆಗೆ ಅವಕಾಶ ಕೊಡಿಸಿ : ಸುನೀಲ ಭಾವಿಕಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 09 : ಬೀದರ ಜಿಲ್ಲೆಯಲ್ಲಿರುವ ಕೆರೆಗಳಲ್ಲಿ ಮೀನುಗಾರಿಕೆಗಾಗಿ ಟೋಕರೆ ಕೋಳಿ (ಕೋಲಿ-ಕಬ್ಬಲಿಗ) ಸಮಾಜದ ಬಾಂಧವರಿಗೆ ಅವಕಾಶ ಒದಗಿಸಿಕೊಟ್ಟರೇ ಅವರು ಆರ್ಥಿಕವಾಗಿ ಪ್ರಗತಿ ಸಾಧಿಸಿ ಅದರಿಂದ ತಮ್ಮ ಕುಟುಂಬದ ನಿರ್ವಹಣೆಯೊಂದಿಗೆ ತಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣ ಕೊಡಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಡಿಸಿಸಿಐ ಮೀನುಗಾರರ ಘಟಕದ ಅಧ್ಯಕ್ಷರು ಶ್ರಮಿಸಬೇಕಾಗಿದೆ ಎಂದು ಅಂಬಿಗರ ಚೌಡಯ್ಯ ಯುವ ಸೇನೆ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ ಭಾವಿಕಟ್ಟಿ ಅವರು ಅಭಿಪ್ರಾಯಪಟ್ಟರು.

ಬೀದರ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಶೇಕಾಪೂರ್ (ಯರನಳ್ಳಿ) ಗ್ರಾಮದಲ್ಲಿ ಅಂಬಿಗರ ಚೌಡಯ್ಯ ಯುವ ಸೇನೆಯಿಂದ ಏರ್ಪಡಿಸಿದ ಸ್ವಾಗತ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಮಿಟಿಯ ಮಿನುಗಾರರ ಬೀದರ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ಸುನೀಲಕುಮಾರ ತುಕಾರಾಮ್ ಖಾಸೆಂಪೂರ್ ಅವರಿಗೆ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿ, ಗೌರವಿಸಿ, ಮಾತನಾಡುತ್ತಿದ್ದರು. ಮೀನುಗಾರಿಕೆ ಇಲಾಖೆಯಿಂದ ಸಿಗುವ ಸಕಲ ಸೌಲತ್ತುಗಳು ಮತ್ತು ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ದೊರಕುವ ಎಲ್ಲಾ ಸೌಲಭ್ಯಗಳನ್ನು ಸಮಾಜ ಬಾಂಧವರಿಗೆ ಕೊಡಿಸಲು ನೂತನ ಅಧ್ಯಕ್ಷರಾದ ಖಾಸೆಂಪೂರ ಅವರು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾದರೇ ನಮ್ಮ ಸಮಾಜ ಅಭಿವೃದ್ದಿಯತ್ತ ಸಾಗುತ್ತದೆ. ಮುಂಬರುವ ದಿನಗಳಲ್ಲಿ ನಡೆಯುವ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಸ್ಪರ್ದಿಸಲು ಈ ಕಾರ್ಯದಿಂದ ಅವಕಾಶ ದೊರಕಬಹುದಾಗಿದೆ ಎಂದು ಭಾವಿಕಟ್ಟಿ ನುಡಿದರು.

ಈ ಸನ್ಮಾನ ಕಾರ್ಯಕ್ರಮದಲ್ಲಿ ಟೋಕರೆ ಕೋಳಿ ಸಮಾಜ ಸಂಘದ ಬೀದರ ದಕ್ಷಿಣ ಕ್ಷೇತ್ರದ ಅಧ್ಯಕ್ಷ ಶನ್ಮೂಖಪ್ಪಾ ಶೇಕಾಪೂರ್, ನಾಗೂರಾ ಗ್ರಾಮ ಪಂಚಾಯತ್ ಉಪಾಧ್ಯಕ್ಷ ನರಸಪ್ಪ ಜಾನಪ್ಪನೋರ್, ಸೇನೆಯ ಪ್ರಮುಖರಾದ ರಮೇಶ ಖಾಸೆಂಪೂರ್, ಸೂರ್ಯಕಾಂತ ಕಾಗೆ, ಸಂಜುಕುಮಾರ ಯಾಕತಪೂರ್, ರಾಜಕುಮಾರ ರೇಕುಳಗಿ, ಸೂರ್ಯಕಾಂತ ಚಾಂಗಲೇಲಾ, ಸಿದ್ದು ಖಾಸೆಂಪೂರ್, ಲಾಲಪ್ಪಾ ಮಂಗಲಗಿ, ಜಿತೇಂದ್ರ ವ್ಮರ್ಜಾಪೂರ್, ರಮೇಶ ಬರೂರ್, ಮೊಗಲಪ್ಪಾ ಬರೂರ್, ನಾಗೇಶ ವಾಲಿಕಾರ್, ಸಂತೋಷ ಚೌಕಿ, ರಮೇಶ ಮನ್ನಳ್ಳಿ, ಆನಂದ ಶೇಕಾಪೂರ್, ಲೋಕೆಶ ಫತ್ತೇಪೂರ್, ಶಶಿಕಾಂತ ಭಾವಿಕಟ್ಟಿ, ಆನಂದ ಸೇರಿದಂತೆ ಇತರರು ಇದ್ದರು.

# ಗುರು ನಾನಕ ಪಿಯು ಕಾಲೇಜ್ : ಪ್ರವೇಶ ಪ್ರಕ್ರಿಯೆ ಜಾಗೃತಿ ಕಾರ್ಯಕ್ರಮ

ಬೀದರ. ಮೇ. 09 : ನೇಹರು ಸ್ಟೇಡಿಯಂ ಹತ್ತಿರವಿರುವ ಗುರು ನಾನಕ ಪದವಿ ಪೂರ್ವ ಕಾಲೇಜ್‌ನಲ್ಲಿ ಸಿಇಟಿ ಮತ್ತು ನೀಟ್ ದಾಖಲೆ ಪರಿಶೀಲನೆ, ಪ್ರವೇಶ ಪ್ರಕ್ರಿಯೆ ಮತ್ತು ಆನ್‌ಲೈನ್ ಆಯ್ಕೆ ಪ್ರವೇಶ, ನೀಟ್/ಜೆಇಇ/ಸಿಇಟಿ ಲಾಂಗ್ ಟರ್ಮ್ ಕೋಸ್‌ಗಳ ಕುರಿತು ಉಚಿತ ಜಾಗೃತಿ ಕಾರ್ಯಕ್ರಮ ದಿನಾಂಕ 11-5-2025 ಭಾನುವಾರ ಮುಂಜಾನೆ 9:45 ರಿಂದ ಮಧ್ಯಾಹ್ನ 12:45 ವರೆಗೆ ನಡೆಯಲಿದೆ. ಬೆಂಗಳೂರು ವಿದ್ಯಾರ್ಥಿ ಮಂಟರ್‌ನ ಸಂಸ್ಥಾಪಕ ಮತ್ತು ಸಿಇಓ ಡಾ॥ ಮುರಳಿಧರಾ ಡಿ.ಎಂ. ಅವರು ಮಾರ್ಗದರ್ಶನ ಮಾಡಲಿದ್ದಾರೆ. ಶಿಕ್ಷಣ ಎಂಬುದು ಒಂದು ದೊಡ್ಡ ಆಸ್ತಿ, ಪ್ರಸ್ತುತ ದಿನಮಾನಗಳಲ್ಲಿ ಜನರು ಎಷ್ಟೇ ಸಂಪತ್ತುಗಳಿಸಿದರೂ ಜ್ಞಾನಕ್ಕಿಂತ ಮತ್ತೊಂದು ದೊಡ್ಡ ಆಸ್ತಿ ಬೇರೆ ಯಾವುದು ಇಲ್ಲ. ಪೋಷಕರು ತಮ್ಮ ಮಕ್ಕಳಿಗೆ ಒಳ್ಳೆಯ ಕೋರ್ಸ್‌ದತ್ತ ದಾರಿ ಮಾಡಿಕೊಡಬೇಕು. ಮಕ್ಕಳು ಯಾವ ಕಡೆ ಆಸಕ್ತಿ ಹೊಂದಿದ್ದಾರೋ ಅವರಿಗೆ ದಾರಿತೋರಿಸುವ ಉದ್ದೇಶವಾಗಿದೆ ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

**ಕಾರ್ಯಕ್ರಮದ ಮುಖಾಂಶಗಳು :**

* ಕಾಲೇಜ್ ಮತ್ತು ವರ್ಗವಾರು ಕಟ್-ಆಫ್ ಶ್ರೇಯಾಂಕ ಮುನ್ಸೂಚನೆ.
* ನೀಟ್ /ಸಿಇಟಿ/ಶ್ರೇಣಿಯ ನಿರ್ಣಯ.
* ಮೀಸಲಾತಿ ಮಾನದಂಡ ಮತ್ತು ಸೀಟು ವಿತರಣೆಯ ಶೇಕಡಾವಾರು.
* ಕೃಷಿ ಪ್ರಾಯೋಗಿಕ ಪರೀಕ್ಷೆಯ ಮಹತ್ವ.
* ನೀಟ್/ಸಿಇಟಿ ದಾಖಲೆ ಪರಿಶೀಲನೆ.
* ನೀಟ್/ಸಿಇಟಿ ಆನ್‌ಲೈನ್ ಆಯ್ಕೆ ಪ್ರವೇಶ ವಿಧಾನ.
* ವಿವಿಧ ಕೋರ್ಸ್‌ಗಳ ಶುಲ್ಕ ರಚನೆ.
* ನೀಟ್/ಕೆ-ಸಿಟಿ ಮತ್ತು ಜೆಇಇ 2025ರ ನವೀಕರಣಗಳು.
* ನೀಟ್ ಪುನರಾವರ್ತಕರಿಗೆ ಕೌನ್ಸಲಿಂಗ್.

ಈ ಜಾಗೃತಿ ಕಾರ್ಯಕ್ರಮಕ್ಕೆ ಹೆಚ್ಚಿನಸಂಖ್ಯೆಯಲ್ಲಿ ಪಾಲ್ಗೊಂಡು ಇದರ ಲಾಭಪಡೆದುಕೊಳ್ಳಬೇಕು ಎಂದು ಕರೆಕೊಟ್ಟರು.

## ಪರಿಶಿಷ್ಟ ಜಾತಿ ಸಮೀಕ್ಷೆ : ಸಮೀಕ್ಷೆದಾರರಿಗೆ ಸಹಕರಿಸಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ:9: ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ರಾಜ್ಯದ ಪ್ರತಿಯೊಂದು ಪರಿಶಿಷ್ಟ ಜಾತಿಯ ಕುಟುಂಬದ ಸಮಗ್ರ ಸಮೀಕ್ಷೆ ಕೈಗೊಂಡು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕ, ಪ್ರಾತಿನಿಧ್ಯತೇ ಇತ್ಯಾದಿ ಸ್ಥಿತಿಗತಿಗಳ ಬಗ್ಗೆ ವಿಶ್ಲೇಷಣೆ ಮಾಡಿ ಒಳ ಮೀಸಲಾತಿ ವರ್ಗೀಕರಣ ಮಾಡಲು ಸರ್ಕಾರ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಗಳನ್ನು ಸಾಮಾಜಿಕ ಕಲ್ಯಾಣ ಇಲಾಖೆ ಮೂಲಕ ಕೈಗೊಳ್ಳುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ಸಮೀಕ್ಷೆದಾರರು ತಮ್ಮ ಮನೆಗೆ ಬಂದಾಗ ಅವರೊಂದಿಗೆ ಸಹಕರಿಸಿ ಅವರಿಗೆ ಬೇಕಾದ ವಿವರಗಳನ್ನು ಪೂರ್ಣವಾಗಿ ಸ್ಪಷ್ಟವಾಗಿ ನೀಡಲು ಅವರು ಪರಿಶಿಷ್ಟ ಜಾತಿ ಕುಟುಂಬಗಳಿಗೆ ಕೋರಿದ್ದಾರೆ.

ಮೇ 5 ರಿಂದ 17ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಮೇ 19ರಿಂದ 21ರವರೆಗೆ ವಿಶೇಷ ಶಿಬಿರಗಳನ್ನು ಕೈಗೊಂಡು ಮನೆ ಮನೆ ಭೇಟಿ ಅವಧಿಯಲ್ಲಿ ಬಿಟ್ಟು ಹೋದ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ.

ಹೆಚ್ಚಿನ ವಿವರಗಳಿಗಾಗಿ ತಮ್ಮ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಅಥವಾ ತಹಶೀಲ್ದಾರ್ ಕಚೇರಿಯನ್ನು ಸಂಪರ್ಕಿಸುವುಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಯಾದಗಿರಿ ಜಿಲ್ಲೆ ಮೂಲಕ ಕೋರಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಕ್ತಿಯಿಂದಲೇ ಶಿವಶರಣೆಯಾದ ಶ್ರೀ ಹೇಮರಡ್ಡಿ ಮಲ್ಲಮ್ಮ


ಸತಿಪತಿಗಳಲ್ಲಿ ಒಂದಾದ ಭಕ್ತಿ ಶಿವನಿಗೆಬಪ್ಪುದು ಎಂಬಂತೆ ಗಂಡ ಹುಚ್ಚನಾದರೂ ಸರಿ ದಡ್ಡನಾದರೂ ಅವಿದ್ಯಾವಂತನಾದರೂ ಸರಿ ನನ್ನ ಪತಿಯೇ ನನ್ನ ಪಾಲಿಗೆ ದೇವರೆಂದು ನಂಬಿ ಜೀವನ ಸಾಗಿಸಿದ ಸಾಮಾನ್ಯ ಮಹಿಳೆ ಯೊಬ್ಬಳು ತನ್ನ ಭಕ್ತಿಯಿಂದ ಶಿವನನ್ನು ಒಲಿಸಿಕೊಂಡು ಶರಣೆಯಾದ ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಜಯಂತಿಯನ್ನು ಪ್ರತಿ ವರ್ಷ ಮೇ 10ರಂದು ಆಚರಣೆ ಮಾಡುತ್ತಾರೆ.

ಮಲ್ಲಮ್ಮ ಸಾಮಾನ್ಯ ಮನುಷ್ಯಳಾಗಿ ಬದುಕು ಆರಂಭಿಸಿ ಶಿವಶರಣೆ ಆಗಿ ಪರಿವರ್ತನೆ ಯಾಗಲು ಕಾರಣವೇ ಆಕೆಯ ಭಕ್ತಿ ಭಕ್ತಿಗೆ ಎಂಥಾ ಶಕ್ತಿ ಇದೆ ಎನ್ನುವುದು ಸಮಾಜಕ್ಕೆ ತೋರಿಸಿಕೊಟ್ಟ ಆದರ್ಶ ಮಹಿಳೆ ಮಹಾಮಾತೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ತಾನು ಶರಣೆ ಯಾಗುವುದರ ಜೊತೆಗೆ ಮಹಾ ವ್ಯಸನಿ ಹಾಗೂ ದುರ ವ್ಯಸನಿ ಆಗಿದ್ದ ವೇಮನನ್ನು ಮಹಾಯೋಗಿ ವೇಮನನ್ನಾಗಿ ಮಾಡಿದ ಮಹಾ ಮಾತೆ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತನ್ನ ಭಕ್ತಿಯಿಂದಲೇ ಈ ಜಗತ್ತನ್ನು ಗೆದ್ದ ಶ್ರೇಷ್ಠ ಶಿವಶರಣೆಯರ ಸಾಲಿನಲ್ಲಿ ಸೇರುತ್ತಾಳೆ

ಇವತ್ತಿನ ಸಮಾಜದಲ್ಲಿ ಅನೇಕ ಜಾತಿ ಜನಾಂಗಗಳು ಸಮಾಜದ ಕುಲ ದೇವರನ್ನು ಪೂಜಿಸುತ್ತಾ ತಮ್ಮ ತಮ್ಮ ಸಮಾಜಕ್ಕೆದೇವಾನುದೇವತೆಗಳನ್ನು ಹೋರಾಟಗಾರರನ್ನು ತಮ್ಮ ಸಮಾಜದ ಮಾದರಿ ಎಂದು ಗುರುತಿಸಿ ತಮ್ಮದೇ ಸಮಾಜಕ್ಕೆ ಒಬ್ಬೊಬ್ಬರು ಕುಲ ದೇವರನ್ನು ನೇಮಿಸಿಕೊಂಡು ಅವರ ಆರಾಧನೆಯಲ್ಲಿ ಸಮಾಜ ಮುನ್ನಡೆಸುವ ಪರಂಪರೆ ಇವತ್ತಿನ ಜನಾಂಗಗಳು ಮಾಡುತ್ತಾ ಬಂದಿದ್ದು ಇದಕ್ಕೆ ಹೊರತು ಇಲ್ಲ ಎಂಬಂತೆ ರಡ್ಡಿ ಜನಾಂಗವು ಮಹಾ ತ್ಯಾಗಮಯಿ ಶ್ರೀ ಹೇಮರೆಡ್ಡಿ ಮಲ್ಲಮ್ಮನನ್ನು ಹಾಗೂ ಮಹಾ ಯೋಗಿ ವೇಮನನ್ನು ಸಮಾಜದ ಕುಲದೇವರೆಂದು ನಂಬಿ ಅವರು ತಿಳಿಸಿಕೊಟ್ಟ ಮಾರ್ಗದಲ್ಲಿ ನಡೆ-ಯುತ್ತಾ ಬಂದಿರುತ್ತಾರೆ ಅಂತಹ ಪ್ರಮುಖ ದೇವಾನು ದೇವತೆಗಳಲ್ಲಿ ಸಾಮಾನ್ಯ ಭಕ್ತಿಯಾಗಿದ್ದ ಶ್ರೀ ಹೇಮರೆಡ್ಡಿ ಮಲ್ಲಮ್ಮನನ್ನು ಮಹಾ ಶಿವಶರಣೆ ತ್ಯಾಗಮಯಿ ಹೇಮರೆಡ್ಡಿ ಮಲ್ಲಮ್ಮವಾಗಲು ಕಾರಣವೇನೆಂದರೆ ಶ್ರೀಶೈಲದ ಪರ್ವತಗಿರಿಯಲ್ಲಿ ನೆಲೆಸಿರುವ ಶ್ರೀಶೈಲ ಮಲ್ಲಿಕಾರ್ಜುನನ ಆಶೀರ್ವಾದವೇ ಮಲ್ಲಮ್ಮನಿಗೆ ಒಲಿದ ಸೌಭಾಗ್ಯ ತನ್ನ ಭಕ್ತಿಯಿಂದ ಮಲ್ಲಯ್ಯನನ್ನು ಒಲಿಸಿಕೊಂಡ ಭಕ್ತೆ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ರಡ್ಡಿ ಜನಾಂಗದ ಮಹಾಮಾತೆಯಾಗಿ ರಡ್ಡಿ ಸಮಾಜ ಮುನ್ನಡೆಸುವ ಮಾರ್ಗಗಳನ್ನು ಸುಮಾರು 600 ವರ್ಷಗಳ ಹಿಂದೆಯೇ ತಿಳಿಸಿಕೊಟ್ಟಿದ್ದರಿಂದ ಇವತ್ತು ಅಖಂಡ ರಡ್ಡಿ ಸಮಾಜ ಮಹಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮನನ್ನು ಸ್ಮರಿಸುತ್ತಿದೆ

ಹೇಮರಡ್ಡಿ ಮಲ್ಲಮ್ಮ ತಾಯಿಯು ತನಗಾಗಿ ಏನು ಮಾಡಿಕೊಳ್ಳದೆ ಸುಮಾರು 600 ವರ್ಷಗಳ ಹಿಂದೆ ಶ್ರೀಶೈಲ ಪ್ರಾಂತ್ಯದ ಕರ್ನೂಲ್ ಜಿಲ್ಲೆಯ ಆತ್ಮಕೂರ ತಾಲೂಕಿನ ರಾಮಾಪುರ ಗ್ರಾಮದಲ್ಲಿ ತಂದೆ ನಾಗರೆಡ್ಡಿ ತಾಯಿ ಗೌರಮ್ಮನ ಉದರದಲ್ಲಿ ಜನಿಸುತ್ತಾಳೆ 16 ವರ್ಷ ತುಂಬಿದಾಗ ಅದೇ ಸಂಸ್ಥಾನದ ಒಡೆಯರಾದ ಸಿದ್ದಾಪುರದ ಶ್ರೀ ಹೇಮರೆಡ್ಡಿ ಅವರ ಮೂರನೇ ಮಗನಾದ ಭರಮರೆಡ್ಡಿಗೆ ಕೊಟ್ಟು ಮದುವೆ ಮಾಡಿದ ನಂತರ ಸಿದ್ದಾಪುರದ ಸೊಸೆಯಾಗಿ ಮನೆಯಲ್ಲಿ ಗಂಡ ಅತ್ತೆ-ಮಾವ ನಾದಿನಿಯರನ್ನು ತುಂಬಾ ಗೌರವದಿಂದ ಪೂಜ್ಯನೀಯ ಸ್ಥಾನ ನೀಡಿ ಗೌರವಿಸುತ್ತಾಳೆ ಇಷ್ಟೆಲ್ಲ ಗೌರವಿಸುವ ಸೊಸೆಗೆ ಅತ್ತೆ ಮಾವನ ನಾದನಿಯರ ಕಾಟದಿಂದ ಕೌಟುಂಬಿಕ ಜೀವನದಲ್ಲಿ ಹಲವಾರು ಏರುಪೇರು ಸಂಕಷ್ಟ ಅನುಭವಿಸಿದಳು.

ಮಹಾತಾಯಿ ಹೇಮರಡ್ಡಿ ಮಲ್ಲಮ್ಮ ಸಮಾಜಕ್ಕೆ ಆದರ್ಶವಾಗುವುದರ ಜೊತೆಗೆ ತನಗೆ ಬಂದ ಸಂಕಷ್ಟ ಯಾರೊಬ್ಬರಿಗೂ ಹೇಳದೆ ಬರೀ ಮಲ್ಲಯ್ಯನಲ್ಲಿ ಮಾತ್ರ ಭಿನ್ನವಿಸಿಕೊಂಡು ಪೂಜೆ ಮಾಡಿ ಮಲ್ಲಯ್ಯನ ಕೃಪೆಗೆ ಪಾತ್ರರಾಗಿ ಮಲ್ಲಯ್ಯ ಒಲಿದು ಪ್ರತ್ಯಕ್ಷವಾದಾಗ ಗಂಡ ಭರಮರೆಡ್ಡಿ ಸಂಶಯ ವ್ಯಕ್ತಪಡಿಸುತ್ತಾನೆ ಆದರೆ ಹಟ್ಟಿಗೆ ಬಂದು ನೋಡಿದಾಗ ಮಲ್ಲಯ್ಯನೇ ಮಲ್ಲಮ್ಮನಿಗೆ ಆಶೀರ್ವಾದ ಮಾಡಲು ಬಂದಿದ್ದನ್ನು ಕಂಡು ಆಶ್ಚರ್ಯಗೊಂಡು ಮಲ್ಲಯ್ಯನಿಗೆ ಶಿರಷ್ಟಾಂಗ ನಮಸ್ಕಾರ ಮಾಡಿ ಮಲ್ಲಯ್ಯನೇ ನನ್ನನ್ನು ಕ್ಷಮಿಸಿ ಬಿಡು ನಾನು ಮಲ್ಲಮ್ಮನ ಭಕ್ತಿ



ಮತ್ತು ಶಕ್ತಿ ತಿಳಿದುಕೊಳ್ಳದೆ ನನ್ನವ್ವ ಅಕ್ಕ-ತಂಗಿಯರ ಮಾತು ಕೇಳಿ ಮಲ್ಲಮ್ಮನಿಗೆ ಕೊಡಬಾರದ ಕಷ್ಟ ಕೊಟ್ಟು ನಾನು ಪಾಪ ಕಟ್ಟಿಕೊಂಡಿದ್ದೇನೆ ಇನ್ನು ಮುಂದೆ ನಾನು ಮಲ್ಲಮ್ಮನಿಗೆ ಯಾವುದೇ ತೊಂದರೆ ಕೊಡದೆ ಆಕೆಯ ಭಕ್ತಿಗೆ ನಾನು ಶರಣಾಗುತ್ತೇನೆ ಎಂದು ಮಲ್ಲಯ್ಯ ನಲ್ಲಿ ಪರಿಪರಿಯಾಗಿ ಬೇಡಿಕೊಂಡಾಗ ಮಲ್ಲಯ್ಯ ತಥಾಸ್ತು ಎಂದು ಭರಮರಡ್ಡಿಯನ್ನು ಕ್ಷಮಿಸಿದನು.

ಡಿವಿಜಿ ಅವರ ನುಡಿಯಂತೆ "*ಹುಲ್ಲಾಗು ಬೆಟ್ಟದಡಿ ಮನೆಗೆ ಮಲ್ಲಿಗೆ ಹಾಗೂ ಕಲ್ಲಾಗು ಕಷ್ಟಗಳ ಮಳೆಯ ವಿಧಿ ಸು-ರಿಯೇ ಬೆಲ್ಲ ಸಕ್ಕರೆ ಹಾಗೂ ದೀನ ದುರ್ಬಲರಿಗೆ ಎಲ್ಲರೊಳಗೆ ಒಂದಾಗು ಮಂಕುತಿಮ್ಮ"* ಎನ್ನುವಂತೆ ಹೇಮರಡ್ಡಿ ಮಲ್ಲಮ್ಮ ಕಷ್ಟಗಳ ಮಳೆಯ ಸುರಿದರು ಅದೆಲ್ಲವನ್ನು ಧೈರ್ಯದಿಂದ ಎದುರಿಸಿ ಸಾಮರಸ್ಯದ ಬಾಳನ್ನು ಬದುಕಿದಳು. ಗಂಡನ ಮನೆಯಲ್ಲಿ ಎಷ್ಟೇ ಕಿರುಕುಳ ತೊಂದರೆ ಇದ್ದರೂ ಅದನ್ನು ಇನ್ನೊಬ್ಬರಿಗೆ ಹೇಳದೆ ತಂದೆ ತಾಯಿಯ ತವರ ಮನೆ ಹೆಸರನ್ನು ನಾಡಿಗೆ ಬೆಳಗಿದಳು ಗಂಡನ ಮನೆಯ ಸಾಕಷ್ಟು ಕಿರಿಕಿರಿ ತೊಂದರೆಗಳಿದ್ದರು ಅದರಿಂದ ಕುಗ್ಗದೇ ಕರಗದೆ ಎಲ್ಲವನ್ನು ಎದುರಿಸಿ ಹಳಸಿದ ಅಂಬಲಿಯ ಎಡೆಯನ್ನೇ ಪ್ರಸಾದ ಮಾಡಿ ಸಾಕ್ಷಾತ್ ಶ್ರೀಶೈಲ ಮಲ್ಲಯ್ಯನಿಗೆ ಪರಮ ಭಕ್ತೆ ಯಾದಳು .

ಜೀವನದಿದ್ದಕ್ಕೂ ಭೋಗಿಯಾಗಿ ಭೋಗಿ ಜೀವನ ನಡೆಸಿದ ವೇಮನನ್ನು ಯೋಗಿಯನ್ನಾಗಿ ಮಾಡಿ ಮಹಾಮಾತೆ ಮಲ್ಲಮ್ಮಳಾದಳು ಮಲ್ಲಮ್ಮ ಕಾಯಕದಿಂದಲೇ ಮುಕ್ತಿ ಎನ್ನುವ ಶರಣ ಸಿದ್ಧಾಂತ ಪಾಲಿಸಿಕೊಂಡು ಬಂದವಳು ಕೃಷಿ ಕಾಯಕದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಸಂಸಾರಿಕ ಬದುಕು ಜಯಿಸಿದ ಮಹಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ತನ್ನ ಕೊನೆಯ ದಿನಗಳನ್ನು ಶ್ರೀಶೈಲದ ಮಲ್ಲಿಕಾರ್ಜುನ ಗುಡ್ಡದಲ್ಲಿ ಆಶ್ರಯ ನಿರ್ಮಿಸಿಕೊಂಡು ಪತಿ ಭರಮರೆಡ್ಡಿ ಹಾಗೂ ಮಲ್ಲಿಕಾರ್ಜುನ ಸ್ವಾಮಿಯೇನ್ನೆ ಸದಾಕಾಲ ನೆನೆಯುತ್ತ ತಪಸ್ಸು ಮಾಡುತ್ತಾ ಜೀವನ ಸಾಗಿಸಿದಳು. ಮಲ್ಲಮ್ಮನ ಭಕ್ತಿಗೆ ಮಾರುಹೊದ ಮಲ್ಲಯ್ಯ ಒಂದು ದಿನ ಪ್ರತ್ಯಕ್ಷನಾಗಿ ನಿನ್ನ ಸಾವು ಸಮಿತಿಸುತ್ತಿದೆ ನಿನಗೆ ಏನು ವರ ಬೇಕು ಕೇಳು ಅದನ್ನು ಕರುಣಿಸುತ್ತೇನೆ ಎಂದಾಗ ನನಗೆ ಯಾವುದೇ ಆಸೆ ಆಕಾಂಕ್ಷೆಗಳಿಲ್ಲ *ನನ್ನ ರಡ್ಡಿ ಸಮಸ್ತ ಕುಲಕ್ಕೆ ಎಂದಿಗೂ ಬಡತನ ಭಾರದಿರಲಿ ರಡ್ಡಿ ಯಾವಾಗಲೂ ಬಂಗಾರ ಕಡ್ಡಿಯಾಗಿರಲಿ ಎಂದು ಬೇಡಿ-ಕೊಂಡಾಗ ಒಂದು ಕ್ಷಣ ಮಲ್ಲಯ್ಯನು ದಿಗ್ರಾಂತನಾದನು. ತನಗಾಗಿ ಏನು ಬೇಡಿಕೊಳ್ಳದ ಈ ತಾಯಿ ಇಡಿ ರಡ್ಡಿ ಸಮಾಜ ರಕ್ಷಣೆ ಇಡೀ ಕುಲದ ಸಮಾಜಿಕ ಕಳಕಳಿ ಮಾಡುವ ಇವಳೆಂಥ ಭಕ್ತಳು ಎಂದು ಮನಸ್ಸಿನಲ್ಲಿ ಅಂದುಕೊಂಡು ಮಲ್ಲಮ್ಮಳ ತಪಸ್ಸಿಗೆ ಮೆಚ್ಚಿ ಆಯ್ತು ನಿನ್ನ ಆಸೆ ಈಡೇರಲಿ ಈ ಭೂಮಿ ಮೇಲೆ ವಾಸಿಸುವ ಸಕಲ ರಡ್ಡಿ ಕುಲದವರಿಗೆ ಯಾವತ್ತೂ ಬಡತನ ಬಾರದಿರಲಿ ಎಂದು ಮಲ್ಲಯ್ಯನು ಆಶೀರ್ವಾದ ಕರುಣಿಸಿದನು ಅವತ್ತಿನಿಂದ ಇವತ್ತಿನವರೆಗೂ ರಡ್ಡಿ ಸಮಾಜವನ್ನು ಬಂಗಾರದ ಕಡ್ಡಿ ಎಂದು ಕರೆಯುತ್ತಾರೆ*

ತನಗಾಗಿ ತಾನು ಏನು ಮಾಡಿಕೊಳ್ಳದ ಮಲ್ಲಮ್ಮ ತಾಯಿ, ತನ್ನ ಗಂಡನ ಮನೆಗಾಗಲಿ ತವರು ಮನಿಗಾಗಲಿ ಏನು ಕೇಳಲಿಲ್ಲ ಶ್ರೀಶೈಲ ಗಿರಿಯ ಮಲ್ಲಯ್ಯನು ಒಲಿದಾಗ ತನಗಾಗಿ ಬೇಕಾದ್ದನ್ನು ಬೇಡಬಹುದಿತ್ತು ಕೇಳಬಹುದಿತ್ತು ಆದರೆ ಮಲ್ಲಮ್ಮ ತಾಯಿ ತ್ಯಾಗ ಮತ್ತು ಭೋಗಿಯಾಗಿರುವುದರಿಂದ ತನಗಾಗಲಿ ತನ್ನ ಮನೆಯವರಿಗಾಗಿ ಏನು ಆಸೆ ಪಡದೆ ಮಲ್ಲಮ್ಮ ತಾಯಿ ಇಡೀ ಸಮಸ್ತ ರಡ್ಡಿ ಕುಲವನ್ನೇ ಸುರಕ್ಷಿತ ಸುಭಿಕ್ಷೆ ಚೆನ್ನಾಗಿರುವಂತೆ ಇರುವಂತೆ ಬೇಡಿಕೊಂಡ ರಡ್ಡಿ ಸಮಾಜದ ಏಕೈಕ ಮಾತೆ ಹೇಮರಡ್ಡಿ ಮಲ್ಲಮ್ಮ ಮಹಾತಾಯಿ ಇಷ್ಟೆಲ್ಲ ರಡ್ಡಿ ಸಮಾಜಕ್ಕೆ ಮಾಡಿದಾಗ ಮಲ್ಲಮ್ಮ ತಾಯಿಯ ಭಕ್ತಿಗೆ ನಾವು ಯಾವಾಗಲೂ ತಲೆಬಾಗಲೇಬೇಕು ಮಲ್ಲಮ್ಮ ತಾಯಿ ನೆಲೆಸಿದ ಶ್ರೀಶೈಲ ಪ್ರಾಂತ್ಯದಲ್ಲಿ ಮಲ್ಲಯ್ಯನ ದೇವಸ್ಥಾನದ ಹಿಂದುಗಡೆ ವಿಶಾಲವಾದ ಮಲ್ಲಮ್ಮನ ದೇವಸ್ಥಾನ ನಿರ್ಮಿಸಿದ ರಡ್ಡಿ ಸಮಾಜದ ಎಲ್ಲ ಗುರು ಹಿರಿಯರು ಇವತ್ತು ಸಾಕ್ಷಾತ ಮಲ್ಲಮ್ಮನನ್ನು ಕಣ್ಮುಂದೆ ಗೋಚರಿಸುವಂತೆ ಶ್ರೀಶೈಲದಲ್ಲಿ ದೇವಸ್ಥಾನ ನಿರ್ಮಿಸಿ, ಮಲ್ಲಮ್ಮನ ಕೃಪೆಗೆ ಪಾತ್ರರಾಗಿರುತ್ತಾರೆ.

ಹೇಮರಡ್ಡಿ ಮಲ್ಲಮ್ಮ ಬರಿ ಮಹಾಮಾತೆಯಾಗದೆ ಇಡೀ ರಡ್ಡಿ ಸಮಾಜಕ್ಕೆ ಶಕ್ತಿಯಾಗಿ ಮಲ್ಲಯ್ಯನಲ್ಲಿ ಬೇಡಿಕೊಂಡ ಪ್ರಯುಕ್ತ ಸಮಸ್ತ ರಡ್ಡಿ ಕುಲಬಾಂಧವರೆಲ್ಲರೂ ಸಾಮಾಜಿಕವಾಗಿ ಆರ್ಥಿಕವಾಗಿ ಕೌಟುಂಬಿಕವಾಗಿ ಈ ಭೂಮಿ ಮೇಲೆ ಚೆನ್ನಾಗಿ ಸುಖ ಶಾಂತಿ ನೆಮ್ಮದಿಯಿಂದ ಬದುಕುತ್ತಿದ್ದಾರೆ ಹಾಗಾಗಿ ಮಲ್ಲಮ್ಮನ ಕರುಣಿಸಿದ ದಯದಿಂದಾಗಿ ಪ್ರತಿಯೊಂದು ರಡ್ಡಿ ಸಮಾಜ ವಾಸವಾಗಿರುವ ಊರುಗಳಲ್ಲಿ ಮಲ್ಲಮ್ಮನ ದೇವಸ್ಥಾನ ನಿರ್ಮಿಸಿ ಮಲ್ಲಮ್ಮ ಕೃಪೆಗೆ ಪಾತ್ರರಾಗುತ್ತಿದ್ದಾರೆ.

ಇತ್ತೀಚಿನ ನಾಲ್ಕೈದು ವರ್ಷಗಳಿಂದ ರಡ್ಡಿ ಜನಾಂಗ ವಾಸಿಸಿರುವ ಪ್ರತಿಯೊಂದು ನಗರ ಹಳ್ಳಿಗಳಲ್ಲಿ ಮಲ್ಲಮ್ಮ ತಾಯಿಯ ದೇವಸ್ಥಾನವನ್ನು ನಿರ್ಮಿಸಿ ರಡ್ಡಿ ಸಮಾಜದ ಕುಲದೇವತೆಯನ್ನಾಗಿ ಪರಿಗಣಿಸಿ ತಮ್ಮ ಭಕ್ತಿಯ ಪರಾಕಾಷ್ಟೇ ಮೆರೆಯುತ್ತಿದ್ದು ರಡ್ಡಿ ಸಮಾಜ ಇರುವ ಎಲ್ಲಾ ಕಡೆ ಮಲ್ಲಮ್ಮನ ದೇವಸ್ಥಾನ ನಿರ್ಮಿಸಬೇಕೆಂಬುವ ಅಚಲತೆಯೊಂದಿಗೆ ಪ್ರತಿವರ್ಷ ಮೇ 10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿಯನ್ನು ಪ್ರತಿ ಹಳ್ಳಿ ತಾಲೂಕು ಜಿಲ್ಲೆಗಳಲ್ಲಿ ಅದ್ದೂರಿಯಾಗಿ ಆಚರಣೆ ಮಾಡುತ್ತಿದ್ದಾರೆ.....

ರಡ್ಡಿ ಸಮಾಜದ ಮೂಲ ಕಸಬು ಕೃಷಿ ಮತ್ತು ಒಕ್ಕಲತನ ಆಗಿರುವುದರಿಂದ ಒಕ್ಕಲಿಗ ಒಕ್ಕದ್ದರೆ ಬಿಕ್ಕುವುದು ಜಗವೆಲ್ಲ ಎಂಬ ನಾಡು ನುಡಿಯಂತೆ ಭಾಗಶ ರಡ್ಡಿ ಸಮಾಜದವರು ರೈತರೇ ಆಗಿರುವುದರಿಂದ ಉತ್ತಮ ಬೆಳೆಗಳನ್ನು ಬೆಳೆದು ಸುಭಿಕ್ಷವಾಗಿ ಜೀವನ ಸಾಗಿಸುವುದರ ಜೊತೆಗೆ ದಾನ ಧರ್ಮ ಭಕ್ತಿಯ ಮಾರ್ಗಗಳನ್ನು ತಮ್ಮ ಬದುಕಲ್ಲಿ ಅಳವಡಿಸಿಕೊಂಡು ಮಲ್ಲಮ್ಮ ಮತ್ತು ವೇಮನರನ್ನು ಸ್ಮರಣೆಯೊಂದಿಗೆ ಅನ್ಯ ಸಮಾಜದ ಜೊತೆ ಉತ್ತಮ ಬಾಂಧವ್ಯದೊಂದಿಗೆ ಸಂತೋಷದಿಂದ ಬಾಳಿ ಬದುಕುತ್ತಾ ಸಾಗಿಸುತ್ತಾ ಎಲ್ಲಾ ಸಮಾಜದವರೊಂದಿಗೆ ಉತ್ತಮ ಬಾಂಧವ್ಯ ಒಳ್ಳೆಯ ಒಡನಾಟದೊಂದಿಗೆ ಮಲ್ಲಮ್ಮನ ಜಯಂತಿ ಅದ್ದೂರಿಯಾಗಿ ಆಚರಿಸುವ ಪರಿಪಾಠವನ್ನು ಬೆಳೆಸಿಕೊಳ್ಳುತ್ತಿದ್ದಾರೆ



ಜಗದೀಶ.ಎಸ್.ಗಿರಡ್ಡಿ.
ಲೇಖಕರು.
ಗೊರಬಾಳ
9902470856

## ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 09- ಜಿಲ್ಲೆಯಲ್ಲಿ 5 ರಿಂದ 16ರ ವರ್ಷದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಉಚಿತ ಬೇಸಿಗೆ ಶಿಬಿರವನ್ನು ಮಕ್ಕಳಿಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ, ನಾಟಕ, ನೃತ್ಯ, ಯೋಗ, ಕರಾಟೆ, ಪ್ರಕೃತಿ ಪರಿಸರ, ಓದುವ ಕೌಶಲ್ಯ ಕುರಿತು 15 ದಿನದ ಶಿಬಿರವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಇಲಾಖೆ ಉಪ ನಿರ್ದೇಶಕರಾದ ವೀರನಗೌಡ ಪಾಟೀಲ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚಿನ ನಡೆದ ಬೆಂಗಳೂರು ರಾಜ್ಯ ಬಾಲ ಭವನ ಸೊಸೈಟಿ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ ಜಿಲ್ಲಾ ಬಾಲ ಭವನ ಸೊಸೈಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಕಾಲದ ಕುರಿತು ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಈ ಒಂದು ಉಚಿತ ಬೇಸಿಗೆ ಶಿಬಿರ 15 ದಿನದ ತರಬೇತಿಯಲ್ಲಿ ತರಬೇತಿದಾರರು ಹೇಳಿಕೊಡುವ ಚಟುವಟಿಕೆಗಳನ್ನು ಕಲಿಯಬೇಕೆಂದು ಮಕ್ಕಳಿಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು. ಯಾದಗಿರ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ದಿನೇಶ್ ಕುಮಾರ ಅವರು ಮಾತನಾಡಿ ಪ್ರತಿಯೊಂದು ಮಕ್ಕಳಲ್ಲಿ ಕೌಶಲ್ಯ ಬೆಳವಣಿಗೆ ಇರುತ್ತದೆ. ಆದರೆ ಮಕ್ಕಳಿಗೆ ಸರಿಯಾದ ವೇದಿಕೆ ಕಲ್ಪಿಸಿರುವುದಿಲ್ಲಾ. ಆದ್ದರಿಂದ ಇಂತಹ ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಚಡುವಡಿಕೆಗಳನ್ನು ಪರಿಪೂರ್ಣ ಕಲಿತುಕೊಂಡು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು. ಯಾದಗಿರಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ರುದ್ರಸ್ವಾಮಿ ಚಿಕ್ಕಮಠ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಈ ಹಿಂದೆ ನಾನು ಕೂಡ ಬಾಲ ಭವನದ ವತಿಯಿಂದ ಏರ್ಪಡಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದೇನೆ. ಆದರೆ ಇವಾಗ ನಾನು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯನಾಗಿ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಬಂದಿರುವುದು ನನಗೆ ತುಂಬ ಖುಷಿಯಾಗಿದೆ. ಪ್ರತಿ ವರ್ಷವು ಬಾಲ ಭವನವು ಪ್ರತಿಯೊಂದು ಮಕ್ಕಳಲ್ಲಿರುವ ಪ್ರತಿಯೊಂದು ಪ್ರತಿಭೆಯನ್ನು ಹೊರತರುವ ಕೆಲಸ ಮಾಡುತ್ತಿದೆ ಎಂದು ಖುಷಿ ಪಟ್ಟರು. ಜಿಲ್ಲಾ ಕಾರ್ಯಕ್ರಮ ಸಂಯೋಜಕರು ಅನೀಲ್ ಕುಮಾರ ಮಾತನಾಡಿ, ಬೇಸಿಗೆ ಶಿಬಿರವನ್ನು 2025ರ ಮೇ 22ರ ವರೆಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಒಂದು ಶಿಬಿರದಲ್ಲಿ ಸುಮಾರು 80 ಮಕ್ಕಳು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ಕುಮಾರಿ ಮಂಜುಳಾ, ಯಾದಗಿರಿ ಸರಕಾರಿ ಬಾಲಕಿಯರ ಬಾಲ ಮಂದಿರ ಅಧೀಕ್ಷಕರು ಶ್ರೀಮತಿ ನಾಗಮ್ಮ ಹಿರೇಮಠ, ಮಕ್ಕಳ ಜಾಗೃತಿ ಸಂಪನ್ಮೂಲ ವ್ಯಕ್ತಿ ದೇವಪ್ಪ, ನೃತ್ಯ ಶಿಕ್ಷಕರು ಮಧುಕುಮಾರ ಶಿಕ್ಷಕರು ವಿಶ್ವನಾಥ ಜಿಲ್ಲಾ ಕಾರ್ಯಕ್ರಮ ಸಹಾಯಕರು ಪ್ರಶಾಂತಕುಮಾರ ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವರ ಮುಂದುವರೆದ ಪ್ರವಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.09-ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಮುಂದುವರೆದ ಪ್ರವಾಸ ಕಾರ್ಯಕ್ರಮವು ಕೆಳಕಂಡಂತೆ ಇರುತ್ತದೆ.

ಅವರು ಮೇ 12 ರಂದು ಸೋಮವಾರ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಮೇ 13 ರಂದು ಮಂಗಳವಾರ ಸಂಜೆ 5 ಗಂಟೆಗೆ ಚಿಂಚೋಳಿ ತಾಲೂಕಿನ ಸುಲೇಪೇಟ್‌ದಲ್ಲಿ ಸುಲೇಪೇಟ್ ಸಿದ್ಧಾರ್ಥ ಯುವಕ ಮಂಡಳಿಯಿಂದ ಏರ್ಪಡಿಸಲಾದ ಡಾ.ಬಿ.ಆರ್. ಅಂಬೇಡ್ಕರ್‌ರವರ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಭಾಗವಹಿಸುವರು. ನಂತರ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಮೇ 14 ರಂದು ಬುಧವಾರ ಕಲಬುರಗಿಯಲ್ಲಿ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸುವರು.

## ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.09-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಈ ಕೆಳಕಂಡ ಫೀಡರ್‌ಗಳ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳಲಿರುವ ಪ್ರಯುಕ್ತ ಇದೇ ಮೇ 10 ರಂದು ಶನಿವಾರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ಸಂಗಮೇಶ್ವರ ಫೀಡರ್: ರಾಮ್ ನಗರ, ಸಂಗಮೇಶ್ವರ ಕಾಲೋನಿ, ಆನಂದ ಹೋಟೆಲ್, ಎನ್ ವಿ ಕಾಲೇಜ್ ಹಾಗೂ ಗಬರಾದಿ ಕಾಂಪ್ಲೇಕ್ಸ್.

ಜಿಲ್ಲಾ ನ್ಯಾಯಾಲಯ ಫೀಡರ್: ಇಂದಿರಾ ನಗರ, ಪಿ.ವಿ. ಕೋಠಾರಿ ಭವನ್, ಜಿಲ್ಲಾ ನ್ಯಾಯಾಲಯ, ಐ.ಡಿ.ಬಿ.ಐ. ಬ್ಯಾಂಕ್, ಮಾಲಕ್ ರೆಡ್ಡಿ ಆಸ್ಪತ್ರೆ, ಸರೌಂಡಿಂಗ್ ಹಾಗೂ ತಿಮ್ಮಾಪೂರಿ ಚೌಕ್ ಏರಿಯಾ.

ಕೆ.ಈ.ಬಿ ಕ್ವಾರ್ಟರ್ಸ್ ಫೀಡರ್: ಶಾಂತಿ ನಗರ, ವಿದ್ಯಾನಗರ, ಅಶೋಕ ನಗರ, ಎಮ್.ಎಸ್. ಕೆ. ಮಿಲ್ ಜಿಡಿಎ, ಖಾದಿರ್ ಚೌಕ್ ಹಾಗೂ ವಡ್ಡರ ಗಲ್ಲಿ.

ಅಶೋಕ ನಗರ ಫೀಡರ್: ಅಶೋಕ ನಗರ, ಎಮ್.ಎಸ್.ಕೆ. ಮಿಲ್ ಜಿ.ಡಿ.ಎ ಖಾದೀರ್ ಚೌಕ್, ಜಿಲಾನಾಬಾದ್ ಶಾಂತಿನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಸಿದ್ಧಾರ್ಥ ನಗರ ಫೀಡರ್: ಸಿ.ಐ.ಬಿ. ಕಾಲೋನಿ, ಸಿದ್ಧಾರ್ಥ ನಗರ, ಹೊಸ ಮತ್ತು ಹಳೆಯ ಘಾಟಗೆ ಲೇಔಟ್ , ಶಕ್ತಿ ನಗರ, ಕಾಂತ ಕಾಲೋನಿ, ಕೊತಂಬರಿ ಲೇಔಟ್, ಗೋದುತಾಯಿ ಲೇಔಟ್, ಬಸ್ ನಿಲ್ದಾಣ ಏರಿಯಾ, ಎಮ್.ಎಸ್.ಕೆ.ಮಿಲ್ ಜಿ.ಡಿ.ಎ, ಕಮರ್ಶಿಯಲ್ ಜಿ.ಡಿ.ಎ, ಭಗವತಿ ನಗರ, ಖೇಡಕರ್ ಲೇಔಟ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಸಮತಾ ಕಾಲೋನಿ ಫೀಡರ್: ಕೋರಿಮಠ, ಬ್ರಹ್ಮಪೂರ, ಧನಗಾರ ಗಲ್ಲಿ, ಬಸವ ನಗರ, ಸಮತಾ ಕಲೋನಿ, ಖಾನಿ ಏರೀಯಾ, ಶಹಾ ಹುಸೈನ್ ಚಿಲ್ಲಾ, ಬೊರಾಬಾಯಿ ನಗರ ಹಾಗೂ ಗಂಗಾ ನಗರ.

## ಕಮಲನಗರದಲ್ಲಿ ನಾಳೆ ಉಚಿತ ವೈದ್ಯಕೀಯ ತಪಾಸಣೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಪಟ್ಟಣದಲ್ಲಿ ನಾಳೆ ರವಿವಾರ ತಾಲೂಕಿನ ಜನರಿಗೆ ಉಚಿತ ವೈದ್ಯಕೀಯ ತಪಾಷಣೆ ಕಾರ್ಯಕ್ರಮವನ್ನು "ಹೆಲಿಂಗ ಹ್ಯಾಂಡ್ಸ್ ಹಾಸ್ಪಿಟಲ್" ವತಿಯಿಂದ ಸರಕಾರಿ ಆಸ್ಪತ್ರೆ ಎದುರಗಡೆ ಆಯೋಜನೆ ಮಾಡಲಾಗಿದೆ.



ಸದರಿ ಕಾರ್ಯಕ್ರಮದಲ್ಲಿ ರೋಗಿಗಳ ರಕ್ತ ಒತ್ತಡ, ಡೈಬೇಟೆಸ್ಟ್ ಟೆಸ್ಟ್, ಸಕ್ಕರೆ ರೋಗ, ಇಸಿಜಿ ಸೇರಿದಂತೆ ಪ್ರಾಥಮಿಕ ತಪಾಷಣೆ ನಡೆಯಲಿದೆ. ಇದರಲ್ಲಿ ನೂರಿತ ವೈದ್ಯರು ಭಾಗವಹಿಸಲಿದ್ದಾರೆ.

ಪ್ರಮುಖವಾಗಿ ಡಾ. ಅನಿಲ ಎಕ್ಲುರೆ ಎಮ್ ಬಿ ಬಿ ಎಸ ಎಮ್. ಡಿ (ಜನರಲ್ ಫಿಸಿಷಿಯನ್ ) , ಡಾ. ಶಿವಲೀಲಾ ಎಕ್ಲುರೆ ಎಮ್ ಬಿ ಬಿ ಎಸ ಎಮ್. ಎಸ್ (ಜನರಲ್ ಸರ್ಜನ್ ), ಡಾ. ಇರ್ಷಾದ ನವೀದ್ ಎಮ್ ಬಿ ಬಿ ಎಸ ಎಮ್. ಎಸ್ (ಒರ್ತುಪಾಡಿಕ್), ಹಾಗೂ ಡಾ. ಮೊಹ್ಮದ್ ಅಲ್ತಾಫ್ ಬಾಗವಾನ ಬಿ ಎ ಎಮ್ ಎಸ್ (ಜನರಲ್ ಫಿಸಿಷಿಯನ್ ) ವೈದ್ಯರ ಸೇವೆ ಸಿಗಲಿದೆ.

ಹಾಗಾಗಿ ಈ ಸಾರ್ವಜನಿಕ ಈ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಬೆಳಿಗ್ಗೆ 11 ರಿಂದ ಮದ್ಯಾಹ್ನ 3 ಗಂಟೆ ವರಿಗೆ ಕಾರ್ಯಕ್ರಮದ ಲಾಭ ಪಡೆದು ಕೊಳ್ಳವೇಕೆಂದು ಆಯೋಜಕರು ತಿಳಿಸಿದ್ದಾರೆ.

## ಮೇ.12ರಂದು ಜಿಲ್ಲಾಡಳಿತದಿಂದ ಭಗವಾನ್ ಬುದ್ಧ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09-ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೇ.12ರ ಬೆಳಿಗ್ಗೆ 11ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಭಗವಾನ್ ಬುದ್ಧ ಜಯಂತಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಶಾಲಾ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಕೃಷ್ಣ ಭಾಜಪೇಯಿ, ರಾಯಚೂರಿನ ಸಿದ್ಧಾರ್ಥ ಬುದ್ಧ ವಿಹಾರ ಸಮಿತಿಯ ಅಧ್ಯಕ್ಷರಾದ ಆರ್.ರವಿಕುಮಾರ್ ರಾಂಪೂರು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ.ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಅಪ್ಪಗೆರೆ ಸೋಮಶೇಖರ್ ಅವರು ಭಗವಾನ್ ಬುದ್ಧ ಜಯಂತಿ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗೂರು ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ: ಮೇ.11ರಂದು ನಗರದ ವಿವಿಧಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09-ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ 11 ಕೆ.ವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.11ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 03ಗಂಟೆಯವರೆಗೆ ವಿದ್ಯುತ್ತ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ಅಗ್ರಿಕಲ್ಚರ್ ಯೂನಿವರ್ಸಿಟಿ, ಅಸ್ಕಾಹಾಳ, ಕೃಷ್ಣ ಮೇಡೌಸ್, ಬೈಪಾಸ್ ರೋಡ್, ಅಮರಾವತಿ ಕಾಲೋನಿ, ಹೊಸ ಡಿ.ಸಿ ಆಫೀಸ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386 ಅಥವಾ 08532-231999ಗೆ ದೂರವಾಣಿಗೆಳಿಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ:

## ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 09–ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಮೇ 10 ರಿಂದ 12 ರ ವರೆಗೆ ಬೆಳಿಗ್ಗೆ 10 ರಿಂದ 12 ಮತ್ತು ಮಧ್ಯಾಹ್ನ 02 ರಿಂದ 04 ಗಂಟೆಯವರೆಗೆ ಕರ್ನಾಟಕಲೋಕಸೇವಾ ಆಯೋಗ ವತಿಯಿಂದ 2024 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ಆವರಣವನ್ನು ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ 2023 ರ ಕಲಂ 163 ರಡಿ ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣದಲ್ಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಿ ಆದೇಶಿಸಿದ್ದಾರೆ. ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಷೇಧಿಸಿದೆ.

ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಕೈಮಗ್ಗ ತಂತ್ರಜ್ಞಾನದಲ್ಲಿ ಮೂರು ವರ್ಷಗಳ ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ09–2025–26ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲಿಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ, ಪ್ರತಿ ತಿಂಗಳು ರೂ.2,500 ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಸಾಮಾನ್ಯವರ್ಗದ ಅಭ್ಯರ್ಥಿಗಳು ಜುಲೈ 01ಕ್ಕೆ ಅನ್ವಯಿಸುವಂತೆ 15 ರಿಂದ 23 ವರ್ಷ ವಯೋಮಿತಿಯಲ್ಲಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದ ಅಭ್ಯರ್ಥಿಗಳು 15 ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ.

ಅರ್ಜಿಗಳನ್ನು https://khtigadag.ac.in/Admissionform.pdf ಲಿಂಕ್‌ನಲ್ಲಿ ಡೌನ್‌ಲೊಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಜೂ.15 ರೊಳಗಾಗಿ ಇದೇ ಕಚೇರಿಗೆ ಸಲ್ಲಿಸಬೇಕು.

ಡಿಪ್ಲೋಮಾ ಕೋರ್ಸ್‌ಗಳಿಗೆ ಲಭ್ಯವಿರುವ ಸಂಸ್ಥೆಗಳ ವಿವರ:*

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ(ಕರ್ನಾಟಕ) –22 ಅಭ್ಯರ್ಥಿಗಳು, ಭಾರತಿಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) – 12 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತಿಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) – 03 ಅಭ್ಯರ್ಥಿಗಳು, ಭಾರತಿಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) – 02 ಅಭ್ಯರ್ಥಿಗಳು ಸೇರಿದಂತೆ ಒಟ್ಟು 39 ಅಭ್ಯರ್ಥಿಗಳ ಸೀಟ್‌ಗಳನ್ನು ಕಾಯ್ದಿರಿಸಲಾಗಿದೆ.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಲಿಂಗ್‌ಗಾಗಿ ಕರೆಯಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ನಗರದ ಅನಂತಪುರ ರಸ್ತೆಯ ಹೊಸ ಜಿಲ್ಲಾಡಳಿತ ಭವನದ 'ಎ' ಬ್ಲಾಕ್‌ನ 1ನೇ ಮಹಡಿಯ ಕೊಠಡಿ ಸಂಖ್ಯೆ 29ರ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರವರ ಕಚೇರಿ ಅಥವಾ ಮೊ.9902772936, 9844837264 ಮತ್ತು 9901313417 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 09–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಬ್ಯಾಂಕ್–2ನ ಫೀಡರ್‌ಗಳಾದ ಎಫ್–34 ಹಾಗು ಎಫ್–72 ರ ತುರ್ತು ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಮೇ 10 ರಂದು ಬೆಳಿಗ್ಗೆ 09 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಫಸ್ಟ್‌ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟ್ರಿಟ್, ನಂದಿ ಕಾಲೋನಿ, ಸೂರ್ಯ ಕಾಲೋನಿ, ರೆಹಮಬದ್ ಲೇಔಟ್, ಎಚ್.ಆರ್.ಜಿ. ಕಾಲೋನಿ, ತಿಲಕ್‌ನಗರ್ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 11 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 09– ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಮೇ 11 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಎಫ್–46 ವ್ಯಾಪ್ತಿಯ ಇಂಡಸ್ಟ್ರಿಯಲ್ ಏರಿಯಾ ಹಂತ–1, ಮಾರೆಮ್ಮನ ಗುಡಿ ಹಿಂದುಗಡೆ ಏರಿಯಾ ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 3 ವರ್ಷದ ಡಿಪ್ಲೊಮಾ ಕೋರ್ಸ್ಗೆ ಅರ್ಜಿ ಆಹ್ವಾನ

ಯಾದಗಿರಿ : ಮೇ 09: 2025–26 ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷದ ಡಿಪ್ಲೊಮಾ ಕೋರ್ಸ್ಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕರು ಅವರು ತಿಳಿಸಿದ್ದಾರೆ.

ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೊಮೋ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ಗಳ ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2025ರ ಜುಲೈ 1ರ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ.

2025–26ನೇ ಸಾಲಿಗೆ ಮೂರು ವರ್ಷದ ಡಿಪ್ಲೋಮಾ ಕೋರ್ಸ್ಗಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವರ : ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ) 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) 12 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) 02 ಅಭ್ಯರ್ಥಿಗಳು, ಒಟ್ಟು 39 ಅಭ್ಯರ್ಥಿಗಳು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಲು ಲಿಂಕ್ Khtigadag.ac.in, Admissionform.pdf ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ, ಬೆಟಗೇರಿ–582102" ಇಲ್ಲಿಗೆ 2025ರ ಜೂನ್ 15ರ ಒಳಗೆ ಅರ್ಜಿ ಸಲ್ಲಿಸಬೇಕು. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ, ಬೆಟಗೇರಿ 582102 ಮೊ.ನಂ.944916822 ಅಥವಾ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಆಡಳಿತ ಸಂಕೀರ್ಣ, ಸಿ–ಬ್ಲಾಕ್, ಕೊಠಡಿ ಸಂಖ್ಯೆ:–ಸಿ–6, 2ನೇ ಮಹಡಿ ಚಿತ್ತಾಪೂರ ರೋಡ್ ಯಾದಗಿರಿ 585202 ದೂ.ಸಂ. 08473253387ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ರೆಡ್‌ಕ್ರಾಸ್ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.9–ನಗರದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಂತರಿಕ ಗುಣಮಟ್ಟ ಭರವಸೆ ಕೋಶ ಹಾಗೂ ಯುಥ್ ರೆಡ್ ಕ್ರಾಸ್ ಘಟಕದ ವತಿಯಿಂದ ಗುರುವಾರ ಜೀನ ಹೇನ್ರಿ ಡ್ಯುನಾಂಟ್ ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

ಪ್ರಭಾರ ಪ್ರಾಚಾರ್ಯ ಡಾ.ಎಸ್.ಎಸ್.ಹಂಗರಗಿ, ಯುವ ರೆಡ್ ಕ್ರಾಸ್ ಘಟಕ ಸಂಯೋಜಕ ಕೃಷ್ಣಾ ಲಮಾಣಿ ಹಾಗೂ ಉಪನ್ಯಾಸಕರಾದ ಎಸ್.ಎಂ.ಹಡಪದ, ಎಸ್.ಪಿ.ದೇಶಪಾಂಡೆ, ಎನ್.ಬಿ.ಹಸಬಿ, ಎ.ಎ.ಗಂಗಲ್, ಕೆ.ಎಸ್.ದಾಸರ, ಎಚ್.ಜಿ.ಗೌಡರ, ಎಸ್.ವಾಯ್.ಬೊಮ್ಮಣ್ಣವರ, ಜಿ.ಕೆ.ಕಿಲಬನೂರ ಇ.ಎಸ್.ರಾಠೋಡ. ಎಂ.ಡಿ.ಕೊರವಾರ, ಎನ್.ಎಚ್.ಹವಾಲ್ದಾರ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಿಇ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಅವಿಷ್ಕಾರ -2025 ಪ್ರದರ್ಶನ ವಿದ್ಯಾರ್ಥಿಗಳ ತಾಂತ್ರಿಕ ನೈಪುಣ್ಯತೆ, ಕೌಶಲಗಳ ಅನಾವರಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.9– ಪರಿಪೂರ್ಣತೆಯಿಂದ ನಿಖರವಾಗಿ ಕಾರ್ಯರೂಪಕ್ಕೆ ಇಳಿಸುವಂತ ಸಾಮರ್ಥ್ಯವನ್ನು ಭಾರತೀಯ ತಂತ್ರಜ್ಞರು ಹೊಂದಿದ್ದಾರೆ ಎಂದು ಬಿ.ವಿ.ವಿ.ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಆರ್.ಎನ್.ಹೆರಕಲ್ ಹೇಳಿದರು.

ಬಸವೇಶ್ವರ ಇಂಜಿನೀಯರಿಂಗ್ ಕಾಲೇಜಿಲ್ಲಿ ಐಕ್ಯೂಎಸಿ ಹಾಗೂ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ವಿಭಾಗದ ಸಹಯೋಗದಲ್ಲಿ ಶುಕ್ರವಾರ ನಡೆದ ಕಾಲೇಜು ಮಟ್ಟದ ಇಂಜಿನೀಯರಿಂಗ ವಿದ್ಯಾರ್ಥಿಗಳ ಪ್ರಾಜೆಕ್ಟ್ ಪ್ರದರ್ಶನ ಅವಿಷ್ಕಾರ –2025ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಧಾನ ಮಂತ್ರಿಗಳ ಆಶಯದ ಮೇಕ್ ಇನ್ ಇಂಡಿಯಾದಂತ ಕಲ್ಪನೆಗಳು ಇಂದು ಉತ್ತಮ ಪಲಿತಾಂಶ ನೀಡುತ್ತಿವೆ. ನಮ್ಮ ಸ್ವದೇಶಿ ಪ್ರತಿಭೆಗಳಿಂದ ನಿರ್ಮಿತ ತಾಂತ್ರಿಕ ಉತ್ಪನಗಳಿಂದ ನಾವಿಂದು ಬೃಹತ್ ಜಾಗತಿಕ ಶಕ್ತಿಯಾಗಿ ಬೆಳೆದು ನಿಂತಿದ್ದೆವೆ. ಇಂಥಹ ವೇದಿಕೆ ಮೂಲಕ ವಿದ್ಯಾರ್ಥಿಗಳು ನಾವಿನ್ಯತೆಗಳ ಕುರಿತು ಯೋಜಿಸಿ ಸಾಕಾರಗೊಳಿಸುವತ್ತ ಪ್ರಯತ್ನಿಸಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಬಿ.ಆರ್.ಹಿರೇಮಠ ಮಾತನಾಡಿ, ಶೈಕ್ಷಣಿಕ ಮತ್ತು ಸೃಜನಾತ್ಮಕ ಚಟುವಟಿಕೆಗಳಿಗೆ ನಿರಂತರವಾಗಿ ವಿದ್ಯಾರ್ಥಿಗಳಿಗೆ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ. ಇಂಥಹ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ತಾಂತ್ರಿಕ ನೈಪುಣ್ಯತೆ ಮತ್ತು ಕೌಶಲ್ಯಗಳು ವೃದ್ಧಿಯಾಗಲಿವೆ ಎಂದರು. ಧಾರವಾಡ ಐಐಐಟಿ ಪ್ರಾಧ್ಯಾಪಕರಾದ ಡಾ.ಮಂಜುನಾಥ, ಡಾ.ಪಂಕಜ ಕುಮಾರ ನಿರ್ಣಾಯಕರಾಗಿ ಆಗಮಿಸಿದ್ದರು. ಸಂಯೋಜಕ ಡಾ.ಮಮತಾ ಸತರೆಡ್ಡಿ ಸ್ವಾಗತಿಸಿದರು. ಡಾ.ಮಹಾಬಳೇಶ್ವರ.ಎಸ್.ಕೆ ಪ್ರಾಸ್ತಾವಿಕ ಮಾತನಾಡಿದರು. ಅನನ್ಯ ಜೋಶಿ ಪ್ರಾರ್ಥಿಸಿದರು. ಡಾ.ಜಯಶ್ರೀ ಮಲ್ಲಾಪುರ ವಂದಿಸಿದರು. ಐಶ್ವರ್ಯ ಹಿಪ್ಪರಗಿ ಕಾರ್ಯಕ್ರಮ ನಿರೂಪಿಸಿದರು.

ಡಾ.ಪಿ.ಎನ್.ಕುಲಕರ್ಣಿ, ವಾಯ್.ಎಸ್.ನಾರಾಯಣ, ಅಭಿವೃದ್ಧಿ ಅಧಿಕಾರಿ ಪ್ರೊ.ಬಿ.ಎಸ್.ಹರವಿ, ಡಾ. ಭಾರತಿ ಮೇಟಿ, ಸಂಯೋಜಕ ಡಾ.ಬಿ.ಎಮ್.ಅಂಗಡಿ, ವಿಭಾಗದ ಮುಖ್ಯಸ್ಥರುಗಳು, ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಗಮನ ಸೆಳದ ಪ್ರದರ್ಶನ: ಕೃಷಿಯಲ್ಲಿ ಈರುಳ್ಳಿ ರಾಶಿಮಾಡುವ ಯಂತ್ರ, ನೈಟ್ರೋಜಿನ್ ಆಧರಿತ ಪರಿಸರ ಸ್ನೇಹಿ ಜೆಟ್ ಇಂಜಿನ್, ಎಐ ಆಧಾರಿತ ಚಲನವಲನಗಳ ಗುರುತಿಸಿ, ಗಮನಿಸುವ ವ್ಯವಸ್ಥೆ, ಅರಣ್ಯ ಮತ್ತು ಘಾಟ ರಸ್ತೆಗಳಲ್ಲಾಗುವ ಅಪಘಾತ ತಡಗಟ್ಟುವ ಪ್ರಾತ್ಯಕ್ಷಿಕೆ, ಬೂಕಂಪ್‌ನ ನಿರೋಧಕ ಕಟ್ಟಡ ನಿರ್ಮಾಣದ ಪ್ರಾಜೇಕ್ಟ್‌ಗಳು ಗಮನ ಸೇಳೆದವು.

ಕಾಲೇಜು ಮಟ್ಟದ ಬಿ.ಇ ವಿದ್ಯಾರ್ಥಿಗಳು ಸಿದ್ದಪಡಿಸಿದ ಪ್ರಾಜೇಕ್ಟ್ ಪ್ರದರ್ಶನ 2025 ಅವಿಷ್ಕಾರದಲ್ಲಿ 350ಕ್ಕೂ ಅಧಿಕ ವಿದ್ಯಾರ್ಥಿಗಳು 100ಕ್ಕೂ ಹೆಚ್ಚು ಪ್ರಾಜೆಕ್ಟ್‌ಗಳನ್ನು ಪ್ರದರ್ಶನ ಮಾಡಿದರು.

# 2 ವರ್ಷದ ಡಿಪ್ಲೊಮಾ ಕೋರ್ಸ್ಗೆ ನೇರ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 09, (ಕ.ವಾ) : 2025–26 ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 02 ವರ್ಷದ ಡಿಪ್ಲೊಮಾ ಕೋರ್ಸ್ಗೆ ನೇರ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕರು ಅವರು ತಿಳಿಸಿದ್ದಾರೆ.

ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 02ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 10 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಈ ಕೆಳಗೆ ತಿಳಿಸಿದ ವಿದ್ಯಾರ್ಹತೆಯುಳ್ಳ ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ಗಳ ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾಯ ಐ.ಐ.ಎಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.

ವಿದ್ಯಾರ್ಹತೆ: ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. 10+2 ಪಾಸ್ (2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೊಮಾ ಕೋರ್ಸ್ಗೆ ಪ್ರವೇಶ ಪಡೆಯಲು ಅರ್ಹರು. ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ವಯೋಮಿತಿ 27 ವರ್ಷ. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ. ಲ್ಯಾಟರಲ್ ಎಂಟ್ರಿ ಮುಖಾಂತರ 2ನೆ ವರ್ಷದ ಡಿಪ್ಲೊಮಾ ಕೋರ್ಸ್ಗೆ ನೇರ ಪ್ರವೇಶಕ್ಕಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವರ : ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ) 02 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) 03 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂದ್ರಪ್ರದೇಶ) 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) 02 ಅಭ್ಯರ್ಥಿಗಳು ಒಟ್ಟು 10 ಅಭ್ಯರ್ಥಿಗಳು ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಲು ಲಿಂಕ್ Khtigadag.ac.in, lateralentryadmission-form.pdf ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ, ಬೆಟಗೇರಿ–582102" ಇಲ್ಲಿಗೆ 2025ರ ಜೂನ್ 15ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ, ಬೆಟಗೇರಿ, 582102 ಮೊ.ಸಂ.944916822 ಅಥವಾ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಆಡಳಿತ ಸಂಕೀರ್ಣ, ಸಿ–ಬ್ಲಾಕ್, ಕೊಠಡಿ ಸಂ.ಸಿ–6, 2ನೇ ಮಹಡಿ ಚಿತ್ತಾಪೂರ ರೋಡ್ ಯಾದಗಿರಿ 585202 ದೂ.ಸಂ.08473253387ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆರೆಗಳಲ್ಲಿ ಮೀನುಗಾರಿಕೆಗೆ ಅವಕಾಶ ಕೊಡಿಸಿ – ಸುನೀಲ ಭಾವಿಕಟ್ಟಿ



ಬೀದರ್ : ಬೀದರ ಜಿಲ್ಲೆಯಲ್ಲಿರುವ ಕೆರೆಗಳಲ್ಲಿ ಮೀನುಗಾರಿಕೆಗಾಗಿ ಟೋಕರೆ ಕೋಳಿ (ಕೋಲಿ–ಕಬ್ಬಲಿಗ) ಸಮಾಜದ ಬಾಂಧವರಿಗೆ ಅವಕಾಶ ಒದಗಿಸಿಕೊಟ್ಟರೇ ಅವರು ಆರ್ಥಿಕವಾಗಿ ಪ್ರಗತಿ ಸಾಧಿಸಿ ಅದರಿಂದ ತಮ್ಮ ಕುಟುಂಬದ ನಿರ್ವಹಣೆಯೊಂದಿಗೆ ತಮ್ಮ ಮಕ್ಕಳಿಗೆ ಉತ್ತಮವಾದ ಶಿಕ್ಷಣ ಕೊಡಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಡಿಸಿಸಿಐ ಮೀನುಗಾರರ ಘಟಕದ ಅಧ್ಯಕ್ಷರು ಶ್ರಮಿಸಬೇಕಾಗಿದೆ ಎಂದು ಅಂಬಿಗರ ಚೌಡಯ್ಯ ಯುವ ಸೇನೆ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ ಭಾವಿಕಟ್ಟಿ ಅವರು ಅಭಿಪ್ರಾಯಪಟ್ಟರು.

ಬೀದರ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಶೇಕಾಪೂರ್ (ಯರನಳ್ಳಿ) ಗ್ರಾಮದಲ್ಲಿ ಅಂಬಿಗರ ಚೌಡಯ್ಯ ಯುವ ಸೇನೆಯಿಂದ ಏರ್ಪಡಿಸಿದ ಸ್ವಾಗತ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಮಿಟಿಯ ಮಿನುಗಾರರ ಬೀದರ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ಸುನೀಲಕುಮಾರ ತುಕಾರಾಮ್ ಖಾಸೆಂಪೂರ್ ಅವರಿಗೆ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿ, ಗೌರವಿಸಿ, ಮಾತನಾಡುತ್ತಿದ್ದರು.

ಮೀನುಗಾರಿಕೆ ಇಲಾಖೆಯಿಂದ ಸಿಗುವ ಸಕಲ ಸೌಲತ್ತುಗಳು ಮತ್ತು ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ದೊರಕುವ ಎಲ್ಲಾ ಸೌಲಭ್ಯಗಳನ್ನು ಸಮಾಜ ಬಾಂಧವರಿಗೆ ಕೊಡಿಸಲು ನೂತನ ಅಧ್ಯಕ್ಷರಾದ ಖಾಸೆಂಪೂರ ಅವರು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾದರೇ ನಮ್ಮ ಸಮಾಜ ಅಭಿವೃದ್ಧಿಯತ್ತ ಸಾಗುತ್ತದೆ. ಮುಂಬರುವ ದಿನಗಳಲ್ಲಿ ನಡೆಯುವ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಸ್ಪರ್ಧಿಸಲು ಈ ಕಾರ್ಯದಿಂದ ಅವಕಾಶ ದೊರಕಬಹುದಾಗಿದೆ ಎಂದು ಭಾವಿಕಟ್ಟಿ ನುಡಿದರು.

ಈ ಸನ್ಮಾನ ಕಾರ್ಯಕ್ರಮದಲ್ಲಿ ಟೋಕರೆ ಕೋಳಿ ಸಮಾಜ ಸಂಘದ ಬೀದರ ದಕ್ಷಿಣ ಕ್ಷೇತ್ರದ ಅಧ್ಯಕ್ಷ ಶನ್ಮೂಖಪ್ಪಾ ಶೇಕಾಪೂರ್, ನಾಗೂರಾ ಗ್ರಾಮ ಪಂಚಾಯತ್ ಉಪಾಧ್ಯಕ್ಷ ನರಸಪ್ಪ ಜಾನಪ್ಪನೋರ್, ಸೇನೆಯ ಪ್ರಮುಖರಾದ ರಮೇಶ ಖಾಸೆಂಪೂರ್, ಸೂರ್ಯಕಾಂತ ಕಾಗೆ, ಸಂಜುಕುಮಾರ ಯಾಕತಪೂರ್, ರಾಜಕುಮಾರ ರೇಕುಳಗಿ, ಸೂರ್ಯಕಾಂತ ಚಾಂಗಲೇಲಾ, ಸಿದ್ದು ಖಾಸೆಂಪೂರ್, ಲಾಲಪ್ಪಾ ಮಂಗಲಗಿ, ಜಿತೇಂದ್ರ ವ್ಮರ್ಜಾಪೂರ್, ರಮೇಶ ಬರೂರ್, ಮೊಗಲಪ್ಪಾ ಬರೂರ್, ನಾಗೇಶ ವಾಲಿಕಾರ್, ಸಂತೋಷ ಚೌಕಿ, ರಮೇಶ ಮನ್ನಳ್ಳಿ, ಆನಂದ ಶೇಕಾಪೂರ್, ಲೋಕೇಶ ಫತ್ತೇಪೂರ್, ಶಶಿಕಾಂತ ಭಾವಿಕಟ್ಟಿ, ಆನಂದ ಸೇರಿದಂತೆ ಇತರರು ಇದ್ದರು.

## ಯುವನಿಧಿ ಯೋಜನೆ: ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವನಿಧಿ ಫಲಾನುಭವಿಗಳು ಪ್ರತಿ ತಿಂಗಳು ದಾಖಲಿಸುತ್ತಿರುವ ಸ್ವಯಂ ಘೋಷಣೆಯನ್ನು ಇನ್ನೂ ಮುಂದೆ ಮೂರು ತಿಂಗಳಿಗೊಮ್ಮೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

2023 ಅಥವಾ 2024ನೇ ಸಾಲಿನಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮ್ ನಲ್ಲಿ ತೇರ್ಗಡೆ–ಯಾಗಿ, ಇನ್ನೂ ಯುವ ನಿಧಿ ಯೋಜನೆಗೆ ಅರ್ಜಿ ಸಲ್ಲಿಸದೇ ಇರುವ ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟ್ಲ್ ವೆಬ್‌ಸೈಟ್ https://sevasindhugs.karnataka.gov.in ಮೂಲಕ ಗ್ರಾಮ್ ಒನ್ , ಕರ್ನಾಟಕ ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಯುವ ನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಯಾವುದೆ ಕೊನೆಯ ದಿನಾಂಕ ನಿಗದಿಯಾಗಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಯುವನಿಧಿ ಸಹಾಯವಾಣಿ ಸಂಖ್ಯೆ : 18005997154ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಪ್ರಕಟಣೆ ತಿಳಿಸಿದೆ.

ಜಾಹೀರಾತಿಗಾಗಿ ಇಂದೆ ಸಂಪರ್ಕಿಸಿ:9449732000

# ದೇವಸ್ಥಾನಗಳಲ್ಲಿ ಸಕಾರಾತ್ಮಕ ಶಕ್ತಿಯಿದೆ-ಶಶಾಂಕ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.9-ದೇವಸ್ಥಾನಗಳಲ್ಲಿ ಸಕಾರಾತ್ಮಕ ಶಕ್ತಿಯಿದ್ದು, ಮಂದಿರಕ್ಕೆ ಬರುವ ಭಕ್ತರಲ್ಲಿ ಸಕಾರಾತ್ಮಕ ಭಾವನೆಗಳನ್ನು ಸೃಷ್ಠಿ ಮಾಡುತ್ತವೆ ಎಂದು ಧಾರವಾಡದ ಗುರುಮಳ ಮಲ್ಲೇಶ್ವರ ಸಂಸ್ಥಾನ ಹಿರೇಮಠದ ಪೂಜ್ಯ ಶಶಾಂಕ ಸ್ವಾಮೀಜಿ ಹೇಳಿದರು.

ಸಮೀಪದ ಶಿರೂರ ಪಟ್ಟಣದಲ್ಲಿ ಶುಕ್ರವಾರ ಜರುಗಿದ ಬನಶಂಕರಿದೇವಿ ನೂತನ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ದೇವಸ್ಥಾನಕ್ಕೆ ಬರುವ ಯಾವುದೇ ವ್ಯಕ್ತಿಯ ಮನಸ್ಸನ್ನು ಪರಿವರ್ತಿಸುವ ಹಾಗೂ ಮನಸ್ಸನ್ನು ಹಗುರ ಮಾಡುವ ಶಕ್ತಿ ದೇವಸ್ಥಾನಗಳಲ್ಲಿದೆ ಎಂದರು.

ಮನುಷ್ಯ ಸಂಕುಚಿತ ಭಾವನೆಯಿಂದ ಹೊರಬಂದು, ಸಕಾರಾತ್ಮಕ ವಿಚಾರವನ್ನು ಇಟ್ಟುಕೊಂಡು ಸತ್ಕಾರ್ಯಗಳಲ್ಲಿ ಭಾಗಿಯಾದರೆ ಶಾಂತಿ, ನೆಮ್ಮದಿಯ ಜೀವನ ಪಡೆಬಹುದಾಗಿದೆ ಎಂದ ಶಶಾಂಕ ಶ್ರೀಗಳು, ಒಗ್ಗಟ್ಟಿನಿಂದ ಸಮುದಾಯದ ಕೆಲಸ ಕಾರ್ಯಗಳು ಸುಸೂತ್ರವಾಗಿ ನಡೆಯಲು ಸಾಧ್ಯ ಎಂದು ಹೇಳಿದರು.

ಆಶೀರ್ವಚನ ನೀಡಿದ ಗುಳೇದಗುಡ್ಡ ಮರಡಿಮಠದ ಅಭಿನವ ಕಾಡಸಿದ್ಧೇಶ್ವರ ಶ್ರೀಗಳು, ದೇವಸ್ಥಾನಗಳು ಶೃದ್ಧಾ ಕೇಂದ್ರಗಳಾಗಿದ್ದು, ಯಾರಲ್ಲಿ ಶೃದ್ಧೆ, ನಂಬಿಕೆ, ಗುರುಭಕ್ತಿ ಇರುತ್ತದೆಯೋ ಅವರು ಎತ್ತರಕ್ಕೆ ಬೆಳೆಯುತ್ತಾರೆ. ಒಳ್ಳೆಯದನ್ನು ಬಯಸುವುದೇ ಪೂಜೆಯಾಗಿದ್ದು, ವಿದ್ಯೆ, ಧರ್ಮ, ದಾನ, ಮನುಷ್ಯತ್ವ ಇವುಗಳಿಲ್ಲದೇ ಬದುಕಲು ಸಾಧ್ಯವಿಲ್ಲ ಎಂದರು.

ಮುಖ್ಯ ಅತಿಥಿ ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟದ ಗೌರವಾಧ್ಯಕ್ಷ ಎಂ.ಡಿ.ಲಕ್ಷೀನಾರಾಯಣ ಮಾತನಾಡಿ, ಸಮುದಾಯ ಒಗ್ಗಟ್ಟಿನಿಂದಿದ್ದು, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಬೇಕು. ಜೊತೆಗೆ ಅಸಹಾಯಕ ಮಕ್ಕಳನ್ನು ದತ್ತು ಪಡೆದು ಅವರೂ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡುವುದಕ್ಕೆ ಸಮಾಜ ನೆರವಾಗಬೇಕು ಎಂದು ಹೇಳಿದರು.

ಗುಳೇದಗುಡ್ಡದ ಚಿದಾನಂದ ಸ್ವಾಮೀಜಿ, ಕರ್ನಾಟಕ ರಾಜ್ಯ ದೇವಾಂಗ ಸಂಘದ ಅಧ್ಯಕ್ಷ ರವೀಂದ್ರ ಕಲಬುರ್ಗಿ, ದೇವಾಂಗ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ಕುದರಿ, ಸಿದ್ದೇಶ್ವರ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ತಮ್ಮಣ್ಣ ಗಿರಿಜಾ, ಬಸವರಾಜ ಬಿಲ್ಲಾರ ಮಾತನಾಡಿದರು. ಅಧ್ಯಕ್ಷತೆಯನ್ನು ಸ್ಥಳೀಯ ದೇವಾಂಗ ಸಮಾಜದ ಅಧ್ಯಕ್ಷ ಕಾಶಪ್ಪಗೌಡ ಪ್ಯಾಟಿಗೌಡ್ರ ವಹಿಸಿದ್ದರು. ಮಲ್ಲಮ್ಮ ಗುಲಗಂಜಿ ಇದ್ದರು.

ಸಮಾರಂಭದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ನೇಕಾರ ಸಮಾಜದ ವಿದ್ಯಾರ್ಥಿಗಳು ಹಾಗೂ ದಾನಿಗಳನ್ನು ಸನ್ಮಾನಿಸಲಾಯಿತು.

ಲಕ್ಷ್ಮಣ ಬದಾಮಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸುಭಾಸ ಹುಲ್ಯಾಳ ನಿರೂಪಿಸಿದರು.

# 7.15 ಕೋಟಿ ರೂ.ಗಳ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.9-ಮತಕ್ಷೇತ್ರ ವ್ಯಾಪ್ತಿಯ ಬೆನಕಟ್ಟಿ ಗ್ರಾಮದಲ್ಲಿ ಶಾಸಕ ಎಚ್.ವಾಯ್.ಮೇಟಿ ಶುಕ್ರವಾರ 7.15 ಕೋಟಿ ರೂ.ಗಳ ಮೂರು ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಮತಕ್ಷೇತ್ರದಲ್ಲಿ ಹಾಯ್ದು ಹೋಗಿರುವ ಬನಶಂಕರಿ-ಮಹಾಕೂಟ-ಆಲಮಟ್ಟಿಡ್ಯಾಮ್ ರಾಷ್ಟ್ರೀಯ ಹೆದ್ದಾರಿ 135 ರಲ್ಲಿ ಕಿಲೋ ಮೀಟರ 39 ರಿಂದ ಕಿ.ಮೀ 44.70 ರವರೆಗೆ(ಬೆನಕಟ್ಟಿ ಬಳಿ) ಅಗಲೀಕರಣದೊಂದಿಗೆ ರಸ್ತೆ ಸುಧಾರಣೆ ಮಾಡುವ 6 ಕೋಟಿ ರೂ.ಗಳ ಕಾಮಗಾರಿ, ಇದೇ ರಸ್ತೆಯಲ್ಲಿನ ಕಿ.ಮೀ 41 ರಿಂದ ಕಿ.ಮೀ 42.5 ರ ಮಧ್ಯದಲ್ಲಿ 1 ಕೋಟಿ ರೂ.ಗಳ ವೆಚ್ಚದ ಕಿರು ಸೇತುವೆ ಕಾಮಗಾರಿ ಈಗ ಪೂಜೆಗೊಂಡು ಕೆಲಸ ಪ್ರಾರಂಭವಾಗಲಿದೆ. ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ಮಾಡಬೇಕು. ರಸ್ತೆ ಸುಧಾರಣೆ ಕಾರ್ಯ ನಡೆಯುವಾಗ ಯಾವುದೇ ತೊಂದರೆಯಾಗದಂತೆ ಸಾರ್ವಜನಿಕರೂ ಸಹ ಸಹಕರಿಸಬೇಕು ಎಂದು ಶಾಸಕ ಮೇಟಿ ಹೇಳಿದರು.

ಜೊತೆಗೆ ಬೆನಕಟ್ಟಿ ಗ್ರಾಮದಲ್ಲಿ 15 ಲಕ್ಷ ರೂ.ಗಳ ಯಲ್ಲಾಲಿಂಗ ದೇವಸ್ಥಾನದ ಸಮುದಾಯ ಭವನದ ಅಭಿವೃದ್ಧಿ ಕಾಮಗಾರಿಗೂ ಚಾಲನೆ ನೀಡಲಾಗಿದ್ದು, ಗ್ರಾಮಕ್ಕೆ ಅಗತ್ಯವಿರುವ ಯಾವುದೇ ಅಭಿವೃದ್ಧಿ ಕಾರ್ಯಕ್ಕೂ ಹಿಂದೇಟು ಹಾಕದೇ ಮಾಡಿಕೊಡುವುದಾಗಿ ಶಾಸಕ ಎಚ್.ವಾಯ್.ಮೇಟಿ ಭರವಸೆ ನೀಡಿದರು. ಗ್ರಾಪಂ ಅಧ್ಯಕ್ಷೆ ಪಾರ್ವತೆವ್ವ ಮಾದರ ಅಧ್ಯಕ್ಷತೆ ವಹಿಸಿದ್ದರು.

ಗ್ರಾಪಂ ಉಪಾಧ್ಯಕ್ಷ ವೆಂಕಟೇಶ ದಾಸಪ್ಪನವರ, ಪ್ರಮುಖರಾದ ಸವರಾಜ ಅರಕೇರಿ, ಬಿ.ಆರ್.ಯಡಹಳ್ಳಿ, ಶಿವಪ್ಪ ಪಾಟೀಲ, ರಂಗಣ್ಣ ಕಟಗೇರಿ, ಮಲ್ಲಿಕಾರ್ಜುನ ಮೇಟಿ, ವೇಮನ ಯಡಹಳ್ಳಿ, ನೀಲಪ್ಪ ಪೆಟ್ಲೂರ, ಅಶೋಕ ಮೆಳ್ಳಿ, ರಾಘು ಯಡಹಳ್ಳಿ, ವೆಂಕಟೇಶ ತಿಮ್ಮಾಪೂರ, ಬ್ಲಾಕ್ ಕಾಂಗ್ರೆಸ್ ಗ್ರಾಮೀಣ ಘಟಕದ ಮಹಿಳಾ ಅಧ್ಯಕ್ಷೆ ಮಂಜುಳಾ ಕಮತಗಿ, ದುಂಡಪ್ಪ ಯಡಹಳ್ಳಿ, ರಾಯಪ್ಪ ಬಂಡಿ, ನಿಂಗಪ್ಪ ಶಿರೂರ, ವ್ಹಿ.ಪಿ.ಯಡಹಳ್ಳಿ, ಶಂಕರ ಕುದರಿ, ಸಿ.ಎನ್.ಬಾಳಕ್ಕನವರ, ಶೇಖಪ್ಪ ಬಂಡಿ, ಹನಮಂತ ಸನ್ನಪ್ಪನವರ, ಮಲ್ಲಪ್ಪ ಗುಳೇದ, ರವಿ ಅರಿಷಿಣಗೋಡಿ, ಯಲ್ಲಪ್ಪ ಸೂಳಿಕೇರಿ, ಗ್ರಾಪಂ ಪಿಡಿಓ ಜ್ಯೋತಿ ಪಾಟೀಲ, ಮಹಾಂತಗೌಡ ಪಾಟೀಲ, ನೀಲಪ್ಪ ಮಲಘಾಣ, ಲೋಕೋಪಯೋಗಿ ಇಲಾಖೆಯ ಎಇಇ ನಾರಾಯಣ ಕುಲಕರ್ಣಿ, ಜೆಇ ಮಲ್ಲು ಹಾಲವರ, ಗುತ್ತಿಗೆದಾರ ಮಂಜುನಾಥ ಒಂಟಗೋಡಿ ಇದ್ದರು.

## ಎಸ್.ಎಸ್.ಎಲ್.ಸಿ ಪರೀಕ್ಷೆ-2ರ ನೋಂದಣಿಗೆ ಶುಲ್ಕ ವಿನಾಯಿತಿ: ಇಂದು ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025ರ ಎಸ್.ಎಸ್.ಎಲ್.ಸಿ ಪರೀಕ್ಷೆ-1 ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಎರಡನೇ ಹಂತದ ಪರೀಕ್ಷೆಯ ನೋಂದಣಿಗಾಗಿ ಮೊದಲ ಬಾರಿ ಶುಲ್ಕ ವಿನಾಯಿತಿಯನ್ನು ನೀಡಲಾಗಿರುತ್ತದೆ. ಎರಡನೇ ಹಂತದ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಮೇ 26 ರಿಂದ ಜೂನ್ 2ರವರೆಗೆ ನಡೆಸಲಾಗುತ್ತಿದ್ದು, ಪರೀಕ್ಷೆಗೆ ಶುಲ್ಕ ರಹಿತವಾಗಿ ನೋಂದಾಯಿಸಿಕೊಳ್ಳಲು ಇಂದೆ (ಮೇ 10) ಅಂತಿಮ ದಿನವಾಗಿದ್ದು, ಅನುತ್ತೀರ್ಣರಾದ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಳ್ಳಬೇಕು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಅಗತ್ಯ ಕ್ರಮ ವಹಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09-ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನಗರದ ರಿಮ್ಸ್ ಆಸ್ಪತ್ರಯಲ್ಲಿ ಮಾನಸಿಕ ಅನಾರೋಗ್ಯದಿಂದ ಬಳಲುತ್ತಿರುವ ನಿರಾಶ್ರಿತರಿಗೆ ಆರೋಗ್ಯ ಸೇವೆಗಳನ್ನು ಒದಗಿಸಲು ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರ ಸ್ಥಾಪಿಸಲು ಸರ್ಕಾರೇತರ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಇಸಿಆರ್‌ಸಿ ಘಟಕವನ್ನು ನಡೆಸಲು ಆಸಕ್ತಿಯುಳ್ಳ ಎನ್.ಜಿ.ಒ ಸಂಸ್ಥೆಗಳು ವೆಬ್‌ಸೈಟ್ ವಿಳಾಸ: https://kppp.karntaka.gov.inನಲ್ಲಿ ಮೇ.23ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ ಜಿಲ್ಲಾ ಕುಷ್ಠರೋಗ ನಿವಾರಣ ವಿಭಾಗಕ್ಕೆ ಭೇಟಿ ನೀಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಸ್ಕಾಂ: ಮೇ.11ರಂದು ನಗರದ

## ವಿವಿಧಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09 ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ 11 ಕೆ.ವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.11ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ03ಗಂಟೆಯವರೆಗೆ ವಿದ್ಯುತ್ತ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ಅಗ್ರಿಕಲ್ಚರ್ ಯೂನಿವರ್ಸಿಟಿ, ಅಸ್ಕಾಹಾಳ, ಕೃಷ್ಣ ಮೇಡೌಸ್, ಬೈಪಾಸ್ ರೋಡ್, ಅಮರಾವತಿ ಕಾಲೋನಿ, ಹೊಸ ಡಿ.ಸಿ ಆಫೀಸ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386 ಅಥವಾ 08532-231999ಗೆ ದೂರವಾಣಿಗಳಿಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-02

## ನೋಂದಣಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09 ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-01ರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಪರೀಕ್ಷೆ-02ಕ್ಕೆ ನೋಂದಣಿಗೆ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ-02ಕ್ಕೆ ಜಿಲ್ಲೆಯ 14,417 ವಿದ್ಯಾರ್ಥಿಗಳು ನೋಂದಾಯಿಸಿಕೊಳ್ಳಬೇಕು. ಈ ಪೈಕಿ 12,607 ವಿದ್ಯಾರ್ಥಿಗಳು ಈಗಾಗಲೇ ನೋಂದಣಿಯಾಗಿದ್ದು, 1,810 ವಿದ್ಯಾರ್ಥಿಗಳು ನೋಂದಣೆಯಾಗಬೇಕಾಗಿದೆ. ಈ ಪರೀಕ್ಷೆಗೆ ನೋಂದಣಿಯಾಗಲು ವಿದ್ಯಾರ್ಥಿಗಳಿಗೆ ಪ್ರಪ್ರಥಮ ಬಾರಿಗೆ ಶುಲ್ಕ ವಿನಾಯಿತಿ ನೀಡಲಾಗಿದ್ದು, ವಿದ್ಯಾರ್ಥಿಗಳು ಮೇ.10ರೊಳಗಾಗಿ ನೋಂದಣಿ ಆಗಬಹುದಾಗಿದೆ. ಮೇ.26 ರಿಂದ ಜೂನ್ 06ರವರೆಗೆ ಪರೀಕ್ಷೆ-02 ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ಪ್ರೌಢಶಾಲೆಯ ಮುಖ್ಯಸ್ಥರನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೆಲಮೂಲ ಸಂಸ್ಕೃತಿ ಮೂಲ ಜನಪದ ಉಳಿಸಿ-ಬೆಳೆಸೋಣ: ಶರಣಪ್ಪ ವಡಿಗೇರಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಮ್ಮ ನಾಡಿನ ನೆಲದ ಮೂಲ ಸಂಸ್ಕೃತಿ, ಮೂಲ ಜನಪದವನ್ನು ಉಳಿಸಿ-ಬೆಳೆಸೋಣ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶ್ರೀ ಶರಣಪ್ಪ ವಡಿಗೇರಿ ಮಾತನಾಡಿದರು.

ಅವರು ತಳುವಗೇರಾ ಗ್ರಾಮದಲ್ಲಿ ಬುಧವಾರ ಶ್ರೀ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಜನಜಾಗೃತಿ ಕಲಾ ರಂಗ ಸಂಸ್ಥೆ (ರಿ) ಕುಷ್ಟಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ 2023-24ನೇ ಸಾಲಿನ ಸಂಘ-ಸಂಸ್ಥೆಗಳ ಧನಸಹಾಯ ಯೋಜನೆ ಅಡಿಯಲ್ಲಿ ನಡೆದ ಮೂಲ ಜನಪದ ಸಂಭ್ರಮ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜನರ ಮಾತಿನೊಂದಿಗೆ ಬೆಳೆದು ಉಳಿದು ಬಂದಿರುವ ಮೂಲ ಜನಪದ ಸಾಹಿತ್ಯವು ನಮ್ಮ ಸಂಸ್ಕೃತಿ ಪರಂಪರೆಯನ್ನು ಬಿಂಬಿಸುವ ನಮ್ಮ ಬದುಕಿನ ಕನ್ನಡಿಯಾಗಿದೆ ಹಾಗೂ ನಮ್ಮ ನೆಲಮೂಲ ಸಂಸ್ಕೃತಿಯಾಗಿದೆ. ಪ್ರಸ್ತುತ ದಿನಮಾನದಲ್ಲಿ ಜನಪದ ಗೀತೆಗಳ ಹೆಸರಲ್ಲಿ ದ್ವಂದ್ವಾರ್ಥದ, ಯುವ ಜನತೆಯ ದಾರಿ ತಪ್ಪಿಸುವ ಹಾಡುಗಳು ಬರುತ್ತಿವೆ. ಅವೆಲ್ಲಾ ಜನಪ್ರಿಯ ಗೀತೆ, ಟ್ಯಾಂಕ್ಟರ್ ಪದಗಳೇ ಆಗಿವೆ ಹೊರತು ಮೂಲ ಜನಪದಗೀತೆಗಳು ಅಲ್ಲಾ. ನಮ್ಮ ಸಂಸ್ಕೃತಿ, ಜನಪದ ಕಲೆಗಳನ್ನು ಉಳಿಸಲು ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದ್ದು, ಯುವ ಪೀಳಿಗೆಗೆ ಸರಕಾರವು ಸಂಘ-ಸಂಸ್ಥೆಗಳ ಧನಸಹಾಯ ಯೋಜನೆಗಳ ಮೂಲಕ ಇಂತಹ ಮಹತ್ವಪೂರ್ಣ ಕಾರ್ಯಕ್ರಮನ್ನು ಏರ್ಪಡಿಸಿ ಪ್ರೋತ್ಸಾಹ ನೀಡುತ್ತಿದೆ ಎಂದರು.

ಗ್ರಾಮ ಪಂಚಾಯತಿ ಸದಸ್ಯರಾದ ಶರಣಗೌಡ ಮಾಲಿಪಾಟೀಲ ಅವರು ತಮಟೆ ಬಾರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ.ಸದಸ್ಯರಾದ ಅಮೀರ್ ರಂಜಾನ್ ಮುಲ್ಲಾ, ದೇವಸ್ಥಾನ ಸಮಿತಿ ಅಧ್ಯಕ್ಷರಾದ ಬಸವರಾಜ ಮೇಳಿ ಹಾಗೂ ಮತ್ತಿತರರಿದ್ದರು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಿಂಗಪ್ಪ ಸೊಲ್ಲಾಪೂರ ತಂಡದವರಿಂದ ಗೀಗೀ ಪದಗಳು, ದುರಗಪ್ಪ ಅಡವಿಭಾವಿ ಅವರಿಂದ ರಂಗಗೀತೆಗಳು, ಶರಣಪ್ಪ ಬನ್ನಿಗೋಳ ಅವರಿಂದ ಸುಗ್ಗಿಯ ಪದಗಳು, ಗುರಪ್ಪ ಉಪನಾಳ ತಂಡದವರಿಂದ ಭಜನಾಪದ ಮತ್ತು ದೇವೇಂದ್ರಪ್ಪ ಕಮ್ಮಾರ ಅವರಿಂದ ತತ್ವಪದಗಳ ಕಾರ್ಯಕ್ರಮ ಜನಮನ ರಂಜಿಸಿದವು. ಕೊನೆಯಲ್ಲಿ ಶ್ರೀಧರ ಪತ್ತಾರ ತಬಲಾಜಿ ಅವರು ವಂದಿಸಿದರು.

## ಅನುಮಾನಾಸ್ಪದ ಸಾವನ್ನು ಸೂಕ್ತ ತನಿಖೆ ಮಾಡಿ,

# ಮೃತರ ಕುಟುಂಬಕ್ಕೆ ನ್ಯಾಯ ದಗಿಸಿಕೊಡಬೇಕು ಸರ್ಕಾರಿ ನೌಕರರ ಸಂಘ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು ಮೇ 10:- ಮಸ್ಕಿ ತಾಲೂಕಿನ ಮೆದಿಕಿನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಪ್ರಯೋಗ ಶಾಲಾ ತಂತ್ರಜ್ಞ, ಮಂಜುನಾಥ ಇವರ ಅನುಮಾನಾಸ್ಪದ ಸಾವನ್ನು ಸೂಕ್ತ ತನಿಖೆ ಮಾಡಿ, ಮೃತರ ಕುಟುಂಬಕ್ಕೆ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಲಿಂಗಸೂಗೂರು ವತಿಯಿಂದ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು. ಮೇ 03 ಶನಿವಾರದಂದು ಮಸ್ಕಿ ತಾಲೂಕಿನ ಮೆದಿಕಿನಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಪ್ರಯೋಗ ಶಾಲಾ ತಂತ್ರಜ್ಞ,ಮಂಜುನಾಥ ರವರು ಕಾಣೆಯಾಗಿದ್ದರು. ಸೋಮವಾರ ಮಧ್ಯಾಹ್ನ ಅವರ ಮೃತದೇಹವು ಠಾಕೂರ ಲೇಔಟ್, ಮಸ್ಕಿಯಲ್ಲಿ ಅನುಮಾನಾಸ್ಪದವಾದ ರೀತಿಯಲ್ಲಿ ದೊರೆತಿದ್ದು, ಅವರ ಸಾವಿನ ತನಿಖೆಯನ್ನು ಸೂಕ್ತ ರೀತಿಯಲ್ಲಿ ನಡೆಸಿ, ಮೃತರ ಕುಟುಂಬಕ್ಕೆ ನ್ಯಾಯ ಒದಗಿಸಬೇಕು. ಇಂತಹ ಪ್ರಕರಣಗಳಿಂದ ನೌಕರರು ಭಯದ ವಾತಾವರಣದಲ್ಲಿ ಕೆಲಸ ನಿರ್ವಹಿಸುವಂತಾಗಿದೆ. ಕಾರಣ ಪ್ರಕರಣದ ತನಿಖೆಯನ್ನು ನ್ಯಾಯ ಸಮ್ಮತ ರೀತಿಯಲ್ಲಿ ನಡೆಸಲು ಸಂಬಂಧಿಸಿದವರಿಗೆ ನಿರ್ದೇಶನ ನೀಡಬೇಕು ಆರೋಗ್ಯ ಇಲಾಖೆಯಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಸಿಬ್ಬಂದಿಗಳು ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ಕೆಲವೊಂದು ಸಲ ಮಹಿಳಾ ಸಿಬ್ಬಂದಿಗಳ ಮೇಲೆ ಹಲ್ಲೆಗಳು, ಅವಾಚ್ಯ ಶಬ್ದಗಳಿಂದ ನಿಂದನೆ, ವೈದ್ಯರ ಮೇಲೆ ನಿಂದನೆಯಂತೆ ಪ್ರಕರಣಗಳು ಜರುಗಿದ ಉದಾಹರಣೆಗಳಿದ್ದು, ರಾತ್ರಿ ಪಾಳೆಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರಿಗೆ ಹಾಗೂ ಮಹಿಳಾ ಸಿಬ್ಬಂದಿಗಳಿಗೆ ರಕ್ಷಣೆಯಿಲ್ಲದಂತಾಗಿದೆ. ಕಾರಣ ಲಿಂಗಸುಗೂರು, ಆಸ್ಪತ್ರೆಯ ಮಹಿಳಾ ಸಿಬ್ಬಂದಿಗಳ ಹಾಗೂ ವೈದ್ಯರುಗಳ ಸೇವೆಯ ಹಿತದೃಷ್ಟಿಯಿಂದ ರಾತ್ರಿ ಪಾಳೆಯ ಭದ್ರತೆಗಾಗಿ ಪೋಲಿಸ್ ಸಿಬ್ಬಂದಿಯನ್ನು ನೇಮಕ ಮಾಡಬೇಕು ಹಾಗೂ ಉನ್ನತೀಕರಿಸಿದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಪೋಲಿಸ್ ಗಸ್ತು ಮಾಡುವಂತೆ ಸಂಬಂಧಿಸಿದವರಿಗೆ ನಿರ್ದೇಶನ ನೀಡಬೇಕೆಂದು ಒತ್ತಾಯಿಸಿದ್ದಾರೆ.


ಈ ಸಂದರ್ಭದಲ್ಲಿ ಅಧ್ಯಕ್ಷ ಹಾಜಿಬಾಬು ಕಲ್ಯಾಣಿ, ರಾಮಕೃಷ್ಣ, ತಾವರೆಪ್ಪ, ಈರಪ್ಪ ಶಿರಸಂಗಿ, ಡಾ. ರುದ್ರಗೌಡ, ಪ್ರಾಣೇಶ್ ಜೋಶಿ, ಅಮರಣ್ಣ ಸಾಲಿ, ಇದ್ದರು.

# ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 09- ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ಪ್ರವೇಶಕ್ಕೆ ಆನ್‌ಲೈನ್ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳ, ಇಂಟಗ್ರೇಟೆಡ್ (ಉನ್ನತ್ತೀಕರಣಗೊಂಡ)/ ಪದವಿಪೂರ್ವ ಕಾಲೇಜುಗಳು, ಡಾ.ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ, ಪದವಿಪೂರ್ವ ಕಾಲೇಜುಗಳು ಹಾಗೂ ಉನ್ನತ್ತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲಿ ಪ್ರಥಮ ಪಿಯುಸಿ ತರಗತಿಗೆ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮತ್ತು ವಿಶೇಷಚೇತನ ವಿದ್ಯಾರ್ಥಿಗಳಿಗೆ ಪ್ರವೇಶಾತಿಯಲ್ಲಿ ಶೇ.4 ರಷ್ಟು ಸ್ಥಾನಗಳನ್ನು ಮೀಸಲಿಡಲಾಗಿದ್ದು, ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ್ರ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆ ತೇರ್ಗಡೆಯಾದ ವಿದ್ಯಾರ್ಥಿಗಳು ಸೇವಾಸಿಂಧು: Website:https://sevasindhuservices.karnataka.gov.inನ ಮೂಲಕ ಮೇ.17ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990, 08022535902, ರಾಯಚೂರು 9986311262, 9886891883, 9611811169, 8660476921, ಮಾನವಿ; 8971757620, ಸಿರವಾರ: 7975922835, ದೇವದುರ್ಗ: 8310846415, 9945121187, ಅರಕೇರಾ; 8073274117 ಲಿಂಗಸೂಗೂರು: 8880939711, ಸಿಂಧನೂರು: 9741050010, 9980432449ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಇಲಾಖೆಯಿಂದ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೃಷಿ ಇಲಾಖೆಯಿಂದ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳಲಾಗಿದೆ ಕೊಪ್ಪಳ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಅವರು ತಿಳಿಸಿದ್ದಾರೆ.

ಈ ವರ್ಷದ ಮುಂಗಾರು ಹಂಗಾಮಿಗಾಗಿ ಕೃಷಿ ಇಲಾಖೆಯು ಪೂರ್ವಸಿದ್ಧತೆ ಕೈಗೊಂಡಿದ್ದು, ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯ ನಿಟ್ಟಿನಲ್ಲಿ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಗುಣನಿಯಂತ್ರಣ ಸಪ್ತಾಹವನ್ನು ಮೇ 5 ರಿಂದ ಮೇ 9ರ ವರೆಗೆ ಆಚರಿಸಲಾಗುತ್ತಿದೆ. ಈ ಸಪ್ತಾಹದ ಅಂಗವಾಗಿ ಉಪ ಕೃಷಿ ನಿರ್ದೇಶಕರು-1 ಅವರ ನೇತೃತ್ವದಲ್ಲಿ ತಂಡಗಳನ್ನು ರಚಿಸಿ, ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ತಪಾಸಣೆ ನಡೆಸುತ್ತಿದ್ದಾರೆ.

ಈ ವರೆಗೆ 159 ಮಳಿಗೆಗಳಿಗೆ ಭೇಟಿ ನೀಡಲಾಗಿದ್ದು, 79 ಬೀಜ ಮಾದರಿಗಳು, 123 ರಸಗೊಬ್ಬರ ಮಾದರಿಗಳು ಮತ್ತು 67 ಕೀಟನಾಶಕ ಮಾದರಿಗಳನ್ನು ತೆಗೆದು ಗುಣಮಟ್ಟ ಪರಿಶೀಲನೆಗಾಗಿ ಪ್ರಯೋಗಾಲಯಗಳಿಗೆ ಕಳುಹಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಕಲಬುರಗಿ ವಿಮಾನ ಪ್ರಯಾಣಿಕರಲ್ಲಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ. 9: ಕಲಬುರಗಿ ವಿಮಾನ ನಿಲ್ದಾಣದಲ್ಲಿ ಎಲ್ಲಾ ಆಗಮನ ಮತ್ತು ನಿರ್ಗಮನ ಕಾರ್ಯಾಚರಣೆಗಳು ಎಂದಿನಂತೆ ಮುಂದುವರೆದಿವೆ; ಆದಾಗ್ಯೂ, ನಡೆಯುತ್ತಿರುವ ಪರಿಸ್ಥಿತಿಯಿಂದಾಗಿ, ಭದ್ರತಾ ತಪಾಸಣೆಗಳು ಸಾಮಾನ್ಯಕ್ಕಿಂತ ಹೆಚ್ಚು ಸಮಯ ತೆಗೆದುಕೊಳ್ಳಬಹುದು ಹಾಗಾಗಿ ನಿಗಧಿತ ಸಮಯಕ್ಕೆ ಪ್ರಯಾಣಿಕರು ಆಗಮಿಸಲು ಹಾಗೂ ಸಹಕರಿಸಲು ಕಲಬುರಗಿ ವಿಮಾನ ನಿಲ್ದಾಣ ನಿರ್ದೇಶಕರಾದ ಮಹೇಶ್ ಅವರು ಮನವಿ ಮಾಡಿಕೊಂಡಿದ್ದಾರೆ.



ಪ್ರಯಾಣಿಕರ ಸುಗಮ ಪ್ರಯಾಣವನ್ನು ಖಚಿತಪಡಿಸಿಕೊಳ್ಳಲು ಮತ್ತು ಕೊನೆಯ ಕ್ಷಣದ ಅನಾನುಕೂಲತೆಯನ್ನು ತಪ್ಪಿಸಲು ಪ್ರಯಾಣಿಕರು ನಿರ್ಗಮನಕ್ಕೆ ಕನಿಷ್ಠ ಎರಡು ಗಂಟೆಗಳ ಮೊದಲು ವಿಮಾನ ನಿಲ್ದಾಣವನ್ನು ತಲುಪಲು ಮನವಿ ಮಾಡಿಕೊಂಡಿದ್ದಾರೆ.

ಇದಲ್ಲದೆ, ಈ ಸಂದರ್ಭದಲ್ಲಿ ಭದ್ರತೆಯ ದೃಷ್ಟಿಯಿಂದ ಯಾವುದೇ ಸಂದರ್ಶಕರ ಪಾಸ್‌ಗಳನ್ನು ನೀಡಲಾಗುವುದಿಲ್ಲ ಮತ್ತು ವಿಮಾನ ನಿಲ್ದಾಣದಲ್ಲಿ ಸ್ವೀಕರಿಸಲು/ಬಿಡಲು ಅತಿಥಿಗಳ ಸಂಖ್ಯೆಯನ್ನು ಕಡಿಮೆ ಮಾಡಲು ಪ್ರಯಾಣಿಕರನ್ನು ವಿನಂತಿಸಲಾಗಿದೆ.

ಈ ಸಂದರ್ಭದಲ್ಲಿ ಪ್ರಯಾಣಿಕರ ಸಹಕಾರ ಮತ್ತು ತಿಳುವಳಿಕೆಯನ್ನು ನಾವು ಪ್ರಶಂಸಿಸುತ್ತೇವೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾರಂಪರಿಕ ವೈದ್ಯ ಪದ್ಧತಿ ಉಳಿವಿಗೆ ಕೈಜೋಡಿಸಿ : ಪಂಚಾಳ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ವೈಜ್ಞಾನಿಕವಾಗಿ ದೊಡ್ಡಮಟ್ಟದಲ್ಲಿ ಬೆಳೆಯುತ್ತಿರುವ ಇಂದಿನ ನಾಗರಿಕ ಜಗತ್ತಿನಲ್ಲಿ ಭಾರತೀಯ ಪಾರಂಪರಿಕ ವೈದ್ಯ ಪದ್ಧತಿಯ ಉಳಿವಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಡಾ. ವಿದ್ಯಾಸಾಗರ ಪಂಚಾಳ ಹೇಳಿದರು.

ತಾಲೂಕಿನ ಮಾಣಿಕ ನಗರ ಗ್ರಾಮದ ಐತಿಹಾಸಿಕ ಮಾಣಿಕಪ್ರಭು ಸಂಸ್ಥಾನದ ಮಾಣಿಕ ವಿದ್ಯಾಲಯದ ಆವರಣದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಮನಾಬಾದ್ ವತಿಯಿಂದ ಶುಕ್ರವಾರ ನಡೆದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಹಾಗೂ ಭಾರತೀಯ ಪಾರಂಪರಿಕ ವೈದ್ಯ ಪದ್ಧತಿಯ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.




ಆಧುನಿಕ ವೈದ್ಯ ಪದ್ಧತಿಯಿಂದ ನಶಿಸುತ್ತಿರುವ ಪಾರಂಪರಿಕ ವೈದ್ಯ ಪದ್ಧತಿಯ ಬಗ್ಗೆ ಹೆಚ್ಚು ತಿಳಿವಳಿಕೆ ನೀಡುವಂತಾಗಬೇಕು. ಪಾರಂಪರಿಕ ವೈದ್ಯ ಪದ್ಧತಿ ಅನಾದಿ ಕಾಲದಿಂದಲೂ ಬೆಳೆದು ಬಂದಿದ್ದು, ಇಂದಿಗೂ ಖ್ಯಾತಿ ಪಡೆದಿದೆ ಇದನ್ನು ಉಳಿಸಿ ಬೆಳಸಬೇಕು. ಇದರ ಕುರಿತು ವಿದ್ಯಾರ್ಥಿಗಳು ಜಾಗೃತಿ ಮೂಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಗ್ರಾಮೀಣ ಭಾಗದಲ್ಲಿ ಜನರಿಗೆ ಸಣ್ಣ ಪುಟ್ಟ ಜ್ವರ, ಕೆಮ್ಮು, ನೆಗಡಿ ಬಂದಾಗ ನೇರವಾಗಿ ಔಷಧಿ ಕೇಂದ್ರಕ್ಕೆ ತೆರಳಿ ಮಾತ್ರೆಗಳನ್ನು ಕೊಂಡುಕೊಳ್ಳದೇ ವೈದ್ಯರನ್ನು ಸಂಪರ್ಕಿಸಿ ಅವರು ನೀಡಿರುವ ಮಾತ್ರೆಗಳನ್ನು ತೆಗೆದು–ಕೊಂಡು ವಾಸಿ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ನಿವೃತ್ತ ಸೈನಿಕ ಅಮೂಲ ಕುಲಕರ್ಣಿ ಮಾತನಾಡಿ, ದೇಶದ ರಕ್ಷಣೆಯಲ್ಲಿ ಸೈನಿಕರ ಪಾತ್ರ ಮಹತ್ವವಾಗಿದ್ದು, ಸೈನಿಕರು ದೇಶದ ರಕ್ಷಣೆಗಾಗಿ ಹಗಲಿರುಳು ತಮ್ಮ ಪ್ರಾಣ ಒತ್ತೆಯಿಟ್ಟು ಶ್ರಮಿಸುತ್ತಿದ್ದಾರೆ. ಹೀಗಾಗಿ ಪ್ರತಿಯೊಬ್ಬರು ಸೈನಿಕರಿಗೆ ಗೌರವ ಮನೋಭಾವದಿಂದ ಕಾಣಬೇಕು ಎಂದು ತಿಳಿಸಿದರು. ರಾಷ್ಟ್ರನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಹಾಗೂ ದೇಶದ ಗಡಿ ರಕ್ಷಣೆ ಮಾಡುತ್ತಿರುವ ಸೈನಿಕರ ಸಾಧನೆ ಅರಿತು ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆದು–ಕೊಂಡು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು. ಈ ಸಂದರ್ಭದಲ್ಲಿ ಡಾ. ಅರುಣಕುಮಾರ ಚಂದನ್, ಡಾ. ಶ್ರೀದೇವಿ, ವಿಶಾಲ ಸ್ವಾಮಿ, ತರನ್ನುಮ್, ಎನ್.ಎಸ್.ಎಸ್. ಅಧಿಕಾರಿ ಡಾ. ಶಾಂತಕುಮಾರ ಬನಗುಂಡಿ, ಶಿವಾಜಿ ರಾಠೋಡ ಇದ್ದರು. ಶಾಮ ಸ್ವಾಗತಿಸಿದರು. ಸ್ವಾತಿ ನಿರೂಪಿಸಿದರು. ಸುಕೇಶ ವಂದಿಸಿದರು.

# ಐಪಿಎಲ್ ಟೂರ್ನಿ ಅನಿರ್ದಿಷ್ಟಾವಧಿಗೆ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಮೇ.9: ಭಾರತ ಮತ್ತು ಪಾಕಿಸ್ತಾನ ನಡುವೆ ಪ್ರತೀಕಾರ ಸಮರ ಜೋರಾಗುತ್ತಿದ್ದಂತೆ 18ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯನ್ನು ಬಿಸಿಸಿಐ ಅನಿರ್ದಿಷ್ಟಾವಧಿಗೆ ಮುಂದೂಡಿದೆ.

ಇಂದು ನಡೆದ ಮಹತ್ವದ ಸಭೆಯಲ್ಲಿ ಭಾರತೀಯ ಕ್ರಿ–ಕೆಟ್ ನಿಯಂತ್ರಣ ಮಂಡಳಿ ಈ ನಿರ್ಧಾರ ಕೈಗೊಂಡಿದೆ. ಅದರಂತೆ ಇಂದಿನಿಂದ ನಡೆಯುವ ಎಲ್ಲಾ ಪಂದ್ಯಗಳನ್ನು ಅನಿರ್ದಿಷ್ಟಾವಧಿವರೆಗೆ ಮುಂದೂಡಿದೆ. ಸದ್ಯ ಪ್ಲೇ ಆಫ್ಸ್ ಸೇರಿ 16 ಪಂದ್ಯಗಳು ಬಾಕಿ ಉಳಿದಿವೆ. ಸದ್ಯ ಬಿಸಿಸಿಐ ಆಟಗಾರರು ಮತ್ತು ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿದೆ. ಆಟಗಾರರನ್ನು ಸದ್ಯಕ್ಕೆ ಮನೆಗಳಿಗೆ ಸುರಕ್ಷಿತವಾಗಿ ಕಳುಹಿಸುವ ವ್ಯವಸ್ಥೆಗಳ ಬಗ್ಗೆ ಗಮನಹರಿಸಲಿದೆ. ಉದ್ವಿಗ್ನತೆ ಶಮನವಾದ ಬಳಿಕ ಹೊಸ ದಿನಾಂಕಗಳನ್ನು ಪ್ರಕಟಿಸಲಿದೆ ಎಂದು ಬಿಸಿಸಿಐ ಉನ್ನತ ಮೂಲಗಳು ತಿಳಿಸಿವೆ.

ಪ್ರಸ್ತುತ 18ನೇ ಆವೃತ್ತಿಯ ಐಪಿಎಲ್ ಗುರುವಾರದ ಸ್ಥಗಿತಗೊಂಡ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಪಂದ್ಯ ಸೇರಿ 58 ಪಂದ್ಯಗಳು ನಡೆದಿವೆ. ಇನ್ನೂ ನಾಲ್ಕು ಪ್ಲೇ ಆಫ್ಸ್ ಪಂದ್ಯಗಳೂ ಸೇರಿ 16 ಪಂದ್ಯಗಳು ಬಾಕಿ ಇವೆ.

ಜಮ್ಮು ಮತ್ತು ಪಠಾಣ್‌ಕೋಟ್ ನಗರಗಳಲ್ಲಿ ದಾಳಿಯ ಎಚ್ಚರಿಕೆಗಳು ಬಂದಿದ್ದರಿಂದ ಗುರುವಾರ ಧರ್ಮಶಾಲಾದಲ್ಲಿ ನಡೆಯಬೇಕಿದ್ದ ಪಂದ್ಯವನ್ನು ರದ್ದುಗೊಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿತ್ತು.

ಅಲ್ಲದೇ ಪಾಕ್‌ನಲ್ಲಿ ನಡೆಯುತ್ತಿದ್ದ ಪಾಕಿಸ್ತಾನ್ ಸೂಪರ್ ಲೀಗ್‌ನ ಉಳಿದ ಎಲ್ಲಾ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸಲು ಪಿಸಿಬಿ ನಿರ್ಧಾರ ಕೈಗೊಂಡಿದೆ.

# ಮಹಿಳಾ ಕುಲದ ಸ್ಫೂರ್ತಿದಾತೆ ಹೇಮರಡ್ಡಿ ಮಲ್ಲಮ್ಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ.9–ಭಾರತೀಯ ಆಧ್ಯಾತ್ಮಿಕ ಕ್ಷೇತ್ರವನ್ನು ಶ್ರೀಮಂತಗೊಳಿಸಿ ಸಮಾಜಕ್ಕೆ ಆದರ್ಶಪ್ರಾಯರಾಗಿರುವ ಹಲವಾರು ಶಿವಶರಣೆಯರಲ್ಲಿ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಸಹ ಒಬ್ಬಳು. ಶ್ರೀಶೈಲ ಮಲ್ಲಿಕಾರ್ಜುನನ ಪರಮ ಭಕ್ತೆಯಾಗಿ, ತಾಳ್ಮೆ, ತ್ಯಾಗದ ಗುಣಗಳಿಂದ ನಾರಿ ಕುಲಕ್ಕೆ ಮಾರ್ಗದರ್ಶಿಯಾಗಿರುವ ಹೇಮರಡ್ಡಿ ಮಲ್ಲಮ್ಮ ಆದರ್ಶ ಸೊಸೆಯಾಗಿ ಬದುಕಿ ಬಾಳಿ ಇಡೀ ಮಹಿಳಾ ಕುಲದ ಹೃದಯದಲ್ಲಿ ಶಾಶ್ವತವಾಗಿ ನೆಲೆಸಿದ್ದಾಳೆ.

ಆಂಧ್ರಪ್ರದೇಶದ ಶ್ರೀಶೈಲದ ದಕ್ಷಿಣಕ್ಕೆ ಇರುವ ವೆಲ್ಲೂರು ಜಿಲ್ಲೆಗೆ ಸೇರಿದ ರಾಮಪೂರದ ನಾಗರಡ್ಡಿ ಹಾಗೂ ಗೌರಮ್ಮ ದಂಪತಿಯ ಸುಪುತ್ರಿ ಮಲ್ಲಮ್ಮ. ಕುಟುಂಬವೇ ಶ್ರೀ ಶೈಲ ಮಲ್ಲಿಕಾರ್ಜುನನ ಪರಮ ಭಕ್ತರಾಗಿದ್ದುದರಿಂದ ಸಹಜವಾಗಿ ಮಲ್ಲಮ್ಮಳಿಗೆ ಬಾಲ್ಯದಲ್ಲಿಯೇ ಆಧ್ಯಾತ್ಮದಲ್ಲಿ ಆಸಕ್ತಿ ಬೆಳೆಯಿತು. ಹೇಮರಡ್ಡಿ ಹಾಗೂ ಪದ್ಮಾವತಿ ಅವರ ಪುತ್ರ ಭರಮರಡ್ಡಿಗೆ ಮಲ್ಲಮ್ಮನನ್ನು ಮದುವೆ ಮಾಡಿಕೊಡಲಾಯಿತು.




"ಅತ್ತೆ, ಮಾವ, ಗಂಡನ ಸೇವೆಯಲ್ಲಿಯೇ ದೇವರನ್ನು ಕಾಣು" ಎಂದು ಮಲ್ಲಮ್ಮನಿಗೆ ಗಂಡನ ಮನೆಗೆ ಹೋಗುವಾಗ ತಂದೆ–ತಾಯಿ ಹೇಳಿದ ನೀತಿ ಪಾಠವನ್ನು ಮಲ್ಲಮ್ಮ ತನ್ನ ಬದುಕಿನಲ್ಲಿ ಎಂತಹ ಕಷ್ಟಗಳು ಬಂದರೂ ಪಾಲಿಸಿಕೊಂಡು ಬಂದು ಆದರ್ಶಪ್ರಾಯಳಾಗಿ ಮೆರೆದಳು.

ಒಂದೆಡೆ ಹುಚ್ಚು ಗಂಡ, ಇನ್ನೊಂದೆಡೆ ಅತ್ತೆ, ನಾದಿನಿಯರ ಕಾಟ ಇದೆಲ್ಲವನ್ನು ಸಹಿಸಿಕೊಂಡು ಯಾವುದೇ ಸಂದರ್ಭದಲ್ಲಿಯೂ ಸಹನೆ ಕಳೆದುಕೊಳ್ಳದೇ ಗಂಡನ ಮನೆಯ ಶ್ರೇಯಸ್ಸನ್ನು ಬಯಸಿದ ಹೇಮರಡ್ಡಿ ಮಲ್ಲಮ್ಮ, ಕಾಯಕದಲ್ಲಿ ನಿಷ್ಠೆ, ಭಕ್ತಿಯಲ್ಲಿ ಅನನ್ಯತೆಯನ್ನು ಮೆರೆದವರು.

ಬೆಟ್ಟದಷ್ಟು ಕಷ್ಟಗಳು ಎದುರಾದರೂ ಸಹಿಸಿಕೊಂಡು ತನ್ನ ಸನ್ನಡತೆಯಿಂದ ಆದರ್ಶ ಸೊಸೆಯಾಗಿ, ಅಧ್ಯಾತ್ಮಿಕವಾಗಿ ಸಾಧನೆಮಾಡಿ ದೇವತೆಯ ಸ್ಥಾನ ಪಡೆದು ಹೆತ್ತವರ ಆಸೆಗೆ ಕುಂದುತರದೇ ನಡೆದುಕೊಂಡ ಮಲ್ಲಮ್ಮ, ಭಾರತೀಯ ಆಧ್ಯಾತ್ಮಿಕ ಇತಿಹಾಸದಲ್ಲಿ ನೆಲೆಯೂರಿರುವ ಶಿವಶರಣೆಯರಾದ ಅಕ್ಕಮಹಾದೇವಿ, ಸಂಚಿ ಹೊನ್ನಮ್ಮ ನೆಲ್ಲೂರ ನಿಂಬೆಕ್ಕ, ಸಜ್ಜಲಗುಡ್ಡದ ಶರಣಮ್ಮ ಮತ್ತಿತರರ ಸಾಲಿಗೆ ಸೇರ್ಪಡೆಯಾಗಿದ್ದಾಳೆ. 'ವಿನಮ್ರತೆಯುಳ್ಳವರು ಲೋಕದ ವಾರಸುದಾರಿಕೆಯನ್ನು ಪಡೆದುಕೊಳ್ಳುತ್ತಾರೆ' ಎನ್ನುವ ವಾಣಿಯಂತೆ ಹೇಮರಡ್ಡಿ ಮಲ್ಲಮ್ಮ ಸಹ ಜನರ ಮನಸ್ಸಿನಲ್ಲಿ ಉಳಿದಿದ್ದಾಳೆ. ತನ್ನ ಆದರ್ಶ ಜೀವನ, ತಾಳ್ಮೆ ಹಾಗೂ ಸಹನಾಗುಣಗಳಿಂದ ಆಕೆ ಮಹಾಶಿವಶರಣೆಯಾಗಿ, ಮಹಾಮಾತೆಯಾಗಿ ಬೆಳಗಿದ್ದಾಳೆ. 14 ನೇ ಶತಮಾನದಲ್ಲಿ ಬದುಕಿ, ಬಾಳಿರುವ ಮಲ್ಲಮ್ಮ, ಅಸ್ಥಿರವಾದ ಸಂಸಾರದ ಜೀವನದಲ್ಲಿದ್ದು ಅದರ ನೋವು–ನಲಿವುಗಳನ್ನು ಅನುಭವಿಸುತ್ತ ಪರಮ ಸತ್ಯವನ್ನು ಕಂಡಕೊಂಡಳು. ಇರುವುದನ್ನು ತೊರೆದು ಇಲ್ಲದ್ದನ್ನು ಅರಸುವ, ಅದನ್ನೇ ಮುಕ್ತಿ ಮಾರ್ಗವೆಂದು ನಂಬಿರುವ ಪರಂಪರೆಗೆ ವ್ಯತಿರಿಕ್ತವಾಗಿ ಇರುವ ಸಂಸಾರದಲ್ಲಿಯೇ ಅರಿವಿನ ಸ್ವರೂಪದ ಶಿವನನ್ನು ಸಾಕ್ಷಾತ್ಕರಿಸಿಕೊಂಡವಳು. ಹೇಮರಡ್ಡಿ ಮಲ್ಲಮ್ಮ ಯಾವುದೇ ಸಾಹಿತ್ಯವನ್ನಾಗಲಿ, ಸಂದೇಶಗಳನ್ನಾಗಲಿ ನೀಡಲಿಲ್ಲ. ಜೊತೆಗೆ ಬಾಹ್ಯ ಆಚರಣೆಗಳನ್ನು ಪ್ರೋತ್ಸಾಹಿಸಲಿಲ್ಲ. ನಿತ್ಯ ಜೀವನ ಪರಮಾತ್ಮನ ಅನುಗ್ರಹವೆಂದು ತಿಳಿದು ಅದರಲ್ಲಿಯೇ ತನ್ನನ್ನು ಪರಿಪೂರ್ಣವಾಗಿ ತೊಡಗಿಸಿಕೊಂಡು ಉತ್ಸಾಹದಿಂದ ಬದುಕಿದವಳು. ಪರಮಾತ್ಮನ ದರ್ಶನಕ್ಕೆ ತನ್ನ ಸಂಸಾರವನ್ನೇ ಪ್ರಯೋಗ ಶಾಲೆಯನ್ನಾಗಿ ಮಾಡಿ ಅದರಲ್ಲಿ ಯಶಸ್ಸು ಕಂಡವಳು. ಇದರ ಜೊತೆಯಲ್ಲಿಯೇ ಪರಸ್ತ್ರೀಯ ಸಂಗದಲ್ಲಿ ಮುಳುಗಿ ಎಲ್ಲವನ್ನೂ ಮರೆತಿದ್ದ ಮೈದುನ ವೇಮನನ ಮನಸ್ಸನ್ನು ಪರಿವರ್ತಿಸಿ ಆತನನ್ನು ಮಹಾಯೋಗಿಯನ್ನಾಗಿ ಮಾಡಿದ ಕೀರ್ತಿ ಮಲ್ಲಮ್ಮನದು. ವಿನಯತೆ, ಸತ್ಯ, ಪ್ರಾಮಾಣಿಕತನ, ಸೇವಾಗುಣದ ನಡೆ ನುಡಿಯಿಂದ ಆದರ್ಶಳಾಗಿ ಬದುಕಿ ಸದ್ಗತಿಯನ್ನು ಕಂಡ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಇಡೀ ಮಹಿಳಾ ಕುಲಕ್ಕೆ ಆದರ್ಶಪ್ರಾಯಳು.



ಪ್ರಕಾಶ ಬಾಳಕ್ಕನವರ
ಬಾಗಲಕೋಟೆ

# ಖಂಡ್ರೆಯವರ ಹೆಸರಿಗೆ ಮಸಿ ಬಳಿಯುವ ಹುನ್ನಾರ: ರಮೇಶ ಕಟ್ಟಿತುಗಾಂವ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 09 :ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆಯವರ ಹೆಸರಿಗೆ ಮಸಿ ಮಸಿ ಬಳಿಯುವ ಹುನ್ನಾರ ನಡೆಯುತ್ತಿದ್ದು, ಅವರಮೇಲಿನ ಆರೋಪ ನಿರಾಧಾರವಾಗಿದೆ ಎಂದು ಮಾದಾರ ಚನ್ನಯ್ಯ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ರಮೇಶ ಕಟ್ಟಿತುಗಾಂವ ಹೇಳಿದರು. ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈಶ್ವರ ಖಂಡ್ರೆಯವರು ಈ ಭಾಗದ ಒಬ್ಬ ಪ್ರಶ್ನಾತೀತ ನಾಯಕರು. ಲಿಂಗಾಯತ ಸಮಾಜದ ಅಗ್ರಗಣ್ಯ ನಾಯಕರಲ್ಲಿ ಯಡಿಯೂರಪ್ಪ ಅವರ ನಂತರ ಈಶ್ವರ ಖಂಡ್ರೆಯವರನ್ನು ಕಾಣಬಹುದಾಗಿದೆ. ಉತ್ತಮ ಅಭಿವೃದ್ಧಿ ಕೌಶಲ್ಯಯುಳ್ಳ ರಾಜಕಾರಣಿಯೂ ಹೌದು. ಭವಿಷ್ಯದಲ್ಲಿ ಖಂಡ್ರೆಯವರು ಕೆ.ಪಿ.ಸಿ.ಸಿ ಅಧ್ಯಕ್ಷರಾಗುವ ಹಾಗೂ ಮುಖ್ಯಮಂತ್ರಿಯಾಗುವ ಎಲ್ಲ ಲಕ್ಷಣಗಳು ಅವರಲ್ಲಿವೆ. ಇಂಥವರ ಮೇಲೆ ಸುಳ್ಳು ಆರೋಪ ಮಾಡುವುದು ಸರಿಯಿಲ್ಲ ಎಂದರು.

ಇತ್ತಿಚೀಗೆ ಮನೋವಾದಿಗಳು ಹಾಗೂ ಖಂಡ್ರೆಯವರ ಏಳಿಗೆ ಸಹಿಸದ ಕೆಲವರು ಅವರ ಬಗ್ಗೆ ಅಪಪ್ರಚಾರ ಮಾಡುತ್ತಿರುವರು. ಖಂಡ್ರೆಯವರೆ ಸ್ವತಃ ಕೇಸ್ ದಾಖಲಿಸುತ್ತಿದ್ದಾರೆ ಎನ್ನುವಂತೆ ಬಿಂಬಿಸಲಾಗುತ್ತಿದೆ. ತಪ್ಪಿತಸ್ತರು ಯಾರಿದ್ದರೂ ಅವರನ್ನು ಶಿಕ್ಷಿಸುವ ಕೆಲಸ ಪೋಲಿಸರು ಮಾಡಿದ್ದಾರೆ. ಪೋಲಿಸ್ ಇಲಾಖೆಯ ಮೇಲೆ ಗೂಬೆ ಕೂರಿಸುತ್ತಿರುವುದು ತಪ್ಪು. ಇತ್ತಿಚೀಗೆ ಹೊನ್ನಿಕೇರಿ ಅರಣ್ಯ ಪ್ರದೇಶದಲ್ಲಾದ ಹತ್ಯೆ ಹಾಗೂ ಆದರ್ಶ ಕಾಲೋನಿಯಲ್ಲಿನ ಮನೆಯಲ್ಲಾದ ದೊಡ್ಡ ದರೊಡೆ ಭೇದಿಸುವಲ್ಲಿ ಜಿಲ್ಲಾ ಪೋಲಿಸ್ ಇಲಾಖೆ ಯಶಸ್ವಿಯಾಗಿದೆ. ಈ ಹಿಂದೆ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ ಅವರು ಸಚಿವರಾಗಿದ್ದಾಗ ಹುಡಗಿಯಲ್ಲಿ ಅಂಬೇಡ್ಕರ್ ಮೂರ್ತಿಗೆ ಆದ ಅವಮಾನ ಸಂದರ್ಭದಲ್ಲಿ ಆ ಘಟನೆ ವಿರೋಧಿಸಿದ್ದಕ್ಕೆ ನನ್ನನ್ನು ಸೇರಿಸಿ 150ಕ್ಕೂ ಅಧಿಕ ದಲಿತ ಮುಖಂಡರ ಮೇಲೆ ಕೆಸ್ ದಾಖಲಿಸಿದ್ದರು. ಹಾಗಾಗಿ ಎಲ್ಲ ಘಟನೆಗಳಿಗೆ ಖಂಡ್ರೆಯವರನ್ನೇ ಟಾರ್ಗೆಟ್ ಮಾಡುವುದು ಮುರ್ಖತನದ ಪರಮಾವಧಿ

ಇತ್ತಿಚೀಗೆ ಭಾಲ್ಕಿ ತಾಲೂಕಿನ ಖುದಂಪುರ ಗ್ರಾಮದಲ್ಲಿ ದಲಿತರ ಮೇಲಾದ ದೌರ್ಜನ್ಯಕ್ಕೆ ಒಂದೆ ದಿನದಲ್ಲಿ ನ್ಯಾಯ ಕೊಡಿಸಿದರು. ಹಿಂದೆ ದಲಿತರ ಮೇಲಾದ ಅನೇಕ ದೌರ್ಜನ್ಯಗಳ ಬಗ್ಗೆ ಕಳವಳ ವ್ಯಕ್ತಪಡಿಸಿ ಸಮಸ್ಯೆ ಇತ್ಯರ್ಥಪಡಿಸಿದ ಕೀರ್ತಿ ಖಂಡ್ರೆಯವರಿಗೆ ಸಲ್ಲುತ್ತದೆ ಎಂದು ರಮೇಶ ತಿಳಿಸಿದರು. ಡಿ.ಎಸ್.ಎಸ್(ಎನ್.ಮೂರ್ತಿ ಬಣ) ಜಿಲ್ಲಾಧ್ಯಕ್ಷ ಹರಿಹರ ಗೋಖಲೆ, ಡಾ.ಬಾಬು ಜಗಜೀವನರಾಮ ಸೇವಾ ಸಂಘದ ಅಧ್ಯಕ್ಷ ಯುವರಾಜ ಭೆ–ಂಡೆ, ಸಮಾಜದ ಮುಖಂಡರಾದ ಮಹೇಶ ಹಿರೇಮನಿ, ಸಂಜಯ ಲಂಜವಾಡ, ಸಂಜು ಉಜನಿ, ಪಪ್ಪುರಾಜ ನೇಳಗೆ, ಸತೀಶ ಮಾನೆ, ನಾಗರಾಜ, ಮಲ್ಲಿಕಾರ್ಜುನ ಭಾವಿದೊಡ್ಡಿ, ಶಿವಕಾಂತ ಭೋಸಗಾ, ರೋಹಿತ ಕಟ್ಟಿತುಗಾಂವ ಪತ್ರಿಕಾಗೋಷ್ಠಿಯಲ್ಲಿದ್ದರು.

# ಸೌಲಭ್ಯ ಇಲ್ಲದ ಶಾಲೆಗಳಿಗೆ ಅನುಮತಿ : ಇಳಕಲ್ ಡೈಟ್ ಪ್ರಾಚಾರ್ಯರಿಗೆ ಕಡ್ಡಾಯ ನಿವೃತ್ತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ.9 –ಯಾವುದೇ ಸೌಲಭ್ಯಗಳನ್ನು ಹೊಂದಿರದ 41ಶಾಲೆಗಳಿಗೆ ಅನುಮತಿ ನೀಡಿದ್ದ ಜಿಲ್ಲೆಯ ಇಳಕಲ್ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯ ಬಿ.ಕೆ.ನಂದನೂರ ಅವರನ್ನು ಕಡ್ಡಾಯ ನಿವೃತ್ತಿಗೆ ಆದೇಶಿಸಲಾಗಿದೆ. ಧಾರವಾಡ ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತೆ ಜಯಶ್ರೀ ಶಿಂತ್ರೆ ಆದೇಶಮಾಡಿದ್ದು ಬಿ.ಕೆ.ನಂದನೂರ ಅವರನ್ನು ತತಕ್ಷಣದಿಂದ ನಿವೃತ್ತಿಗೊಳಿಸಿದ್ದಾರೆ. ನಂದನೂರ ರಾಯಚೂರು ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾಗಿದ್ದ ಸಮಯದಲ್ಲಿ 14 ತಿರಸ್ಕರಿಸಿದ ಮತ್ತು 27 ಹೊಸದಾಗಿ ಅರ್ಜಿ ಸಲ್ಲಿಸಿದ ಶಾಲೆಗಳಿಗೆ ಅನುಮತಿ ನೀಡಿದ್ದರು. ಇದನ್ನು ಪ್ರಶ್ನಿಸಿ ಬಂದ ಅರ್ಜಿಯ ಕುರಿತು ತನಿಖೆ ಮಾಡಲು ಇಲಾಖೆ, ಜಿಲ್ಲಾ ಪ್ರಧಾನ ನಿವೃತ್ತ ನ್ಯಾಯಾಧೀಶರನ್ನು ನೇಮಕ ಮಾಡಿತ್ತು. ಕಲಬುರಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಚೇರಿ ಸಹ ಬಿ.ಕೆ.ನಂದನೂರ 41 ಶಾಲೆಗಳಿಗೆ ನಿಯಮಬಾಹಿರವಾಗಿ ಅನುಮತಿ ನೀಡಿದ್ದಾರೆ ಅದರಲ್ಲಿ 14 ಶಾಲೆಗಳ ಅನುಮತಿಯನ್ನು ಇಲಾಖೆ ತಿರಸ್ಕಾರ ಮಾಡಿದ್ದರೂ ಆಡಳಿತ ಮಂಡಳಿಗಳ ಮನವಿಯ ಮೇರೆಗೆ ಅನುಮತಿ ನೀಡಿದ್ದರು ಎಂಬುದನ್ನು ಪುರಸ್ಕರಿಸಿದೆ. ನಿವೃತ್ತ ನ್ಯಾಯಾಧೀಶರು ತನಿಖೆ ಮಾಡಿ ನೀಡಿದ ವರದಿಯ ಮೇಲೆ ಧಾರವಾಡದ ಶಿಕ್ಷಣ ಇಲಾಖೆ ಮೇಲಾಧಿಕಾರಿಗಳ ಸೂಚನೆಯಂತೆ ಬಿ.ಕೆ.ನಂದನೂರ ಅವರನ್ನು ಕಡ್ಡಾಯ ನಿವೃತ್ತಿಗೊಳಿಸಿದೆ. ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯರಾಗಿದ್ದ ಬಿ.ಕೆ.ನಂದನೂರ ಇದೇ ಮೇ 31ರಂದು ಸೇವೆಯಿಂದ ನಿವೃತ್ತಿ ಹೊಂದುವವರಿದ್ದರು. ಆದರೆ ಅಷ್ಟರಲ್ಲಿ ಇಂತಹ ಘಟನೆ ನಡೆದಿದೆ. ಇವರ ಪತ್ನಿ ಜಾಸ್ಮಿನ್ ಕಿಲ್ಲೇದಾರ ಹುನಗುಂದ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

# ಎನ್.ಎಸ್.ಎಸ್. ಶಿಬಿರ ಉದ್ಘಾಟನೆ ಇಂದು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಬಸವತೀರ್ಥ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಮೇ. 10ರಂದು ಬೆಳಗ್ಗೆ ರಾಷ್ಟ್ರೀಯ ಸೇವಾ ಯೋಜನೆ ಶಿಬಿರಕ್ಕೆ ಚಾಲನೆ ನೀಡಲಾಗುವುದು ಎಂದು ಎಸ್.ಬಿ.ಸಿ.ಎಸ್. ಮತ್ತು ಎಸ್.ವಿ. ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರನಾಥಪ್ಪ ತಿಳಿಸಿದ್ದಾರೆ.



ಈ ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಉದ್ಘಾಟಿಸಲಿದ್ದಾರೆ. ಮೇ. 10ರಿಂದ ಮೇ. 16ರ ವರೆಗೆ ನಡೆಯಲಿದೆ. ಹೀಗಾಗಿ ರಾಷ್ಟ್ರೀಯ ಸೇವಾ ಯೋಜನೆ ಶಿಬಿರಾರ್ಥಿಗಳು ಸೂಕ್ತ ಸಮಯಕ್ಕೆ ಹಾಜರಾಗಿ ಕಾರ್ಯಕ್ರಮ ಯಶಸ್ವಿ ಮಾಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಮಲನಗರ: ತಾಲೂಕಿನ ಹೊಳಸಮುದ್ರ ಗ್ರಾಮದ ಶ್ರೀಜಾ ಎನ್ ಪಾಟೀಲ್ ಇವರು ಎಸ್ ಎಸ್ ಎಲ್ ಸಿ ಯಲ್ಲಿ ಶೇ.99.50 ಪಡೆದು ರಾಜ್ಯಕ್ಕೆ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಹಾಗೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದುವುದಕ್ಕಾಗಿ ಗ್ರಾಮದ ಸಮ್ಮುಖದಲ್ಲಿ ಶ್ರೀ ಸದ್ಗುರು ಹರಿನಾಥ ಮಹಾರಾಜ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

# ಭಾರತದ ಧಾರ್ಮಿಕ ಕೇಂದ್ರಗಳ ಗುರಿಯಾಗಿಸಿ ಪಾಕ್ ದಾಳಿ: ಕೇಂದ್ರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಮೇ.9: ಪಾಕಿಸ್ತಾನವು ಭಾರತದ ಧಾರ್ಮಿಕ ಕೇಂದ್ರಗಳನ್ನು ಗುರಿಯಾಗಿಸಿ ದಾಳಿ ನಡೆಸಿದೆ. ಜಮ್ಮು–ಕಾಶ್ಮೀರದ ಗಡಿಯುದ್ದಕ್ಕೂ ಹಲವಾರು ಗುರುದ್ವಾರಗಳು, ಕಾನ್ವೆಂಟ್‌ಗಳು ಮತ್ತು ದೇವಾಲಯಗಳು ಪಾಕಿಸ್ತಾನದ ಶೆಲ್ ದಾಳಿಯಿಂದ ಹಾನಿಗೊಳಗಾಗಿವೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ಪೂಜಾಸ್ಥಳಗಳನ್ನು ಗುರಿಯಾಗಿಸಿಕೊಂಡು ಶೆಲ್ ದಾಳಿ ನಡೆಸಿರುವುದು ಪಾಕಿಸ್ತಾನದ ಕೀಳುಮಟ್ಟದ ಮನೋಭಾವವನ್ನು ತೋರಿಸುತ್ತದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಬೇಸರ ಹೊರಹಾಕಿದ್ದಾರೆ.

ಮೇ 7 ರಂದು ಪಾಕಿಸ್ತಾನದ ಗಡಿಯಲ್ಲಿ ನಡೆದ ಗುಂಡಿನ ದಾಳಿಯನ್ನು ಖಂಡಿಸಿದ ಮಿಶ್ರಿ, ನಿಯಂತ್ರಣ ರೇಖೆಯುದ್ದಕ್ಕೂ ಭಾರೀ ಶೆಲ್ ದಾಳಿ ನಡೆಸುತ್ತಿದ್ದಾಗ, ಪಾಕಿಸ್ತಾನದಿಂದ ಹಾರಿಸಲಾದ ಶೆಲ್ ಪೂಂಚ್‌ನಲ್ಲಿರುವ ಮೇರಿ ಇಮ್ಯಾಕ್ಯುಲೇಟ್ ಸಭೆಯ ಕಾರ್ಮಲೈಟ್‌ಗಳು ನಡೆಸುತ್ತಿರುವ ಕ್ರೈಸ್ಟ್ ಶಾಲೆಯ ಹಿಂದೆ ಬಿದ್ದಿತು. ಪಾಕಿಸ್ತಾನದಿಂದ ಹಾರಿಸಲಾದ ಶೆಲ್ ಕ್ರೈಸ್ಟ್ ಶಾಲೆಯ ಇಬ್ಬರು ವಿದ್ಯಾರ್ಥಿಗಳ ಮನೆಗೆ ಬಡಿದಿದೆ ಎಂದು ತಿಳಿಸಿದ್ದಾರೆ.



ಮದರ್ ಕಾರ್ಮೆಲ್ ಸಭೆಗೆ ಸೇರಿದ ಕ್ರೈಸ್ತ ಸನ್ಯಾಸಿನಿಯರ ಕಾನ್ವೆಂಟ್ ಮೇಲೆ ಪಾಕಿಸ್ತಾನದ ಮತ್ತೊಂದು ಶೆಲ್ ದಾಳಿ ನಡೆದು, ನೀರಿನ ಟ್ಯಾಂಕ್‌ಗಳಿಗೆ ಹಾನಿಯಾಗಿದೆ. ಸೌರ ಫಲಕ ಮೂಲಸೌಕರ್ಯಗಳನ್ನು ನಾಶವಾಗಿದೆ. ಪಾಕಿಸ್ತಾನ ಶೆಲ್ ದಾಳಿಯ ಸಮಯದಲ್ಲಿ ಸನ್ಯಾಸಿಗಳು, ಶಾಲಾ ಸಿಬ್ಬಂದಿ ಮತ್ತು ಸ್ಥಳೀಯ ನಿವಾಸಿಗಳು ಶಾಲೆಯ ಕೆಳಗಿರುವ ಭೂಗತ ಸಭಾಂಗಣದಲ್ಲಿ ಆಶ್ರಯ ಪಡೆದರು. ಘಟನೆಯಲ್ಲಿ ಯಾವುದೇ ಹೆಚ್ಚಿನ ಹಾನಿಯಾಗಿಲ್ಲ ಎಂದು ಮಿಶ್ರಿ ಮಾಹಿತಿ ನೀಡಿದ್ದಾರೆ.

# ಆರ್ಥಿಕತೆ ಕುಸಿತ:ಹಣಕಾಸಿನ ನೆರವಿಗಾಗಿ ಪಾಕ್ ಮನವಿ

ಇಸ್ಲಾಮಾಬಾದ್, ಮೇ 9: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಭೀಕರ ನರಮೇಧಕ್ಕೆ ಪ್ರತಿಯಾಗಿ ಭಾರತದ ದಾಳಿಗೆ ಕಂಗಾಲಾಗಿರುವ ಪಾಕಿಸ್ತಾನ ಇದೀಗ ಆರ್ಥಿಕತೆಯಲ್ಲೂ ಪಾತಾಳಕ್ಕೆ ಕುಸಿಯುತ್ತಿದೆ. ಮೊದಲೇ ಆರ್ಥಿಕವಾಗಿ ಬಸವಳಿದಿದ್ದ ಪಾಕ್ ಭಾರತದ ದಾಳಿಯಿಂದ ಭಾರೀ ಹೊಡೆತಕ್ಕೆ ಸಿಲುಕಿದ್ದು, ಇದೀಗ ಸಾರ್ವಜನಿಕ ವೇದಿಕೆಯಲ್ಲೇ ಹಣ ನೀಡುವಂತೆ ಗೋಗರೆದಿದೆ.

ಪಾಕಿಸ್ತಾನದ ಅಧಿಕೃತ ಖಾತೆಯಲ್ಲಿ ಇಂತಹುದೊಂದು ಟ್ವಿಟ್ ಅನ್ನು ಪಾಕಿಸ್ತಾನ ಸರ್ಕಾರ ಪೋಸ್ಟ್ ಮಾಡಿದೆ. (ಆರ್ಥಿಕ ವ್ಯವಹಾರಗಳ ವಿಭಾಗ, ಪಾಕಿಸ್ತಾನ ಸರ್ಕಾರ) ಎಂಬ ಪಾಕಿಸ್ತಾನ ಸರ್ಕಾರದ ಅಧಿಕೃತ ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿ, ಕುಸಿಯುತ್ತಿರುವ ನಮ್ಮ ಆರ್ಥಿಕತೆಗೆ ನಮ್ಮ ಅಂತಾರಾಷ್ಟ್ರೀಯ ಪಾಲುದಾರರು ಹಣಕಾಸಿನ ನೆರವು ನೀಡುವಂತೆ ಗೋಗರೆದಿದೆ.

ಪಾಕಿಸ್ತಾನ ಸರ್ಕಾರದ ಆರ್ಥಿಕ ವ್ಯವಹಾರಗಳ ವಿಭಾಗದ ಅಧಿಕೃತ ಖಾತೆಯ ತನ್ನ ಟ್ವಿಟ್‌ನಲ್ಲಿ, ನಮ್ಮ ಶತ್ರುಗಳಿಂದ ಉಂಟಾದ ಭಾರೀ ನಷ್ಟದ ನಂತರ ಹೆಚ್ಚಿನ ಸಾಲಕ್ಕಾಗಿ ಪಾಕಿಸ್ತಾನ ಸರ್ಕಾರವು ಅಂತರರಾಷ್ಟ್ರೀಯ ಪಾಲುದಾರರಿಗೆ ಮನವಿ ಮಾಡುತ್ತಿದೆ.

# ಜನಾರ್ದನರೆಡ್ಡಿ ಶಾಸಕತ್ವ ಅನರ್ಹ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮೇ 9: ಸಿಬಿಐ ನ್ಯಾಯಾಲಯದಿಂದ ಶಿಕ್ಷೆಗೆ ಒಳಗಾಗಿರುವ ಮಾಜಿ ಸಚಿವ ಮತ್ತು ಗಂಗಾವತಿ ವಿಧಾನಸಭಾ ಕ್ಷೇತ್ರದ ಚುನಾಯಿತ ಪ್ರತಿನಿಧಿಯಾಗಿದ್ದ ಜಿ. ಜನಾರ್ದನ ರೆಡ್ಡಿ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಲಾಗಿದೆ. ಜನಾರ್ದನರೆಡ್ಡಿ ಅವರ ಶಾಸಕಸ್ಥಾನ ಅನರ್ಹಗೊಂಡಿರುವ ಹಿನ್ನೆಲೆಯಲ್ಲಿ ಗಂಗಾವತಿ ವಿಧಾನಸಭಾ ಕ್ಷೇತ್ರದ ಸದಸ್ಯ ಸ್ಥಾನ ತೆರವಾಗಿದೆ ಎಂದು ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಿಬಿಐ ನ್ಯಾಯಾಲಯವು ಶಿಕ್ಷೆ ಪ್ರಕಟಿಸಿರುವ ಮೇ 6ರಿಂದ ಜಾರಿಗೆ ಬರುವಂತೆ ಜನಾರ್ದನರೆಡ್ಡಿ ಅವರು ವಿಧಾನಸಭೆಯ ಸದಸ್ಯತ್ವದಿಂದ ಅನರ್ಹರಾಗಿದ್ದಾರೆ. ಸಿಬಿಐ ನ್ಯಾಯಾಲಯದ ಆದೇಶಕ್ಕೆ ನ್ಯಾಯಾಲಯದಿಂದ ತಡೆ–ಯಾಜ್ಞೆ ಸಿಗುವವರೆಗೂ ಶಾಸಕತ್ವದ ಅನರ್ಹತೆ ಮುಂದುವರೆಯುತ್ತದೆ ಎಂದು ಹೇಳಿದ್ದಾರೆ. 1951ರ ಪ್ರಜಾ ಪ್ರತಿನಿಧಿ ಕಾಯ್ದೆಯ ಸೆಕ್ಷನ್ 8ರ ಹಾಗೂ ಭಾರತ ಸಂವಿಧಾನದ ವಿಧಿ 191(1) (ಇ)ನಿಬಂಧನೆಗಳ ಪ್ರಕಾರ ಜನಾರ್ದನ ರೆಡ್ಡಿ ಅವರು ಜೈಲು ಶಿಕ್ಷೆ ಅನುಭವಿಸಿ ಬಿಡುಗಡೆಯಾದ ನಂತರವೂ 6 ವರ್ಷಗಳ ಕಾಲ ಅವರು ಚುನಾವಣೆಗೆ ಸ್ಪರ್ಧಿಸುವಂತಿಲ್ಲ.



ಅಲ್ಲಿಯವರೆಗೆ ಶಾಸಕತ್ವದ ಅನರ್ಹತೆಯು ಮುಂದುವರಿಯುತ್ತದೆ. ಓಬಳಾಪುರಂ ಮೈನಿಂಗ್ ಕಂಪನಿಯ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಜಿ. ಜನಾರ್ದನ ರೆಡ್ಡಿಗೆ ಏಳು ವರ್ಷ ಜೈಲು ಶಿಕ್ಷೆ ವಿಧಿಸಿ ಸಿಬಿಐ ವಿಶೇಷ ಕೋರ್ಟ್ ಮೇ 6ರಂದು ತೀರ್ಪು ನೀಡಿತ್ತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.